ಬೆಂಗಳೂರು ಸಂಪುಟ: 16 ಸಂಚಿಕೆ: 35 ಪುಟ: 06 ಶುಕ್ರವಾರ 27-12-2024

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ


Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh




ಶೋಕ ಸಾಗರದಲ್ಲಿ ಮಿಂದೆದ್ದ ಸ್ಯಾಂಡಲ್‌ವುಡ್ ↘ ಪುಟ 6

# ಆರ್ಥಿಕ ತಜ್ಞನಿಗೆ ನಾಳೆ ವಿದಾಯ

## ಕಂಬನಿ ಮಿಡಿದ ಗಣ್ಯಾತಿಗಣ್ಯರು; ಶೋಕ ಸಾಗರದಲ್ಲಿ ಭಾರತ






ನವದೆಹಲಿ: ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರು ನಿನ್ನೆ ರಾತ್ರಿ ಉಸಿರಾಟದ ತೊಂದರೆಯಿಂದ ನಿಧನರಾಗಿದ್ದು, ನಾಳೆ ದೆಹಲಿಯ ರಾಜ್ ಘಾಟ್ ಬಳಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ.

ಇಂದು ಮೋತಿಲಾಲ್ ನೆಹರು ಮಾರ್ಗದಲ್ಲಿರುವ ನಿವಾಸದಲ್ಲಿ ಮನಮೋಹನ್ ಸಿಂಗ್ ಅವರ ಪಾರ್ಥೀವ ಶರೀರವನ್ನ ಅಂತಿಮದರ್ಶನಕ್ಕೆ ಇಡಲಾಗಿದೆ. ನಾಳೆ ಬೆಳಿಗ್ಗೆ 8 ಗಂಟೆಯಿಂದ 10ವರೆಗೆ ಎಐಸಿಸಿ ಕಚೇರಿಯಲ್ಲಿ ಪಾರ್ಥೀವ ಶರೀರವನ್ನ ಅಂತಿಮದರ್ಶನಕ್ಕೆ ಇಡಲಾಗುತ್ತದೆ. ರಾಜಕೀಯ ನಾಯಕರು ಅಂತಿಮ ನಮನ ಸಲ್ಲಿಸಲಿದ್ದಾರೆ.

ಬಳಿಕ ಎಐಸಿಸಿ ಕಚೇರಿಯಿಂದಲೇ ಮನಮೋಹನ್ ಸಿಂಗ್ ಅವರ ಅಂತಿಮಯಾತ್ರೆ ಆರಂಭವಾಗಲಿದ್ದು ರಾಜಘಾಟ್ ನಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಲಿದೆ. ಅಲ್ಲದೆ, ಮನಮೋಹನ್ ಸಿಂಗ್ ಅವರ ನಿಧನದ ಹಿನ್ನೆಲೆಯಲ್ಲಿ ಸರ್ಕಾರ 7 ದಿನಗಳ ರಾಷ್ಟ್ರೀಯ ಶೋಕಾಚರಣೆಯನ್ನು ಘೋಷಿಸಿದೆ. ಮತ್ತೊಂದೆಡೆ, ಕಾಂಗ್ರೆಸ್ ಕೂಡ ಇಂದು ತನ್ನ ಎಲ್ಲಾ ಕಾರ್ಯಕ್ರಮಗಳನ್ನು ರದ್ದುಗೊಳಿಸಿದೆ.

ನವದೆಹಲಿ: ದೇಶದ ಹೊಸ ಆರ್ಥಿಕ ನೀತಿಯ ರೂವಾರಿ, ಮಾಜಿ ಪ್ರಧಾನಿ ಡಾ .ಮನಮೋಹನ್ ಸಿಂಗ್(92) ಅವರು ಉಸಿರಾಟದ ತೊಂದರೆಯಿಂದ ದೆಹಲಿಯ ಏಮ್ಸ್ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದು. ಈ ಹಿಂದೆ ಹಲವು ಬಾರಿ ಅನಾರೋಗ್ಯಕ್ಕೆ ಒಳಗಾಗಿದ್ದ ಮನಮೋಹನ್ ಸಿಂಗ್ ಹೃದಯ ಶಸ್ತ್ರ ಚಿಕಿತ್ಸೆಗೂ ಒಳಗಾಗಿದ್ದರು. ನಿನ್ನೆ ರಾತ್ರಿ 8 ಗಂಟೆ ಸಮಯದಲ್ಲಿ ದೆಹಲಿಯ ಏಮ್ಸ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಮನ್ ಮೋಹನ್ ಸಿಂಗ್ ಅವರು 2004 ರಿಂದ 2014 ರವರಗೆ ದೇಶದ ಪ್ರಧಾನ ಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. ಮನ್ ಮೋಹನ್ ಸಿಂಗ್ ಅವರು ಆರ್ಥಿಕ ಸುಧಾರಣೆ, ಜಾಗತೀಕರಣ ನೀತಿಗಳ ಹರಿಕಾರ ಎಂದು ಖ್ಯಾತರಾಗಿದ್ದರು.

ಗುರುಮಖ್ ಸಿಂಗ್ ಅಮೃತ್ ಕೌರ್ ದಂಪತಿಯ ಮಗನಾಗಿ 26-09-1932 ರಲ್ಲಿ ಪಂಜಾಬಿನ ಗಾಹ್ ನಲ್ಲಿ ಜನಿಸಿದ ಮನ್ ಮೋಹನ್ ಸಿಂಗ್ ಪ್ರಾಥಮಿಕ ಶಿಕ್ಷಣ ಉರ್ದುವಿನಲ್ಲಿ ಪಡೆದಿದ್ದರು. ಭಾರತ ವಿಭಜನೆ ನಂತರ 1948 ರಲ್ಲಿ ಅಮೃತಸರಕ್ಕೆ ಸ್ಥಳಾಂತರರಾಗಿದ್ದ ಮನ್ ಮೋಹನ್ ಸಿಂಗ್, ಹಿಂದೂ ಕಾಲೇಜಿನಲ್ಲಿ ಪಿಯುಸಿ ಅಧ್ಯಯನ, 1952 ರಲ್ಲಿ ಪದವಿ, 1954 ರಲ್ಲಿ ಸ್ನಾತಕೋತ್ತರ ಪದವಿ, ಕೇಂಬ್ರಿಡ್ಜ್,ಆಕ್ಸ್‌ಫರ್ಡ್ ವಿವಿಗಳಲ್ಲಿ ಉನ್ನತ ವ್ಯಾಸಂಗ ಪೂರ್ಣಗೊಳಿಸಿದ್ದರು. 1959 ರಲ್ಲಿ ಪಂಜಾಬ್ ವಿ.ವಿಯಲ್ಲಿ ಉಪನ್ಯಾಸಕರಾಗಿ ವೃತ್ತಿ ಜೀವನ ಆರಂಭಿಸಿ 1963 ರಿಂದ 1965 ರವರಗೆ ಅರ್ಥಶಾಸ್ತ್ರ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದರು. ಬಳಿಕ ವಿದೇಶಾಂಗ ವ್ಯವಹಾರ ಸಚಿವಾಲಯದಲ್ಲಿ ಸಲಹೆಗಾರರಾಗಿ ಸೇವೆ ಸಲ್ಲಿಸಿದರು. 1972 ರಲ್ಲಿ ಹಣಕಾಸು ಸಚಿವಾಲಯದ ಆರ್ಥಿಕ ಸಲಹೆಗಾರರಾಗಿ ಸೇವೆ, 1776 ಹಸಕಾಸು ಸಚಿವಾಲಯದ ಕಾರ್ಯದರ್ಶಿಯಾಗಿ ಸೇವೆ, 1982 ರಿಂದ 1985 ರಿಸರ್ವ್ ಬ್ಯಾಂಕ್ ಗೌವರ್ನರ್ ಆಗಿ ಸೇವೆ ಸಲ್ಲಿಕೆ ಮಾಡಿದ್ದರು. 1985 -87 ಯೋಜನಾ ಆಯೋಗದ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ನಂತರ 1991 ರಲ್ಲಿ ಅರ್ಥ ಸಚಿವರಾಗಿ ರಾಜಕೀಯ ಜೀವನ ಆರಂಭಿಸಿದ ಮನ್ ಮೋಹನ್ ಸಿಂಗ್, ಆರ್ಥಿಕ ಬಿಕ್ಕಟ್ಟಿನಲ್ಲಿದ್ದ ಭಾರತವನ್ನ ಹಂತ ಹಂತವಾಗಿ ಮೇಲೇರಿಸಿದ್ದರು. 2004 ರಿಂದ 2014 ರವರಗೆ ಸತತ 10 ವರ್ಷಗಳ ಕಾಲ ದೇಶದ ಪ್ರಧಾನಿಯಾಗಿ ದೇಶವನ್ನ ಮುನ್ನಡೆಸಿದ್ದರು. ನೆಹರು ಬಳಿಕ ಎರಡನೇ ಬಾರಿಗೆ ಮರು ಆಯ್ಕೆಯಾದ ಮೊದಲ ಪ್ರಧಾನಿ ಮನ್ ಮೋಹನ್ ಸಿಂಗ್ ಆಗಿದ್ದರು. 1990 ರ ದಶಕದಲ್ಲಿ ಭಾರತದ ಆರ್ಥಿಕ ಇತಿಹಾಸದಲ್ಲಿ ಹೊಸ ತಿರುವಿಗೆ ಕಾರಣಕರ್ತರಾದ ಸಿಂಗ್, 1990 ರಿಂದ 1996 ರ ವರೆಗೆ ಕೇಂದ್ರ ಹಣಕಾಸು ಸಚಿವರಾಗಿದ್ದರು. ಆ ಸಂಧರ್ಭದಲ್ಲಿ ಇವರು ಮಾಡಿದ ಆರ್ಥಿಕ ಸುಧಾರಣೆ, ದೂರದೃಷ್ಟಿ ಈಗಲೂ ವಿಶ್ವ ಮನ್ನಣೆ ಸಿಕ್ಕಿದೆ. 1991 ರಿಂದ 2024 ರವರಗೆ ಮೇಲ್ಮನೆಯ ಖಾಯಂ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು.



ಜನನ: 26-09-1932
ಮರಣ: 26-12-2024

# ಡಾ. ಮನಮೋಹನ್‌ಸಿಂಗ್‌ಗೆ ರಾಜಕೀಯ ನಾಯಕರಿಂದ ಅಂತಿಮ ನಮನ

**ನವದೆಹಲಿ:** ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ಇತರ ನಾಯಕರು ಶುಕ್ರವಾರ ಬೆಳಗ್ಗೆ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿವಾಸಕ್ಕೆ ಭೇಟಿ ನೀಡಿ ಶ್ರದ್ಧಾಂಜಲಿ ಸಲ್ಲಿಸಿದರು. ಜೊತೆಗೆ ಕುಟುಂಬದವರಿಗೆ ಸಾಂತ್ವನ ಹೇಳಿದರು. ಗುರುವಾರ ರಾತ್ರಿ ಇಹಲೋಕ ತ್ಯಜಿಸಿದ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರಿಗೆ ರಾಜಕೀಯ ಕ್ಷೇತ್ರದ ಅನೇಕ ನಾಯಕರು ಸಂತಾಪ ಸೂಚಿಸಿದರು. ತೀವ್ರ ದುಃಖ ವ್ಯಕ್ತಪಡಿಸಿರುವ ಪ್ರಧಾನಿ ಮೋದಿ, ರಾಷ್ಟ್ರದ ಪ್ರಗತಿಗೆ ಡಾ. ಸಿಂಗ್ ಅವರ ಅಪಾರ ಕೊಡುಗೆಯನ್ನು ಶ್ಲಾಘಿಸಿದರು.

"ಡಾ. ಮನಮೋಹನ್ ಸಿಂಗ್ ನಾಯಕರಾಗಿ ಅವರ ಸಮಗ್ರತೆ ಹಾಗೂ ದೃಷ್ಟಿಕೋನ ಭಾರತದ ಇತಿಹಾಸದಲ್ಲಿ ಶಾಶ್ವತವಾಗಿ ಉಳಿಯುತ್ತದೆ" ಎಂದು ಪ್ರಧಾನಿ ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಅಂತಿಮ ನಮನ ಸಲ್ಲಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಡಾ. ಸಿಂಗ್ ಒಬ್ಬ ರಾಜನೀತಿಜ್ಞ ಮತ್ತು ಭಾರತದ ಆಧುನಿಕ ಆರ್ಥಿಕ ನೀತಿಗಳನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ಒಬ್ಬ ಶ್ರೇಷ್ಠ ಅರ್ಥ ಶಾಸ್ತ್ರಜ್ಞ ಎಂದು ಹೇಳಿದರು. ಉಳಿದಂತೆ



ಕಾಂಗ್ರೆಸ್ ನಾಯಕರಾದ ರಾಜ್ಯಸಭಾ ಸದಸ್ಯೆ ಸೋನಿಯಾ ಗಾಂಧಿ, ಸಂಸದ ರಾಹುಲ್ ಗಾಂಧಿ, ಹಾಗೂ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಡಾ. ಸಿಂಗ್ ನಿವಾಸಕ್ಕೆ ಭೇಟಿ ನೀಡಿ ಅಂತಿಮ ನಮನ ಸಲ್ಲಿಸಿದರು. ಹಾಗೂ ಕುಟುಂಬದವರಿಗೆ ಸಾಂತ್ವನ ಹೇಳಿದರು.

ಬಿಜೆಪಿ ಅಧ್ಯಕ್ಷ ಮತ್ತು ಕೇಂದ್ರ ಸಚಿವ ಜೆ.ಪಿ.ನಡ್ಡಾ ಅವರು ಗೌರವ ಸಲ್ಲಿಸಿ, ಡಾ.ಸಿಂಗ್ ಅವರು ವೃತ್ತಿಜೀವನದುದ್ದಕ್ಕೂ ಸಾರ್ವಜನಿಕ ಸೇವೆಗೆ ತೋರಿಸಿದ ಬದ್ಧತೆಯನ್ನು ಒತ್ತಿ ಹೇಳಿದರು. ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಮುಖ್ಯಸ್ಥ ಮೋಹನ್ ಭಾಗವತ್ ಕೂಡ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನಕ್ಕೆ ಶುಕ್ರವಾರ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಆರ್‌ಎಸ್‌ಎಸ್ ಅಧಿಕೃತ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, "ಮಾಜಿ ಪ್ರಧಾನಿ ಮತ್ತು ಹಿರಿಯ ನಾಯಕ ಡಾ. ಸರ್ದಾರ್ ಮನಮೋಹನ್ ಸಿಂಗ್ ಅವರ ನಿಧನದಿಂದ ಇಡೀ ರಾಷ್ಟ್ರಕ್ಕೆ ತೀವ್ರ ದುಃಖವಾಗಿದೆ. ಅವರ ಕುಟುಂಬಕ್ಕೆ ಮತ್ತು ಅಸಂಖ್ಯಾತ ಅಭಿಮಾನಿಗಳಿಗೆ ರಾಷ್ಟ್ರೀಯ ಸ್ವಯಂಸೇವಕ ಸಂಘವು ತೀವ್ರ ಸಂತಾಪವನ್ನು ವ್ಯಕ್ತಪಡಿಸುತ್ತದೆ. ವಿನಮ್ರ ಹಿನ್ನೆಲೆಯಿಂದ ಬೆಳೆದ ಸಿಂಗ್, ದೇಶದ ಅತ್ಯುನ್ನತ ಹುದ್ದೆಯನ್ನು ಅಲಂಕರಿಸಿದ್ದರು" ಎಂದು ಬರೆದಿದ್ದಾರೆ. ಡಾ.ಮನಮೋಹನ್ ಸಿಂಗ್ ಅವರ ವೃತ್ತಿ ಪರಂಪರೆಯನ್ನು ಗೌರವಿಸುವ ಸಲುವಾಗಿ ಕೇಂದ್ರ ಸರ್ಕಾರ ಜನವರಿ 1ರವರೆಗೆ ಏಳು ದಿನಗಳು ರಾಷ್ಟ್ರೀಯ ಶೋಕಾಚರಣೆಯನ್ನು ಘೋಷಿಸಿದೆ. ಗೃಹ ಸಚಿವಾಲಯ ಹೊರಡಿಸಿದ ಅಧಿಸೂಚನೆಯಲ್ಲಿ, ಈ ಏಳು ದಿನಗಳ ಕಾಲ ರಾಷ್ಟ್ರಧ್ವಜವನ್ನು ಅರ್ಧಕ್ಕೆ ಇಳಿಸಲು ಹಾಗೂ ಎಲ್ಲಾ ಮನರಂಜನಾ ಕಾರ್ಯಕ್ರಮಗಳನ್ನು ರದ್ದುಗೊಳಿಸುವಂತೆ ಎಲ್ಲಾ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಲಾಗಿದೆ.ಅವರ ದಶಕಗಳ ಸೇವೆಗಾಗಿ ರಾಷ್ಟ್ರ ಸಲ್ಲಿಸುವ ಕೃತಜ್ಞತೆ ಹಾಗೂ ಗೌರವದ ಪ್ರತೀಕವಾಗಿ ಸಂಪೂರ್ಣ ಸರ್ಕಾರಿ ಗೌರವಗಳೊಂದಿಗೆ ಮನಮೋಹನ್ ಸಿಂಗ್ ಅವರ ಅಂತಿಮ ವಿಧಿಗಳು ನಡೆಯಲಿವೆ.

# ಮನಮೋಹನ್ ಸಿಂಗ್ ನಿಧನ, ಶ್ರದ್ಧಾಂಜಲಿ ಸಲ್ಲಿಸಿದ ಆರ್‌ಬಿಐ

**ನವದೆಹಲಿ:** ಭಾರತದ ಆರ್ಥಿಕ ಸುಧಾರಣೆಗಳ ಶಿಲ್ಪಿ ಮನಮೋಹನ್ ಸಿಂಗ್ ಅವರ ಕೊಡುಗೆಗಳು ಅಳಿಸಲಾಗದ ಛಾಪು ಮೂಡಿಸಿವೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಅಗಲಿದ ಆತ್ಮಕ್ಕೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.ಮಾಜಿ ಪ್ರಧಾನಿ ಮತ್ತು ಹಣಕಾಸು ಸಚಿವರಾಗಿದ್ದ ಸಿಂಗ್ ಅವರು 1982 ಮತ್ತು 1985 ರ ನಡುವೆ ಆರ್‌ಬಿಐ ಗವರ್ನರ್ ಆಗಿಯೂ ಸೇವೆ ಸಲ್ಲಿಸಿದ್ದರು.




ಮಾಜಿ ಪ್ರಧಾನಿ, ದಾರ್ಶನಿಕ ಅರ್ಥಶಾಸ್ತ್ರಜ್ಞ ಮತ್ತು ಮಾಜಿ ಆರ್‌ಬಿಐ ಗವರ್ನರ್ ಡಾ. ಮನಮೋಹನ್ ಸಿಂಗ್ ಅವರ ನಿಧನದ ಬಗ್ಗೆ ನಾನು ತೀವ್ರ ದುಃಖಿತನಾಗಿದ್ದೇನೆ. ಭಾರತದ ಆರ್ಥಿಕ ಸುಧಾರಣೆಗಳ ಶಿಲ್ಪಿಯಾಗಿ ಅವರ ಕೊಡುಗೆಗಳು ಅಳಿಸಲಾಗದ ಗುರುತು ಬಿಟ್ಟಿವೆ ಎಂದು ಮಲ್ಹೋತ್ರಾ ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ಹೇಳಿದ್ದಾರೆ.

1991 ರಲ್ಲಿ ಸಿಂಗ್ ಅವರು ಹಣಕಾಸು ಸಚಿವಾಲಯದ ಅಧಿಕಾರವನ್ನು ವಹಿಸಿಕೊಂಡಾಗ, ಭಾರತದ ವಿತ್ತೀಯ ಕೊರತೆಯು ಜಿಡಿಪಿಯ ಶೇಕಡಾ 8.5 ರ ಸಮೀಪದಲ್ಲಿತ್ತು, ಪಾವತಿಗಳ ಬಾಕಿ ಕೊರತೆಯು ದೊಡ್ಡದಾಗಿತ್ತು ಮತ್ತು ಚಾಲ್ತಿ ಖಾತೆ ಕೊರತೆಯು ಜಿಡಿಪಿಯ ಶೇ. 3.5 ರ ಸಮೀಪದಲ್ಲಿತ್ತು.

ವಿಷಯಗಳನ್ನು ಇನ್ನಷ್ಟು ಹದಗೆಡಿಸಲು, ವಿದೇಶಿ ಮೀಸಲು ಎರಡು ವಾರಗಳ ಆಮದುಗಳಿಗೆ ಪಾವತಿಸಲು ಸಾಕಾಗಿತ್ತು, ಇದು ಭಾರತೀಯ ಆರ್ಥಿಕತೆಯು ಆಳವಾದ ಬಿಕ್ಕಟ್ಟಿನಲ್ಲಿದೆ ಎಂದು ಸೂಚಿಸುತ್ತದೆ. ಈ ಹಿನ್ನೆಲೆಯಲ್ಲಿ ಸಿಂಗ್ ಅವರು ಮಂಡಿಸಿದ ಕೇಂದ್ರ ಬಜೆಟ್ 1991–92 ಮೂಲಕ ಹೊಸ ಆರ್ಥಿಕ ಯುಗವನ್ನು ತೆರೆದಿತ್ತು.

ಸ್ವತಂತ್ರ ಭಾರತದ ಆರ್ಥಿಕ ಇತಿಹಾಸದಲ್ಲಿ ಇದು ಒಂದು ಮಹತ್ವದ ತಿರುವು, ಇದು ದಿಟ್ಟ ಆರ್ಥಿಕ ಸುಧಾರಣೆಗಳು, ಪರವಾನಗಿ ರಾಜ್ ರದ್ದತಿ ಮತ್ತು ಖಾಸಗಿ ಆಟಗಾರರಿಗೆ ಮತ್ತು ವಿದೇಶಿ ಆಟಗಾರರಿಗೆ ಬಂಡವಾಳ ಹರಿದುಬರಲು ಅನೇಕ ಕ್ಷೇತ್ರಗಳನ್ನು ತೆರೆಯಲು ಸಾಕ್ಷಿಯಾಗಿದೆ.ಸಿಂಗ್ ಅವರು 2004–09 ಮತ್ತು 2009–14ರಲ್ಲಿ ಸತತ ಎರಡು ಅವಧಿಗೆ ದೇಶದ ಪ್ರಧಾನಿಯಾಗಿ ಸೇವೆ ಸಲ್ಲಿಸಿದರು. ಅವರು ಪತ್ನಿ ಗುರುಶರಣ್ ಕೌರ್ ಮತ್ತು ಮೂವರು ಪುತ್ರಿಯರನ್ನು ಅಗಲಿದ್ದಾರೆ

# ನಾನು ಓರ್ವ ಮಾರ್ಗದರ್ಶಕನನ್ನು ಕಳೆದುಕೊಂಡಿದ್ದೇನೆ

**ನವದೆಹಲಿ:** 'ನಾನು ನನ್ನ ಜೀವಮಾನದ ಓರ್ವ ಮಾರ್ಗದರ್ಶಕನನ್ನು ಕಳೆದುಕೊಂಡಿದ್ದೇನೆ' ಎಂದು ಮಾಜಿ ಪ್ರಧಾನಿ, ಆರ್ಥಿಕ ತಜ್ಞ ಮನಮೋಹನ್ ಸಿಂಗ್ ನಿಧನಕ್ಕೆ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ವಿಶೇಷ ರೀತಿಯಲ್ಲಿ ಕಂಬನಿ ಮಿಡಿದಿದ್ದಾರೆ. ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ರಾಹುಲ್ ಗಾಂಧಿ, ಸಿಂಗ್ ಅವರೊಂದಿಗಿನ ಕೆಲವು ಘಟನಾವಳಿಗಳ ಸಹಿತ ಸಂತಾಪ ಸೂಚಿಸಿದ್ದಾರೆ.



'ಸಿಂಗ್ ಅವರು ಭಾರತವನ್ನು ಅಪಾರ ಬುದ್ಧಿವಂತಿಕೆ ಮತ್ತು ಸಮಗ್ರತೆಯಿಂದ ಮುನ್ನಡೆಸಿದವರು. ಅವರ ನಮ್ರತೆ ಮತ್ತು ಅರ್ಥಶಾಸ್ತ್ರದ ಆಳವಾದ ತಿಳಿವಳಿಕೆಯು ರಾಷ್ಟ್ರವನ್ನು ಉನ್ನತ ಮಟ್ಟಕ್ಕೆ ಏರುವಂತೆ ಮಾಡಿದೆ. ನಾನು ಒಬ್ಬ ಮಾರ್ಗದರ್ಶಕರನ್ನು ಕಳೆದುಕೊಂಡಿದ್ದೇನೆ. ಅವರನ್ನು ದೇಶದ ಕೋಟ್ಯಂತರ ಮಂದಿ ನೆನಪಿಸಿಕೊಳ್ಳುತ್ತಾರೆ. ಅವರ ಮಾರ್ಗದರ್ಶನಕ್ಕೆ ನಾನು ಸದಾ ಚಿರಋಣಿ. ಸಿಂಗ್ ಅವರ ಪತ್ನಿ ಹಾಗೂ ಕುಟಂಬಕ್ಕೆ ನಾನು ಸಂತಾಪ ಸೂಚಿಸುತ್ತೇನೆ' ಎಂದು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ.

**ದೂರ ದೃಷ್ಟಿಯುಳ್ಳ ರಾಜನೀತಿ ತಜ್ಞನನ್ನು ಕಳೆದುಕೊಂಡಿದ್ದೇವೆ – ಖರ್ಗೆ:**

ಅದೇ ರೀತಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೂಡ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದು 'ಮಾಜಿ ಪ್ರಧಾನಿ ನಿಧನದಿಂದ ದೂರ ದೃಷ್ಟಿಯುಳ್ಳ ರಾಜನೀತಿ ತಜ್ಞನನ್ನು ಕಳೆದುಕೊಂಡಿದ್ದೇವೆ. ದೇಶದ ಆರ್ಥಿಕತೆಗೆ ಅವರು ನೀಡಿದ ಕೊಡುಗೆ ಎಂದಿಗೂ ಮರೆಯಲಾಗದು. ಅವರ ಆರ್ಥಿಕ ಉದಾರೀಕರಣ ನೀತಿಗಳು ಮತ್ತು ಹಕ್ಕುಗಳ ಆಧಾರಿತ ಕಲ್ಯಾಣ ಮಾದರಿಯು ಕೋಟ್ಯಂತರ ಭಾರತೀಯರ ಜೀವನವನ್ನು ಗಾಢವಾಗಿ ಪರಿವರ್ತಿಸಿದೆ. ರಾಷ್ಟ್ರ ನಿರ್ಮಾಣಕ್ಕೆ ಅವರು ನೀಡಿರುವ ಕೊಡುಗೆ ಭಾರತೀಯ ಇತಿಹಾಸದಲ್ಲಿ ಅಚ್ಚಳಿಯದೆ ಉಳಿಯುವಂತೆ ಮಾಡಿದೆ. ಅವರ ನೀತಿಗಳು ಲಕ್ಷಾಂತರ ಜನರನ್ನು ಬಡತನದಿಂದ ಹೊರತಂದಿವೆ' ಎಂದು ಬರೆದುಕೊಂಡಿದ್ದಾರೆ. 'ಅವರೊಂದಿಗೆ ಕೆಲಸ ಮಾಡಿರುವುದು ನನಗೆ ಹೆಮ್ಮೆ ತಂದಿದೆ. ರಾಷ್ಟ್ರ ನಿರ್ಮಾಣಕ್ಕೆ ಅವರ ಕೊಡುಗೆ ಅಪಾರ. ಮಾತುಗಳಿಗಿಂತ ಕ್ರಿಯಾಶೀಲ ವ್ಯಕ್ತಿಯಾಗಿದ್ದರು. ಭಾರತಕ್ಕಾಗಿ ನೀಡಿದ ಅವರ ಕೊಡುಗೆ ಯಾವಾಗಲೂ ಶಾಶ್ವತ. ಸಿಂಗ್ ಅವರ ಕುಟುಂಬ, ಸ್ನೇಹಿತರು ಮತ್ತು ಅಭಿಮಾನಿಗಳಿಗೆ ನನ್ನ ಸಂತಾಪಗಳು' ಎಂದು ಸಹ ಹೇಳಿಕೊಂಡಿದ್ದಾರೆ.

ಸರ್ದಾರ್ ಮನಮೋಹನ್ ಸಿಂಗ್ ಯಾವಾಗಲೂ ನಮಗೆ ಸ್ಫೂರ್ತಿ– ಪ್ರಿಯಾಂಕಾ: ಸಂಸದೆ ಪ್ರಿಯಾಂಕಾ ಗಾಂಧಿ ಕೂಡ ಸಂತಾಪ ಸೂಚಿಸಿದ್ದಾರೆ. 'ಸರ್ದಾರ್ ಮನಮೋಹನ್ ಸಿಂಗ್ ಅವರ ಪ್ರಾಮಾಣಿಕತೆ ಯಾವಾಗಲೂ ನಮಗೆ ಸ್ಫೂರ್ತಿ. ತಮ್ಮ ವಿರೋಧಿಗಳಿಂದ ತೀವ್ರ ದಾಳಿಗೆ ಒಳಗಾದರೂ ರಾಷ್ಟ್ರ ಸೇವೆಗೆ ಧೃಢವಾಗಿ ನಿಂತಿದ್ದರು. ಈ ದೇಶವನ್ನು ನಿಜವಾಗಿಯೂ ಪ್ರೀತಿಸುವವರಲ್ಲಿ ಅವರು ಶಾಶ್ವತವಾಗಿ ನಿಲ್ಲುತ್ತಾರೆ. ಅವರು ನಿಜವಾದ ಸಮಾನತಾವಾದಿ, ಬುದ್ಧಿವಂತ, ಧೈರ್ಯಶಾಲಿಯಾಗಿದ್ದರು. ರಾಜಕೀಯದ ಒರಟು ಜಗತ್ತಿನಲ್ಲಿ ವಿಶಿಷ್ಟವಾದ ಘನತೆ ಮತ್ತು ಸೌಮ್ಯ ವ್ಯಕ್ತಿ' ಎಂದು ಹೇಳಿಕೊಂಡಿದ್ದಾರೆ. ಕಾಂಗ್ರೆಸ್ ಮುಖಂಡ ಶಶಿ ತರೂರ್ ಸೇರಿದಂತೆ ಹಲವು ಕೈ ನಾಯಕರು ಸಿಂಗ್ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. 'ಇದು ಅತ್ಯಂತ ದುರಂತ. ಅವರು ರಾಷ್ಟ್ರಕ್ಕೆ ಸೇವೆ ಸಲ್ಲಿಸಿದ ಮಹಾನ್ ಪ್ರಧಾನಿಯಾಗಿದ್ದರು. ನಾವು ನಮ್ಮ ಎಲ್ಲಾ ಕಾರ್ಯಕ್ರಮಗಳನ್ನು ರದ್ದುಪಡಿಸಿ ದೆಹಲಿಗೆ ಧಾವಿಸುತ್ತಿದ್ದೇವೆ' ಎಂದು ಶಶಿ ತರೂರ್ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.ಭಾರತ ಕಂಡ ಶ್ರೇಷ್ಠ ಅರ್ಥ ಶಾಸ್ತ್ರಜ್ಞರಲ್ಲಿ ಒಬ್ಬರು ಹಾಗೂ ಒಂದು ದಶಕದ ಕಾಲ ದೇಶದ ಪ್ರಧಾನಿಯಾಗಿದ್ದ ಡಾ. ಮನಮೋಹನ್ ಸಿಂಗ್ ಗುರುವಾರ ರಾತ್ರಿ ನವದೆಹಲಿಯ ಏಮ್ಸ್ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ.

# "ಹೆದರದೆ ಪತ್ರಿಕಾಗೋಷ್ಠಿ ಎದುರಿಸಿದ" ದೇಶದ ಕಡೆ ಪ್ರಧಾನಿ..!

**ಮೈಸೂರು:** ನಂಬಿದ್ರೆ ನಂಬಿ ಬಿಟ್ರೆ ಬಿಡಿ, ಇದು ನಿಜವಾಗ್ಲು ನಿಜ. ಹೌದು ಭಾರತದ ಪ್ರಧಾನಿ ಪತ್ರಕರ್ತರ ಜತೆ ಮಾಧ್ಯಮಗೋಷ್ಠಿ ನಡೆಸುತ್ತಿದ್ದರು ಅಂದ್ರೆ ನೀವ್ ನಂಬಲೇ ಬೇಕು. ಕಾರಣ ಒಂದು ದಶಕಗಳಿಂದ ಈಚೆಗೆ ಇಂಥ ಸಂಪ್ರದಾಯ ಜಾರಿಯಲಿಲ್ಲ. ಹಾಗಾಗಿ ನವ ಪತ್ರಕರ್ತರಿಗೆ ಪ್ರಧಾನಿ ಪತ್ರಿಕಾಗೋಷ್ಠಿ ನಡೆಸುತ್ತಿದ್ದರು ಅಂದ್ರೆ ನಂಬಲು ಅಸಾಧ್ಯ, ಆದ್ದರಿಂದ ಈ ಉಪಮೇಯ.


'ನಾನು ಮಾಧ್ಯಮಗಳಿಗೆ ಹೆದರುವ ಪ್ರಧಾನಿ ಅಲ್ಲ'. ಸುಮಾರು ಹನ್ನೊಂದು ವರ್ಷಗಳ ಹಿಂದೆ ಅಂದಿನ ಪ್ರಧಾನಿ ಮನಮೋಹನ ಸಿಂಗ್ ಅವರು 100ಕ್ಕೂ ಹೆಚ್ಚು ಪತ್ರಕರ್ತರ ಎದುರು ಕೂತು ಹೇಳಿದ ಮಾತಿದು. 2025 ನೇ ಜನವರಿ 3 ನೇ ತಾರೀಖು ಬಂದರೆ, ಭಾರತದ ಪ್ರಧಾನಿ ನಡೆಸಿದ ಆ ವಿಶೇಷ ಮಾಧ್ಯಮಗೋಷ್ಠಿ ನಡೆದು ಸರಿಯಾಗಿ ಹನ್ನೊಂದು ವರ್ಷ ತುಂಬುತ್ತದೆ. ಹೌದು, 2014ರ ಜನವರಿ 3ರಂದು ನಡೆದ ಮಾಧ್ಯಮ ಗೋಷ್ಠಿ ಮಹತ್ವದ್ದು. ಏಕೆಂದರೆ ದೇಶದ ಪ್ರಧಾನಿಯೊಬ್ಬರು ದೇಶದೊಳಗೆ ನಡೆಸಿದ ಕೊನೆಯ ಮಾಧ್ಯಮಗೋಷ್ಠಿ ಅದು. 100ಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಪತ್ರಕರ್ತರು ಕಿಕ್ಕಿರಿದು ಕೂತಿದ್ದ ಸಭಾಂಗಣದಲ್ಲಿ ಅವರೆಲ್ಲರಿಗೂ ಎದುರಾಗಿ ಮನಮೋಹನ ಸಿಂಗ್ ಕುಳಿತಿದ್ದರು. ಯಾವುದೇ ಪಟಲಾಂಗಳಾಗಲಿ ಅಥವಾ ಟೆಲಿ ಪ್ರಾಂಪಟರ್ ಗಳ ವ್ಯವಸ್ಥೆಗಳಾಗಲಿ ಆಗ ಇರಲಿಲ್ಲ ಎಂಬುದು ಮುಖ್ಯ.



2ಜಿ ಹಗರಣ, ಕಲ್ಲಿದ್ದಲು ಹಗರಣ, ಭ್ರಷ್ಟಾಚಾರದ ಅರೋಪ, ನಿರ್ಭಯಾ ಪ್ರಕರಣಗಳು ಜನಮಾನಸದಲ್ಲಿ ಇನ್ನೂ ಗಟ್ಟಿಯಾಗಿದ್ದ ಸಮಯ. ವಿಪಕ್ಷಗಳು, ಸಾಮಾಜಿಕ ಕಾರ್ಯಕರ್ತರು ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಡುತ್ತಿದ್ದರು. ಈ ಎಲ್ಲಕ್ಕೂ ಸಂಬಂಧಿಸಿದ ಪ್ರಶ್ನಾಬಾಣಗಳನ್ನು ಬತ್ತಳಿಕೆಯಲ್ಲಿ ಇರಿಸಿಕೊಂಡು ಬಂದಿದ್ದ ಪತ್ರಕರ್ತರು ಒಂದುಕಡೆ, ಏಕಾಂಗಿಯಾಗಿ ಕುಳಿತಿದ್ದ ಪ್ರಧಾನಿ ಮತ್ತೊಂದು ಕಡೆ. ಆಗಲೇ ಪ್ರಧಾನಿ ಮನಮೋಹನ ಸಿಂಗ್ ಅವರು ಹೇಳಿದ್ದು, 'ನಾನು ಮಾಧ್ಯಮಗಳಿಗೆ ಹೆದರುವ ಪ್ರಧಾನಿ ಅಲ್ಲ' ಎಂದು.ಮನಮೋಹನ್ ಸಿಂಗ್ ಅವರು ದೇಶದ ಪ್ರಧಾನಿಯಾದ ನಂತರ ಎದುರಿಸಿದ 117ನೇ ಮತ್ತು ಕೊನೆಯ ಮಾಧ್ಯಮಗೋಷ್ಠಿ ಅದು. ಅನಂತರ ದೇಶದ ಪ್ರಧಾನಿ ಒಂದೂ ಮಾಧ್ಯಮಗೋಷ್ಠಿ ನಡೆಸಲೇ ಇಲ್ಲಾ.

ಸಿಂಗ್ ಅವರನ್ನು 'ಸೋನಿಯಾ ಅವರ ಕೈಗೊಂಬೆ', 'ಮೌನಿ ಸಿಂಗ್', 'ಅಕ್ಸಿಡೆಂಟಲ್ ಪ್ರೈಮ್ ಮಿನಿಸ್ಟರ್' ಎಂದು ಜರೆಯಲಾಗುತ್ತಿತ್ತು. ಇದು ಈಗಲೂ'ೋಷಿಯಲ್ ಮೀಡಿಯಾಗಳಲ್ಲಿ ಆಗಾಗ್ಗೆ ಕಾಣಿಸಿಕೊಳ್ಳುತ್ತಿರುತ್ತದೆ. ಅಂದು ನಡೆದ ಮಾಧ್ಯಮಗೋಷ್ಠಿ ಈ ಜರೆಯುವಿಕೆಗಿಂತ ಭಿನ್ನವಾಗೇನೂ ಇರಲಿಲ್ಲ. ಅಲ್ಲಿ ಮನಮೋಹನ ಸಿಂಗ್ ಅವರಿಗೆ ಒಟ್ಟು 62 ಪ್ರಶ್ನೆಗಳನ್ನು ಕೇಳಲಾಗಿತ್ತು. ಆದರೆ ಅವ್ಯಾವುವೂ 'ಸ್ಕ್ರಿಪ್ಟೆಡ್ " ಪ್ರಶ್ನೆಗಳಾಗಿರಲಿಲ್ಲ. ಪ್ರತಿ ಪ್ರಶ್ನೆಯೂ ಅವರತ್ತ ಎಸೆದ ಮೊನಚಿನ ಬಾಣಗಳಾಗಿದ್ದವು. ಅವರ ಅಧಿಕಾರದ ಸತ್ಯಾಸತ್ಯತೆಯನ್ನು ಪ್ರಶ್ನಿಸಿದವು.

# ದೇಶವನ್ನು ಆರ್ಥಿಕ ಮುಗ್ಗಟ್ಟಿನಿಂದ ಪಾರು ಮಾಡಿದ್ದು ಮನಮೋಹನ್ ಸಿಂಗ್



ಬೆಳಗಾವಿ: ಭಾರತವನ್ನ ಆರ್ಥಿಕ ಮುಗ್ಗಟ್ಟಿನಿಂದ ಪಾರು ಮಾಡಿ, ದೇಶವನ್ನ ಒಂದು ಗೌರವ ಸ್ಥಾನದಲ್ಲಿ ನಿಲ್ಲಿಸಿದ್ದು ಮಾಜಿ ಪ್ರಧಾನಿ ಮೋಹನ್ ಸಿಂಗ್ ಅವರು. ಅವರ ಆತ್ಮಕ್ಕೆ ಶಾಂತಿ ಕೋರುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ನುಡಿದರು.

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಸಾಧನೆ ಸ್ಮರಿಸಿದ ಸಿಎಂ ಸಿದ್ಧರಾಮಯ್ಯ, ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಇವತ್ತಿನ ಪಾಕಿಸ್ತಾನದ ಕುಗ್ರಾಮದಲ್ಲಿ ಜನಿಸಿದವರು. ಅಲ್ಲಿಂದ ದೇಶದ ಖ್ಯಾತ ಅರ್ಥಶಾಸ್ತ್ರಜರಾದರು. ಸಿಂಗ್ ಅವರು ಪವಾಡದ ರೀತಿ ಬದುಕಿದವರು. ಜಗತ್ತಿನ ಶ್ರೇಷ್ಠ ಅರ್ಥಶಾಸ್ತ್ರಜ್ಞರಾಗಿ ಬೆಳೆದರು. ಭಾರತವನ್ನ ಆರ್ಥಿಕ ಮುಗ್ಗಟ್ಟಿನಿಂದ ಪಾರು ಮಾಡಿದರು. ಅಲ್ಲದೆ ಆರ್ಥಿಕವಗಿ ಸಾಮಾಜಿಕವಾಗಿ ದೇಶವನ್ನ ಮುಂದೆ ತಂದರು. ಸಿಂಗ್ ರು ಪ್ರಾಮಾಣಿಕ ಪ್ರಧಾನಿಗಳಲ್ಲಿ ಒಬ್ಬರು . ಮನ್ ಮೋಹನ್ ಸಿಂಗ್ ಅವರ ಕಾರ್ಯದಿಂಧ ದೇಶದ ಆರ್ಥಿಕ ಮುಗ್ಗಟ್ಟು ನಿವಾರಣೆಯಾಯಿತು ಎಂದರು.

2004 ರಲ್ಲಿ ಕಾಂಗ್ರೆಸ್ ಬಹುಮತ ಗಳಿಸಿದಾಗ ಸೋನಿಯಾ ಗಾಂಧಿ ಅವರು ಪ್ರಧಾನಿಯಾಗಲು ನಿರಾಕರಿಸಿದರು. ಈ ವೇಳೆ ಮನಮೋಹನ್ ಸಿಂಗ್ ಅವರು ದೇಶದ ಪ್ರಧಾನಿಯಾದರು.

ದೇಶದಲ್ಲಿ ಅನೇಕ ಜನಪರ ಯೋಜನೆಗಳನ್ನು ಜಾರಿ ಮಾಡಿದರು. ಸಿಂಗ್ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥನೆ ಮಾಡುತ್ತೇನೆ. ಅವರ ಕುಟುಂಬಕ್ಕೆ ದುಃಖ ಬರಿಸುವ ಶಕ್ತಿ ನೀಡಲಿ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.



ಜೆಡಿಎಸ್ ಪಕ್ಷದ ರಾಜ್ಯ ಕಚೇರಿ ಜೆಪಿ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ.ಮನಮೋಹನ್ ಸಿಂಗ್ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಮಾಜಿ ಪ್ರಧಾನಿಗಳಾದ ಶ್ರೀ ಹೆಚ್.ಡಿ ದೇವೇಗೌಡರು ಭಾಗಿಯಾಗಿದ್ದರು.

# ಸಿಂಗ್ ಅವರ ನಿಧನಕ್ಕೆ ಕುಮಾರಸ್ವಾಮಿ ಕಂಬನಿ

ಬೆಂಗಳೂರು: ಭಾರತದ ಮಾಜಿ ಪ್ರಧಾನಮಂತ್ರಿಗಳಾದ ಡಾ.ಮನಮೋಹನ್ ಸಿಂಗ್ ಅವರ ನಿಧನಕ್ಕೆ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಕಂಬನಿ ಮಿಡಿದಿದ್ದಾರೆ.



ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು; ಭಾರತದ ಮಾಜಿ ಪ್ರಧಾನಮಂತ್ರಿಗಳು, ಪ್ರಖ್ಯಾತ ವಿತ್ತತಜ್ಞರು, ಆರ್ಥಿಕ ಸುಧಾರಣೆಗಳ ಹರಿಕಾರರೂ ಆಗಿದ್ದ ಡಾ.ಮನಮೋಹನ್ ಸಿಂಗ್ ಅವರ ನಿಧನದ ವಾರ್ತೆ ಕೇಳಿ ಬಹಳ ದುಃಖವಾಯಿತು ಎಂದು ತಿಳಿಸಿದ್ದಾರೆ.

ದೂರದೃಷ್ಟಿ, ಸಂಯಮ ಮತ್ತು ತಮ್ಮ ಆರ್ಥಿಕ ಮೇದಸ್ಸಿನಿಂದ ರಾಷ್ಟ್ರವನ್ನು ದುರಿತ ಕಾಲದಲ್ಲಿ ಸಶಕ್ತವಾಗಿ ಮುನ್ನಡೆಸಿದ್ದ ಮನಮೋಹನ್ ಸಿಂಗ್ ಅವರು ದೇಶಕ್ಕೆ ನೀಡಿರುವ ಕೊಡುಗೆ ಅಪಾರ. ಆರ್ಥಿಕ ಸುಧಾರಣೆಗಳ ಮೂಲಕ ಭಾರತಕ್ಕೆ ಜಾಗತಿಕ ಮನ್ನಣೆ ತಂದುಕೊಟ್ಟವರು ಅವರು. ಅವರ ಕೊಡುಗೆಗಳು ಚಿರಸ್ಮರಣೀಯ ಎಂದಿರುವ ಕೇಂದ್ರ ಸಚಿವರು; ಸಿಂಗ್ ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಹಾಗೂ ಈ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಕ್ಕೆ, ಅಭಿಮಾನಿಗಳಿಗೆ ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ ಎಂದಿದ್ದಾರೆ.



# ಮನಮೋಹನ್ ಸಿಂಗ್ ನಿಧನ: ಖ್ಯಾತ ತಾರೆಯರಿಂದ ಸಂತಾಪ


ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರು ಡಿಸೆಂಬರ್ 26, 2024 ರಂದು ತಮ್ಮ 92ನೇ ವಯಸ್ಸಿನಲ್ಲಿ ಕೊನೆಯುಸಿರೆಳೆದರು. ದೂರದೃಷ್ಟಿಯ ಮಹಾನ್ ನಾಯಕನ ನಿಧನ ರಾಷ್ಟ್ರದ ಮೇಲೆ ಭಾರೀ ಪ್ರಭಾವ ಬೀರಿದೆ. 2004 ರಿಂದ 2014ರವರೆಗೆ ಸತತ ಎರಡು ಅವಧಿಗೆ ಪ್ರಧಾನಿಯಾಗಿ ಸೇವೆ ಸಲ್ಲಿಸಿರುವ ಸಿಂಗ್, ದೇಶದ ಬೆಳವಣಿಗೆಯ ಪಥವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಭಾರತ ಕಂಡ ಶ್ರೇಷ್ಠ ಆರ್ಥಿಕ ತಜ್ಞನ ನಿಧನಕ್ಕೆ ಜನಸಾಮಾನ್ಯರೂ ಸೇರಿದಂತೆ ರಾಷ್ಟ್ರದಾದ್ಯಂತ ವಿವಿಧ ಕ್ಷೇತ್ರಗಳ ಗಣ್ಯರು ಕಂಬನಿ ಮಿಡಿದಿದ್ದಾರೆ. ಭಾರತೀಯ ಚಿತ್ರರಂಗ ಕೂಡಾ ಇದರಿಂದ ಹೊರತಲ್ಲ.

ಡಾಲಿ ಧನಂಜಯ್ ಸಂತಾಪ: ಕನ್ನಡ ಚಿತ್ರರಂಗದ ಖ್ಯಾತ ನಟ ಡಾಲಿ ಧನಂಜಯ್ ಮನಮೋಹನ್ ಸಿಂಗ್ ಫೋಟೋ ಹಂಚಿಕೊಂಡು, ಕೈಮುಗಿಯುವ ಎಮೋಜಿ ಬಳಸಿ ತಮ್ಮ ಸಂತಾಪ ಸೂಚಿಸಿದ್ದಾರೆ.

ಚಿರಂಜೀವಿ ಪೋಸ್ಟ್: ತೆಲುಗು ಮೆಗಾಸ್ಟಾರ್ ಚಿರಂಜೀವಿ ಅವರೂ ಕೂಡಾ ತಮ್ಮ ದುಃಖ ವ್ಯಕ್ತಪಡಿಸಿದ್ದಾರೆ. ಸಿಂಗ್ ಅವರನ್ನು 'ನಮ್ಮ ದೇಶ ನಿರ್ಮಿಸಿದ ಶ್ರೇಷ್ಠ ರಾಜಕಾರಣಿಗಳಲ್ಲಿ ಒಬ್ಬರು' ಎಂದು ಉಲ್ಲೇಖಿಸಿದ್ದಾರೆ. "ಭಾರತದ 13ನೇ ಪ್ರಧಾನ ಮಂತ್ರಿಯಾಗಿ ಸತತ ಎರಡು ಅವಧಿಗೆ ಅವರ ಅತ್ಯಂತ ಯಶಸ್ವಿ ಅಧಿಕಾರಾವಧಿಯು ಇತಿಹಾಸದಲ್ಲಿ ಉಳಿಯುತ್ತದೆ" ಎಂದು ಬರೆದುಕೊಂಡಿದ್ದಾರೆ. ಮನಮೋಹನ್ ಸಿಂಗ್ ಅವರ ಅಧಿಕಾರಾವಧಿಯಲ್ಲಿ ಸಂಸದರಾಗಿ ಸೇವೆ ಸಲ್ಲಿಸಿದ ಕ್ಷಣಗಳನ್ನು ನೆನಪಿಸಿಕೊಂಡಿದ್ದಾರೆ. ಅಲ್ಲು ಅರ್ಜುನ್ ಕಂಬನಿ: ಪುಷ್ಪ 2 ಸ್ಟಾರ್ ಅಲ್ಲು ಅರ್ಜುನ್ ಅವರು ಇನ್‌ಸ್ಟಾ ಸ್ಟೋರಿ ಹಂಚಿಕೊಂಡಿದ್ದಾರೆ. ಮಾಜಿ ಪ್ರಧಾನಿಯ ಫೋಟೋ ಶೇರ್ ಮಾಡಿ, "ಅವರ ನಾಯಕತ್ವ ಮತ್ತು ರಾಷ್ಟ್ರಕ್ಕೆ ಅವರ ಸಮರ್ಪಣೆ ಸದಾ ಸ್ಮರಣೆಯಲ್ಲಿರುತ್ತದೆ. ರೆಸ್ಟ್ ಇನ್ ಪೀಸ್ ಸರ್" ಎಂದು ಬರೆದುಕೊಂಡಿದ್ದಾರೆ.

ದಿಲ್ಜಿತ್ ದೋಸಾಂಜ್ ದುಃಖ: ಪಂಜಾಬಿ ಗಾಯಕ–ನಟ ದಿಲ್ಜಿತ್ ದೋಸಾಂಜ್ ತಮ್ಮ ಇನ್‌ಸ್ಟಾಗ್ರಾಮ್ ಸ್ಟೋರಿನಲ್ಲಿ ಸಿಂಗ್ ಅವರ ಫೋಟೋದೊಂದಿಗೆ "ಓ ವಹೆಗುರು" ಎಂದು ಬರೆದು ತಮ್ಮ ದುಃಖ ವ್ಯಕ್ತಪಡಿಸಿದ್ದಾರೆ. ಕಪಿಲ್ ಶರ್ಮಾ ಪೋಸ್ಟ್: ಕಾಮಿಡಿಯನ್, ನಟ ಕಪಿಲ್ ಶರ್ಮಾ ಕೂಡಾ ಸೋಷಿಯಲ್ ಮೀಡಿಯಾದಲ್ಲಿ, "ಭಾರತ ಇಂದು ತನ್ನ ಅತ್ಯುತ್ತಮ ನಾಯಕರಲ್ಲಿ ಒಬ್ಬರನ್ನು ಕಳೆದುಕೊಂಡಿದೆ. ಭಾರತದ ಆರ್ಥಿಕ ಸುಧಾರಣೆಗಳ ವಾಸ್ತುಶಿಲ್ಪಿ ಮತ್ತು ಸಮಗ್ರತೆ, ನಮ್ರತೆಯ ಸಂಕೇತವಾದ ಡಾ.ಮನಮೋಹನ್ ಸಿಂಗ್ ಅವರು ಭರವಸೆ, ಪ್ರಗತಿಯ ಪರಂಪರೆಯನ್ನು ಬಿಟ್ಟು ಹೋಗಿದ್ದಾರೆ" ಎಂದು ತಿಳಿಸಿದ್ದಾರೆ. ಅವರ ಈ ಪೋಸ್ಟ್, ಸಿಂಗ್ ಅವರ ಆರ್ಥಿಕ ಬೆಳವಣಿಗೆಯ ಪರಂಪರೆ ಮತ್ತು ದೂರದೃಷ್ಟಿಯ ನಾಯಕತ್ವವನ್ನು ಒತ್ತಿಹೇಳಿತು.

# ಮನಮೋಹನ್ ಸಿಂಗ್ ಅಂತಿಮ ದರ್ಶನ ಪಡೆದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ



**ನವದೆಹಲಿ:** ಉಸಿರಾಟ ತೊಂದರೆಯಿಂದ ನಿಧನರಾದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಪಾರ್ಥಿವ ಶರೀರದ ಅಂತಿಮದರ್ಶನವನ್ನ ಹಲವು ಗಣ್ಯಾತೀಗಣ್ಯರು ಪಡೆಯುತ್ತಿದ್ದಾರೆ.

ದೆಹಲಿಯ ಮೋತಿಲಾಲ್ ನೆಹರು ಮಾರ್ಗ ನಿವಾಸದಲ್ಲಿ ಪಾರ್ಥಿವ ಶರೀರವನ್ನು ಅಂತಿಮ ದರ್ಶನಕ್ಕೆ ಇಡಲಾಗಿದ್ದು ಕಾಂಗ್ರೆಸ್ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕ ಗಾಂಧಿ ಅವರು ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದುಕೊಂಡಿದ್ದಾರೆ.

ಇನ್ನು ಕಾಂಗ್ರೆಸ್ ನಾಯಕ ಕೆಸಿ ವೇಣುಗೋಪಾಲ್ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಸೇರಿ ಹಲವರು ಅಂತಿಮ ನಮನ ಸಲ್ಲಿಸಿದರು.

ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದುಕೊಂಡಿದ್ದು, ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಾರೆ.

# ಭಾರತ ಆರ್ಥಿಕವಾಗಿ ಬೆಳೆಯಲು ಮನಮೋಹನ್ ಸಿಂಗ್ ಭದ್ರ ಬುನಾದಿ ಹಾಕಿದ್ದರು: ಬಸವರಾಜ ಬೊಮ್ಮಾಯಿ

ಹುಬ್ಬಳ್ಳಿ: ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರು ನಿಧನ ಹೊಂದಿರುವ ಸುದ್ದಿ ಕೇಳಿ ಅತ್ಯಂತ ದುಖ ಉಂಟು ಮಾಡಿದೆ. ಆರ್ಥಿಕ ತಜ್ಞರಾಗಿ, ಪ್ರಧಾನ ಮಂತ್ರಿಯಾಗಿ ಹತ್ತು ವರ್ಷಗಳ ಕಾಲ ದೇಶವನ್ನು ಮುನ್ನಡೆಸಿದ್ದರು. ದೇಶದ ಆರ್ಥಿಕತೆಗೆ ದೊಡ್ಡ ಬದಲಾವಣೆ ತಂದಿದ್ದರು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಸಂತಾಪ ವ್ಯಕ್ತಪಡಿಸಿದ್ದಾರೆ. ಮನಮೋಹನ್ ಸಿಂಗ್ ಅವರು ಅಂತಾರಾಷ್ಟ್ರೀಯ ಸಂಸ್ಥೆಗಳಾದ ವಿಶ್ವ ಸಂಸ್ಥೆ, ಐಎಂಎಫ್ ನಲ್ಲಿ ಒಳ್ಳೆಯ ಸಂಪರ್ಕ ಇಟ್ಟುಕೊಂಡಿದ್ದರಿಂದ ಈ ದೇಶವನ್ನು ಉಳಿಸಲು ಸಾಧ್ಯವಾಯಿತು. ರಿಸರ್ವ್ ಬ್ಯಾಂಕ್ ಗೌರ್ನರ್ ಆಗಿ ಕೆಲಸ ಮಾಡಿದ್ದು, ಈ ದೇಶದಲ್ಲಿ ಹಲವಾರು ಯೋಜನೆಗಳನ್ನು ಜಾರಿಗೆ ತರಲು ಕಾರಣವಾಗಿದೆ. ದೇಶ ಆರ್ಥಿಕವಾಗಿ ಇಷ್ಟು ದೊಡ್ಡ ಮಟ್ಟದಲ್ಲಿ ಬೆಳೆಯಲು ಮನಮೋಹನ್ ಸಿಂಗ್ ಭದ್ರ ಬುನಾದಿ ಹಾಕಿದ್ದಾರೆ ಎಂದು ತಿಳಿಸಿದ್ದಾರೆ. ಮನಮೋಹನ್ ಸಿಂಗ್ ಅವರು ಅತ್ಯಂತ ಸಜ್ಜನ ರಾಜಕಾರಣಿ ಆಗಿದ್ದರು. ಒಬ್ಬ ಮುತ್ಸದ್ದಿ ರಾಜಕಾರಣಿಯನ್ನು ದೇಶ ಕಳೆದುಕೊಂಡಿದೆ. ಅವರು ದೇಶಕ್ಕಾಗಿ ಸದಾ ಚಿಂತನೆ ಮಾಡುತ್ತಿದ್ದರು. ಹಲವಾರು ದೂರದೃಷ್ಟಿಯ ನಿರ್ಣಯಗಳನ್ನು ತೆಗೆದುಕೊಂಡಿದ್ದರು. ಅದರ ಲಾಭ ಈಗ ದೇಶಕ್ಕೆ ಆಗುತ್ತಿದೆ. ಅವರು ಪ್ರಚಾರ ಪ್ರೀಯ ರಾಜಕಾರಣ ಮಾಡಿರಲಿಲ್ಲ, ವಾಸ್ತವ ರಾಜಕಾರಣ ಮಾಡಿದ್ದರು. ಕೆಲವು ಅಪ್ರೀಯವಾದ ನಿರ್ಣಯಗಳನ್ನು ದೇಶದ ಹಿತ ದೃಷ್ಟಿಯಿಂದ ತೆಗೆದುಕೊಂಡಿದ್ದರು. ಅವರ ಗಟ್ಟಿ ನಿಲುವು, ಧಿಮಂತಿಕೆಯ ಗುಣ ಹಲವಾರು ಸಂದರ್ಭಗಳಲ್ಲಿ ಗೊತ್ತಾಗುತ್ತದೆ. ಭಾರತ ಚೀನಾ, ಅಮೇರಿಕಾ, ಯುರೋಪ್ ದೇಶಗಳಿಗೆ ಪೈಪೋಟಿ ಕೊಡಲು ಮನಮೊಹನ್ ಸಿಂಗ್ ಅವರು ಭದ್ರ ಬುನಾದಿ ಹಾಕಿದ್ದರು ಎಂದು ತಿಳಿಸಿದ್ದಾರೆ.

ಅಂದಿನ ಪ್ರಧಾನಿ ಪಿ.ವಿ. ನರಸಿಂಹರಾವ್ ಹಾಗೂ



ಅಂದಿನ ಹಣಕಾಸು ಸಚಿವ ಡಾ. ಮನಮೋಹನ್ ಸಿಂಗ್ ಅವರ ನಡುವೆ ಯಾವುದೇ ರೀತಿಯ ರಾಜಕೀಯ ಹೊರೆ ಇರಲಿಲ್ಲ. ಮುಕ್ತವಾದ ವಿಚಾರ ಇದ್ದಿದರಿಂದ ಸ್ಥಾಪಿತವಾದ ವ್ಯವಸ್ಥೆಯನ್ನು ಆಮೂಲಾಗವಾಗಿ ಬದಲಾವಣೆ ಮಾಡಲು ಸಾಧ್ಯವಾಯಿತು. ನಾವು ಯಾರನ್ನು ಆಕಸ್ಮಿಕ ನಾಯಕ ಎಂದು ಕರೆಯುತ್ತೆವೆಯೋ ಅವರಿಂದ ಅಸಮಾನ್ಯ ಕೆಲಸಗಳು ಆಗುತ್ತವೆ. ಅವರಿಗೆ ರಾಜಕೀಯ ಯಾವುದೇ ಕಟ್ಟುಪಾಡುಗಳು, ಒತ್ತಡಗಳು ಇರುವುದಿಲ್ಲ. ದೇಶವನ್ನು ಆರ್ಥಿಕವಾಗಿ ಅಮೂಲಾಗವಾದ ಬದಲಾವಣೆ ಮಾಡಿದರು. ಜಾಗತೀಕರಣ, ಉದಾರಿಕರಣ ಜಾರಿಗೆ ತಂದಿದ್ದರಿಂದ ವಿದೇಶಿ ಬಂಡವಾಳ ಹೆಚ್ಚಾಗಿ ಹರಿದು ಬಂದಿದ್ದರಿಂದ ಆರ್ಥಿಕ ದಿವಾಳಿ ಅಂಚಿನಲ್ಲಿದ್ದ ಭಾರತವನ್ನು ಉಳಿಸಿತು. ಸಣ್ಣ ಮತ್ತು ಮಧ್ಯಮ ಉದ್ಯಮ ಮತ್ತು ದೊಡ್ಡ ಉದ್ಯಮಗಳಿಗೆ ದೊಡ್ಡ ಪ್ರೋತ್ಸಾಹ ಸಿಕ್ಕಿತು. ಅದರ ಜೊತೆಗೆ ಸರ್ಕಾರದಲ್ಲಿ ಆರ್ಥಿಕ ಶಿಸ್ತು ತಂದಿದ್ದರು. ಮಾಹಿತಿ ಹಕ್ಕು ಕಾಯಿದೆ ತಂದು ಜನರಿಗೆ ಮಾಹಿತಿ ಪಡೆಯುವ ಅಧಿಕಾರ ನೀಡಿದರು ಎಂದು ತಿಳಿಸಿದರು.

ಅದರ ಜೊತೆಗೆ ರಾಜಕೀಯ ಶುದ್ದೀಕರಣ ಮಾಡಬೇಕೆಂದು ಕಾನೂನು ತರಲು ಪಯತ್ನ ಮಾಡಿದರು. ಆಗ ಅವರ ಪಕ್ಷದ ನಾಯಕತ್ವ ಅದಕ್ಕೆ ಅವಕಾಶ ಕೊಡಲಿಲ್ಲ. ಅತ್ಯಂತ ಶುದ್ಧ ಹಸ್ತ, ಶುದ್ಧ ಮನಸ್ಸು, ಗಟ್ಟಿಯಾದ ನಿರ್ಣಯ ಕೈಗೊಳ್ಳುತ್ತಿದ್ದರು. ಡಾ. ಮನಮೋಹನ್ ಸಿಂಗ್ ಅವರು ಭಾರತ ಅಮೇರಿಕಾ ಪರಮಾಣು ಒಪಂದ ಮಾಡಿರುವುದು ಮಹತ್ವದ ಸಂಗತಿ. ಅಂತಹ ಕೆಲಸ ಕಾರ್ಯಗಳನ್ನು ಮಾಡಿ, ದೇಶ ಸೇವೆಯನ್ನು ಅತ್ಯಂತ ಪ್ರಮಾಣಿಕವಾಗಿ ಮಾಡಿದ್ದಾರೆ. ಅವರ ವ್ಯಕ್ತಿತ್ವ ಎಲ್ಲ ರಾಜಕಾರಣಿಗಳಿಗೆ ಮಾದರಿ ಎಂದು ಹೇಳಿದರು.।

ಅವರ ಅಗಲಿಕೆ ದೇಶಕ್ಕೆ ತುಂಬಲಾರದ ನಷ್ಟವುಂಟು ಮಾಡಿದೆ. ದೇವರು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ, ಅವರ ಅಗಲಿಕೆಯ ದುಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ಹಾಗೂ ಅವರ ಅಭಿಮಾನಿಗಳಿಗೆ ಭಗವಂತ ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಸಂತಾಪದಲ್ಲಿ ತಿಳಿಸಿದ್ದಾರೆ.

# ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್: ಶಿಡ್ಲಘಟ್ಟದ ಶಶಾಂಕ್–ಕಾವ್ಯಾ ಜೋಡಿ ವಿನ್ನರ್

**ಶಿಡ್ಲಘಟ್ಟ:** ಜೀ ಕನ್ನಡ ವಾಹಿನಿಯ ಜನಪ್ರಿಯ ರಿಯಾಲಿಟಿ ಶೋಗಳಲ್ಲಿ ಒಂದಾದ "ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್" ನ ತನ್ನ ನೃತ್ಯದ ಮೂಲಕ ಶಿಡ್ಲಘಟ್ಟ ನಗರದ ಶಶಾಂಕ್ ಹಾಗೂ ಕಾವ್ಯಾ ಜೋಡಿಗೆ ವಿನ್ನರ್ ಪಟ್ಟ ಸಿಕ್ಕಿದ್ದು ಈ ತಂಡಕ್ಕೆ 15 ಲಕ್ಷ ರೂ.ಗಳ ಮೌಲ್ಯದ ಚಿನ್ನದ ನಾಣ್ಯಗಳು ಮತ್ತು ಅಪ್ಪು ಟ್ರೋಫಿಯನ್ನು ನೀಡಲಾಗಿದೆ.

ರಾಜ್ಯದ ಮನೆ ಮಾತಾಗಿರುವ ಶಿಡ್ಲಘಟ್ಟದ ಶಶಾಂಕ್ ತನ್ನ ಊರು ಶಿಡ್ಲಘಟ್ಟಕ್ಕೆ ಅಪ್ಪು ಟ್ರೋಪಿಯೊಂದಿಗೆ ಆಗಮಿಸಿದ್ದು ರೇಷ್ಮೆ ನಗರಿ ಜನ ಶಶಾಂಕ್ ಗೆ ಅದ್ದೂರಿ ಸ್ವಾಗತ ಕೋರಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ನಗರದ ಸಲ್ಲಾಪುರಮ್ಮ ದೇವಾಲಯದಲ್ಲಿ ಮತ್ತು ಸಿದ್ದಾರ್ಥ ನಗರದ ಶ್ರೀ ಗಂಗಮ್ಮ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಇತ್ತೀಚಿಗೆ 'ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್' ನಲ್ಲಿ ತನ್ನ ನೃತ್ಯದ ಮೂಲಕ ರಾಜ್ಯದ ಮನೆ ಮಾತಾಗಿರುವ ಶಶಾಂಕ್ ಮರಳಿ ಊರಿಗೆ ಬಂದ ಯುವ ಪ್ರತಿಭೆಯನ್ನು ನಗರದ ಬಸ್ ನಿಲ್ದಾಣದಿಂದ ಅಪಾರ ಅಭಿಮಾನಿಗಳು ಅದ್ದೂರಿ ಸ್ವಾಗತವನ್ನು ಕೋರಿದರು.

ಶಿಡ್ಲಘಟ್ಟದ ಕೀರ್ತಿ ಪತಾಕಿಯನ್ನು ಹಾರಿಸಿ ಇಡೀ ರಾಜ್ಯವೇ ತಾಲ್ಲೂಕಿನ ಕಡೆ ನೋಡುವ ಹಾಗೆ ಮಾಡಿ ತನ್ನದೇ ರೀತಿಯಲ್ಲಿ ವಿಭಿನ್ನವಾಗಿ ಗಮನ ಸೆಳೆದ ಶಶಾಂಕ್, ಶಿಡ್ಲಘಟ್ಟ ನಗರದ ಬಸ್ ನಿಲ್ದಾಣದಿಂದ ಅವರ ಅಭಿಮಾನಿಗಳನ್ನು ಒಳಗೊಂಡ ತಂಡ ಪುನೀತ್ ರಾಜ್ ಕುಮಾರ್ ಅವರ ಟ್ರೋಫಿಯನ್ನು ಹಿಡಿದು ನೂರಾರು ಸಂಖ್ಯೆಯಲ್ಲಿ ಮೆರವಣಿಗೆಯಲ್ಲಿ ಸಾಗಿದರು.

**ಮಾಧ್ಯಮದವರೊಂದಿಗೆ ಮಾತನಾಡಿದ ಶಶಾಂಕ್, ನಾನು ಉತ್ತಮ ಸಾಧನೆ ಮಾಡಬೇಕು ಎಂಬುದು ನನ್ನ ತಂದೆಯ ಕನಸಾಗಿತ್ತು ನನ್ನ ಪ್ರಯತ್ನಕ್ಕೆ ಫಲ ಸಿಕ್ಕಿದೆ ನಾನು ಡಿಕೆಡಿಗೆ ಆಯ್ಕೆಯಾದ ಸಂದರ್ಭದಲ್ಲಿ ನನ್ನ ಊರಿನ ಸ್ನೇಹಿತರು ನಾಗರೀಕರು ನನಗೆ ಆಶೀರ್ವಾದವನ್ನು ಮಾಡಿದ್ದಾರೆ ನನಗೆ ಸೂಕ್ತ ಮಾರ್ಗದರ್ಶನ ನೀಡಿದ ಗುರುಗಳು ರುದ್ರ ಮಾಸ್ಟರ್ ಮತ್ತು ಜಿ ಕನ್ನಡ ವಾಹಿನಿಗೆ ಮತ್ತು ನಾನು ವಿನ್ನರ್ ಆಗಲು ವೋಟ್ ಮಾಡಿದ ಎಲ್ಲರಿಗೂ ತುಂಬು ಹೃದಯದ ಕೃತಜ್ಞತೆಯನ್ನು ಸಲ್ಲಿಸುವೆ ಎಂದು ಹೇಳಿದರು.**



**ಶಶಾಂಕ್ ಅವರ ತಾಯಿ ದೇವಿ ಮಾತನಾಡಿ, ನನ್ನ ಮಗನ ಸಾಧನೆ ನನಗೆ ತುಂಬಾ ಸಂತಸ ತಂದುಕೊಟ್ಟಿದೆ ಅವನ ಏಳು ವರ್ಷಗಳ ಕಠಿಣ ಶ್ರಮದಿಂದ ಇಂದು ಜನರ ಮನಸನ್ನು ಗೆದ್ದಿದ್ದಾನೆ,ಅವರ ತಂದೆಯ ಕನಸನ್ನು ನನಸು ಮಾಡಿರುವುದು ಹೆಮ್ಮೆ ತಂದುಕೊಟ್ಟಿದೆ ನನ್ನ ಮಗನಿಗೆ ಸಹಕಾರ ನೀಡಿದ ಎಲ್ಲರಿಗೂ ವಂದನೆಗಳನ್ನು ಅರ್ಪಿಸುತ್ತಾ ನಾನು ಅಭಾರಿಯಾಗಿರುತ್ತೇನೆ ಎಂದು ಹೇಳಿದರು.**

# ಗ್ರಾ.ಪಂ.ಅಭಿವೃದ್ಧಿಯಲ್ಲಿ ಕಂಪ್ಯೂಟರ್ ಆಪರೇಟರ್ ಸೇವೆ ಅನನ್ಯ



ಕುಕನೂರು: ಪ್ರತಿಯೊಂದು ಪಂಚಾಯತ್‌ಗಳ ಅಭಿವೃದ್ಧಿ ನಿಟ್ಟಿನಲ್ಲಿ ಗಣಕಯಂತ್ರ ನಿರ್ವಾಹಕರು (ಕಂಪ್ಯೂಟರ್ ಆಪರೇಟರ್‌ಗಳು) ಅನನ್ಯ ಸೇವೆ ನೀಡುತ್ತಿದ್ದಾರೆ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ್ ಬಿರಾದಾರ್ ಹೇಳಿದರು.

ಕಂಪ್ಯೂಟರ್ ಜನಕ ಚಾರ್ಲ್ಸ್ ಬ್ಯಾಬೇಜ್ ಅವರ ಹುಟ್ಟುಹಬ್ಬದ ಅಂಗವಾಗಿ ಗ್ರಾಮ ಪಂಚಾಯತ್ ಗಳಲ್ಲಿ ಕಾರ್ಯನಿರ್ವಹಿಸುವ ಕಂಪ್ಯೂಟರ್ ಆಪರೇಟರ್‌ಗಳಿಗೆ ಕುಕನೂರು ತಾಲೂಕು ಪಂಚಾಯತ್ ವತಿಯಿಂದ ಸನ್ಮಾನ ಮಾಡಲಾಯಿತು. ಈ ಸಂದರ್ಭದಲಿ ಮಾತನಾಡಿದ ಅವರು, ಪ್ರತಿಯೊಂದು ಪಂಚಾಯತ್‌ಗಳ ಅಭಿವೃದ್ಧಿ ನಿಟ್ಟಿನಲ್ಲಿ ಗಣಕಯಂತ್ರ ನಿರ್ವಾಹಕರು (ಕಂಪ್ಯೂಟರ್ ಆಪರೇಟರ್‌ಗಳು) ಅನನ್ಯ ಸೇವೆ ಮಾಡುತ್ತಿದ್ದಾರೆ. ಅವರ ಸೇವೆಗೆ ಮತ್ತಷ್ಟು ಉತ್ತೇಜನ, ಪ್ರೇರಣೆ ನೀಡಲು ರಾಜ್ಯ ಸರ್ಕಾರದ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ಸೂಚನೆ ಮೇರೇಗೆ ಕಂಪ್ಯೂಟರ್ ಅಪರೇಟರ್‌ಗಳನ್ನು ಸನ್ಮಾನಿಸಿ ಗೌರವಿಸುತ್ತಿದ್ದೇವೆ ಎಂದರು.

ಪಂಚಾಯತ್ ಅಭಿವೃದ್ಧಿಯಲ್ಲಿ ಕಂಪ್ಯೂಟರ್ ಆಪರೇಟರ್ ಗಳ ಕಾರ್ಯ ಮಹತ್ವದ್ದಾಗಿದ್ದು ಗ್ರಾಮ ಪಂಚಾಯತ್ ಗಳಲ್ಲಿ ಸಿಗುವ ನಾಗರೀಕ ಸೇವೆಗಳನ್ನು ಪ್ರತಿಯೊಬ್ಬರಿಗೂ ತಲುಪಿಸುವ ಕಾರ್ಯವನ್ನು ಇವರು ಮಾಡುತ್ತಿದ್ದಾರೆ. ನರೇಗಾ, ಸ್ವಚ್ಛ ಭಾರತ, ಪಂಚತಂತ್ರ, ಲೆಕ್ಕಪತ್ರ ನಿರ್ವಹಣೆ ಸೇರಿದಂತೆ ಗ್ರಾ ಪಂ ನ 24 ಸೇವೆಗಳ ಜೊತೆ ಕಂದಾಯ ಇಲಾಖೆಯ ಹಲವು ಸೇವೆಗಳು ಈಗ ಗ್ರಾಮ ಪಂಚಾಯತ್ ಗಳಲ್ಲಿ ದೊರೆಯುತ್ತಿದ್ದು ಇವೆಲ್ಲಾ ಸೇವೆಗಳ ನಿರ್ವಹಣೆಯನ್ನು ಆಪರೇಟರ್ ಗಳು ಅಚ್ಚುಕಟ್ಟಾಗಿ ನಿಭಾಯಿಸುತ್ತಿದ್ದಾರೆ ಎಂದು ಸಂತೋಷ್ ಬಿರಾದಾರ್ ಹೇಳಿದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ ಶರಣಪ್ಪ ಕೆಳಗಿನಮನಿ, ರಾಜೀವ್ ಗಾಂಧಿ ಫೆಲೋಶಿಪ್ ನ ಸೀಮಾ, ಕುಕನೂರು ತಾಲೂಕಿನ 15 ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಪ್ರತಿಷ್ಠೆಯ ಕಣವಾದ ಕುಕನೂರು ಕೃಷಿ ಪತ್ತಿನ ಚುನಾವಣೆ

**ಕುಕನೂರು:** ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳ ಮದ್ಯೆ ಪ್ರತಿಷ್ಠೆಯ ಕಣವಾಗಿರುವ ಕುಕನೂರು ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ ಹಿನ್ನೆಲೆ ಕಾಂಗ್ರೆಸ್ ಪಕ್ಷದ ಕೆಲವು ಉಸ್ತುವಾರಿಗಳ ಕಾರ್ಯಕ್ಷಮತೆ ಬಗ್ಗೆ ಸ್ವತಃ ಶಾಸಕ ಬಸವರಾಜ್ ರಾಯರಡ್ಡಿ ಅವರು ಅಸಮಾಧಾನ ಹೊರಹಾಕಿದ್ದಾರೆ ಎನ್ನಲಾಗಿದೆ.

ಚುನಾವಣೆ ಕಾರ್ಯತಂತ್ರ ಕುರಿತಂತೆ ಗುರುವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸ್ಥಳೀಯ ಉಸ್ತುವಾರಿಗಳು, ಅಭ್ಯರ್ಥಿಗಳ ಸಭೆ ನಡೆಸಿ ಮಾಹಿತಿ ಪಡೆದುಕೊಂಡ ಶಾಸಕರು ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳ ಅವಿರೋಧ ಆಯ್ಕೆಯ ಬಗ್ಗೆ ಪ್ರಯತ್ನ ಮಾಡಬೇಕಿತ್ತು. ಅವಿರೋಧ ಆಯ್ಕೆಯಾಗುವಂತೆ ಏಕೆ ನೋಡಿಕೊಳ್ಳಲಿಲ್ಲ? ಮೊದಲು ಅವಿರೋದ ಆಯ್ಕೆಯ ಬಗ್ಗೆ ಗಮನ ಹರಿಸಬೇಕಿತ್ತು. ಅಧ್ಯಕ್ಷರ ಆಯ್ಕೆ ನಂತರದ ವಿಷಯ ಎಂದು ಶಾಸಕರು ಕಿವಿಮಾತು ಹೇಳಿದರು ಎನ್ನಲಾಗಿದೆ.

ಚುನಾವಣೆಯ ಮತದಾರರ ಪಟ್ಟಿಯ ಬಗ್ಗೆ ಈಗಾಗಲೇ ಕಾಂಗ್ರೆಸ್ ಪಕ್ಷದ ಹಲವರಿಂದ ತಕರಾರು ವ್ಯಕ್ತವಾಗಿದ್ದು ಅದು ಆಡಳಿತರೂಢ ಕಾಂಗ್ರೆಸ್ ಪಕ್ಷದ ಬೆಂಬಲಿತ ಅಭ್ಯರ್ಥಿಗಳಿಗೆ ಪೂರಕವಾಗಿಲ್ಲ ಎಂಬ ಆತಂಕ ಕಾರ್ಯಕರ್ತರು ಈ ಮೊದಲೇ ವ್ಯಕ್ತಪಡಿಸಿದ್ದರು. ಕಿರಿಯರ ಕೈಯಲ್ಲಿ ಪಕ್ಷದ ಜವಾಬ್ದಾರಿ ಕೊಟ್ಟಿದ್ದು ಈ ಸಣ್ಣ ಚುನಾವಣೆಯಲ್ಲಿ ಹೀಗಾದರೆ ಮುಂದೆ ಹೇಗೆ ಎಂದು ಶಾಸಕರು ಅಸಮಾಧಾನ ಮಾತು ಹೇಳಿದ್ದಾರೆ ಎನ್ನಲಾಗಿದೆ. .

ಇದೇ ಡಿಸೇಂಬರ್ 29 ರಂದು 12 ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು ಕಣದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳ ಮದ್ಯೆ ನೇರಾನೇರ ಸ್ಪರ್ಧೆ ಏರ್ಪಟ್ಟಿದೆ. ಅಷ್ಟರ ಮಟ್ಟಿಗೆ ಸಹಕಾರಿ ರಂಗ ಈಗ ರಾಜಕೀಯ ಮಯವಾಗಿದೆ. ರೈತರು, ರೈತರಿಗಾಗಿಯೇ ಇರುವ ಕೃಷಿ ಪತ್ತಿನ ಸಂಘದ ಚುನಾವಣೆಯು ಈಗ ರಾಜಕೀಯ ಜಿದ್ದಾಜಿದ್ದಿನ ಕಣವಾಗಿ ಮಾರ್ಪಟ್ಟಿದ್ದು ನಿಜವಾದ ರೈತರು ನೆಪತ್ಯಕ್ಕೆ ಸರಿಯುವಂತಾಗಿದೆ.

## ಕೌಶಲ್ಯ ತರಬೇತಿ: ನೊಂದಣಿಗೆ ಆಹ್ವಾನ

**ಚಾಮರಾಜನಗರ:** ಚಾಮರಾಜನಗರ ವಿಶ್ವವಿದ್ಯಾನಿಲಯವು ಜೆ.ಎಸ್.ಎಸ್. ಮಹಿಳಾ ಕಾಲೇಜು, ರಿಚ್ ಮಚ್ ಹೈಯರ್ ಸಂಸ್ಥೆಯ ಸಹಯೋಗದೊಂದಿಗೆ ಉಚಿತ ವೃತ್ತಿ ಆಧಾರಿತ ಕೌಶಲ್ಯ ತರಬೇತಿಗೆ ವಿದ್ಯಾಭ್ಯಾಸ ತೊರೆದ ಯುವಕ ಯುವತಿಯರಿಂದ ಅರ್ಜಿ ಆಹ್ವಾನಿಸಿದೆ.

ಜನವರಿಯಿಂದ ಮಾರ್ಚ್ ತಿಂಗಳವರೆಗೆ ಒಟ್ಟು 3 ತಿಂಗಳ ಅವಧಿಯ ಜಾಬ್ ಓರಿಯೆಂಟೆಡ್ ತರಬೇತಿಯನ್ನು ಉಚಿತವಾಗಿ ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ನೀಡಲಾಗುತ್ತದೆ. 18 ರಿಂದ 30ರ ವಯೋಮಿತಿಯ ವಿಧ್ಯಾಭ್ಯಾಸ ತೊರೆದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ತರಬೇತಿ ಪಡೆಯಬಹುದು.

ಬೆಳಿಗ್ಗೆ 10 ರಿಂದ 4 ಗಂಟೆಯವರೆಗೆ ತರಬೇತಿ ನೀಡಲಿದ್ದು, ಒಂದೇ ಬ್ಯಾಚಿನಲ್ಲಿ 25 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ತರಬೇತಿ ಪಡೆಯಲು ಃಣಣಠಿ://ಜಿಂಡಿಟ.ಂಟಜ/ಐಂಚಿಟಜಿಜರಿಣ77ಖ5ಣಕಿಚಿಡಿ9 ನಲ್ಲಿ ನೊಂದಣಿ ಮಾಡಿಸಬೇಕು. ಹೆಚ್ಚಿನ ವಿವರಗಳಿಗೆ ಪ್ರಮೋದ್ ಮೊ.ಸಂ 9886910296 ಸಂಪರ್ಕಿಸುವಂತೆ ಚಾಮರಾಜನಗರ ವಿಶ್ವವಿದ್ಯಾನಿಲಯದ ಪ್ರಕಟಣೆ ತಿಳಿಸಿದೆ.

# ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಚಾಮರಾಜನಗರ: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಚಾಮರಾಜನಗರ ಉಪವಿಭಾಗ ವ್ಯಾಪ್ತಿಯಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ನಾಳೆ ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ಚಾಮರಾಜನಗರ ಪಟ್ಟಣ ಸೇರಿ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಚಾಮರಾಜನಗರ ಪಟ್ಟಣ–1, ಕೋಡಿಮೋಳೆ, ರಾಮಸಮುದ್ರ, ಮಾದಾಪುರ ಕಾಗಲವಾಡಿ, ಸೋಮವಾರಪೇಟೆ ಟೌನ್–2, ಹರದನಹಳ್ಳಿ, ಬೇಡರಪುರ, ಟಿ.ಕೆ.ಮೋಳೆ, ಶಿವಪುರ, ಗೂಳಿಪುರ ಎನ್‌ಜೆವೈ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಣಿತ ಎಲ್ಲಾ ಆವಿಷ್ಕಾರಗಳ ಮೂಲ

ಶಿಡ್ಲಘಟ್ಟ : ಗಣಿತದ ಅನ್ವಯಿಕ ಕ್ಷೇತ್ರಗಳಲ್ಲಿ ಮತ್ತಷ್ಟು ಪ್ರಗತಿಯ ಅಗತ್ಯವಿದ್ದು, ಗಣಿತವೇ ಇತರೆಲ್ಲಾ ಆವಿಷ್ಕಾರಗಳಿಗೂ ಮೂಲವಾಗಿದೆ ಕಲಿಕೆಯ ಸನ್ನಿವೇಶದಲ್ಲಿ ಗಣಿತವನ್ನು ಮೂರ್ತ ಕಲ್ಪನೆಗಳನ್ನು ಮೂಡಿಸುವ ಮೂಲಕ ಆಸಕ್ತಿದಾಯಕವಾಗಿಸಬೇಕು ಎಂದು ಮುಖ್ಯಶಿಕ್ಷಕ ಎಚ್.ಎಸ್.ರುದ್ರೇಶಮೂರ್ತಿ ತಿಳಿಸಿದರು.

ತಾಲ್ಲೂಕಿನ ಸುಗಟೂರು ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲಾ ಮುಂಭಾಗದಲ್ಲಿ ಗಣಿತ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಮಕ್ಕಳಸಂತೆ, ಗಣಿತ ಕಲಿಕೋಪಕರಣಗಳ ಪ್ರದರ್ಶನ, ವಿಶ್ವಧ್ಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳದಿಸೆಯಿಂದಲೇ ಗಣಿತದ ವ್ಯಾಹಾರಿಕ ಜ್ಞಾನವನ್ನು ಬೆಳೆಸಬೇಕಾದ ಅಗತ್ಯವಿದ್ದು, ಗಣಿತದ ಪ್ರಾಯೋಗಿಕ ಕೌಶಲವನ್ನು ವೃದ್ಧಿಸಿಕೊಳ್ಳಲು ಸೂಕ್ತ ಅವಕಾಶಗಳನ್ನು ಕಲ್ಪಿಸಬೇಕು ಎಂದರು.

ಶಿಕ್ಷಕರಾದ ಟಿ.ಎಂ.ಮಧು ಮಾತನಾಡಿ, ಜೀವನವನ್ನು ಸಾರ್ಥಕಗೊಳಿಸಿಕೊಳ್ಳಲು ಅಗತ್ಯವಾದ ಶರೀರವನ್ನು ಚೆನ್ನಾಗಿಯೂ,ಹತೋಟಿಯಲ್ಲಿಯೂ ಇಟ್ಟುಕೊಳ್ಳಲು, ಮನಸ್ಸಿನ ಏಕಾಗ್ರತೆಯನ್ನು ಸಾಧಿಸಲು ನಿಯಮಿತ ಮತ್ತು ನಿರಂತರ ಧ್ಯಾನವು ಅನಿವಾರ್ಯವಾಗಿದೆ ಎಂದರು.



ಇದೇ ವೇಳೆ ಗಣಿತ ದಿನಾಚರಣೆ ಅಂಗವಾಗಿ ಶಾಲಾ ಮುಂಭಾಗದಲ್ಲಿ ಮಕ್ಕಳಿಂದ ನಡೆದ ಮಕ್ಕಳಸಂತೆಯಲ್ಲಿ ಹಣ್ಣು, ತರಕಾರಿ, ಶುಚಿಯಾದ ಆಹಾರಪದಾರ್ಥಗಳನ್ನು ಮಕ್ಕಳೇ ತೂಕ ಮಾಡಿ ಮಾರಾಟ ಮಾಡಿದ್ದು ಜನರನ್ನು ಆಕರ್ಷಿಸಿತು,ಗ್ರಾಮಸ್ಥರು ಮಕ್ಕಳಿಂದ ವಸ್ತುಗಳನ್ನು ಖರೀದಿಸಿ ಪ್ರೋತ್ಸಾಹಿಸಿದರು,ಮಕ್ಕಳೇ ಗಣಿತದ ಕಲಿಕೆಗಾಗಿ ತಯಾರಿಸಿದ್ದ ವಿವಿಧ ಕಲಿಕಾಸಾಮಗ್ರಿಗಳ ಪ್ರದರ್ಶನವು ಪೋಷಕರ ಮನಸೆಳೆಯಿತು.

ಶಾಲಾ ಮುಂಭಾಗದಲ್ಲಿ ನಡೆದ ಮಕ್ಕಳ ಸಂತೆಯಲ್ಲಿ ಪೋಷಕರು ಗ್ರಾಮಸ್ಥರು ಹಣ್ಣು, ತರಕಾರಿ ಖರೀದಿಸಿ ಪ್ರೋತ್ಸಾಹಿಸಿದರು. ಶಾಲೆಯಲ್ಲಿ ಗಣತ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಗಣಿತ ಕಲಿಕಾಸಾಮಗ್ರಿಗಳ ಪ್ರದರ್ಶನದಲ್ಲಿ ವಿದ್ಯಾರ್ಥಿಗಳು ಸಂತಸದಿಂದ ವೀಕ್ಷಿಸಿದರು.

ಶಾಲಾ ಆವರಣದಲ್ಲಿ ನಡೆದ ಗಣಿತ ದಿನಾಚರಣೆ ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧಾ ವಿಜೇತ ಮಕ್ಕಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷರಾದ ವೆಂಕಟೇಶ್, ಗ್ರಾಮಪಂಚಾಯಿತಿ ಮಾಜಿ ಸದಸ್ಯ ಎನ್.ಅಶ್ವತ್ಥಪ್ಪ, ಡಿ.ದೇವರಾಜು ಪೋಷಕರು ಪಾಲ್ಗೊಂಡಿದ್ದರು.

ಬಾಕ್ಸ್ ..–

ಭಾರತೀಯರ ಕೊಡುಗೆ ಅಪಾರ:

ವಿಜ್ಞಾನ, ವೈದ್ಯಕೀಯ ಕ್ಷೇತ್ರ ಮತ್ತು ಗಣಿತ ಕ್ಷೇತ್ರಕ್ಕೆ ಭಾರತೀಯ ಋಷಿಮುನಿಗಳು, ವಿಜ್ಞಾನಿಗಳು ಮತ್ತು ಶ್ರೀನಿವಾಸ ರಾಮಾನುಜನ್ ಸೇರಿದಂತೆ ಭಾರತೀಯರ ಕೊಡುಗೆ ಅಪಾರವಾದುದು ಗಣಿತ ಮತ್ತು ಸಂಶೋಧನೆಗಾಗಿ ಸಂಬಂಧಿತ ಕ್ಷೇತ್ರಗಳಲ್ಲಿ ಬೋಧನಾ–ಕಲಿಕಾ ಸಮಾಗ್ರಿಗಳ ಅಭಿವೃದ್ಧಿ, ಉತ್ಪಾದನೆ ಮತ್ತು ಪ್ರಸರಣದ ಬಗೆಗೆ ಸಾಕಷ್ಟು ಅರಿವು ಮೂಡಿಸಬೇಕಿದೆ, ಕಲಿಕೆಗೆ ಮಾತ್ರವಲ್ಲದೇ ಗಣಿತವು ಶೈಕ್ಷಣಿಕ ವಿಷಯವೂ, ಜೀವನಕೌಶಲವೂ ಆಗಿದ್ದು, ಬದುಕಿನ ನಿತ್ಯದ ಭಾಗವಾಗಿದೆ. ಗಣಿತದ ತಂತ್ರಗಳು ಮತ್ತು ಸೂತ್ರಗಳು ಆಸಕ್ತಿದಾಯಕವಾಗಿದ್ದು ಕಲಿತ ಗಣಿತದ ಜ್ಞಾನವನ್ನು ನಿತ್ಯ ಬದುಕಿಗೆ ಅಳವಡಿಸಿಕೊಳ್ಳುವ ಬಗ್ಗೆ ಮಕ್ಕಳಲ್ಲಿ ತಿಳಿ ಹೇಳಬೇಕಿದೆ ಎಂದರು.

## ಅಸ್ಪೃಶ್ಯತೆ ಅಸಮಾನತೆಗಳ ವಿರುದ್ಧ ಹೋರಾಟ




**ಮುಳಬಾಗಿಲು:** ನಗರದ ಅಂಬೇಡ್ಕರ್ ವೃತ್ತದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಪುತ್ತಳಿ ಮುಂದೆ ತಾಲ್ಲೂಕಿನ ದಲಿತ ಮುಖಂಡರು ಮನುಸ್ಮೃತಿ ಪುಸ್ತಕವನ್ನು ಸುಡುವ ಮೂಲಕ ದೇಶದಲ್ಲಿ ಉಂಟಾಗುತ್ತಿರುವ ಅಸ್ಪೃಶ್ಯತೆ ಅಸಮಾನತೆಗಳ ವಿರುದ್ಧ ಹೋರಾಟದ ಪ್ರತೀಕವಾಗಿ ಆಚರಣೆಯನ್ನು ಮಾಡಿದರು

ಈ ಸಂದರ್ಭದಲ್ಲಿ ದಸಂಸ ಸಂಯೋಜಕ ಜಿಲ್ಲಾ ಸಂಘಟನಾ ಸಂಯೋಜಕದ ಮೆಕಾನಿಕ್ ಶ್ರೀನಿವಾಸ್ ಮಾತನಾಡಿ ದೇಶದಲ್ಲಿ ವರ್ಣಭೇದ ನೀತಿ ಹಾಗೂ ಬ್ರಾಹ್ಮಣ, ಕ್ಷತ್ರಿಯ, ವೈಶ್ಯ ,ಶೂದ್ರ, ಹೀಗೆ ಜನರನ್ನು ದಿಕ್ಕು ತಪ್ಪಿಸುತ್ತಿದ್ದಂತಹ ಹಾಗೂ ಮಹಿಳೆಯರನ್ನು ಅಡುಗೆ ಮನೆಗೆ ಮತ್ತು ಹಾಸಿಗೆ ಮನೆಗೆ ಮಾತ್ರ ಸೀಮಿತ ಮಾಡಿ ಗಂಡ ಸತ್ತರೆ ಸತಿ ಸಹಗಮನ ಅಂತಹ ಕೆಟ್ಟ ಆಚರಣೆಗೆ ಸೂತ್ರವಾಗಿರುವಂತಹ ಮನಸ್ಮೃತಿಯನ್ನು ದೇಶದಿಂದ ಸಂಪೂರ್ಣವಾಗಿ ತಿರಸ್ಕರಿಸಬೇಕು ಅಂಬೇಡ್ಕರ್ ಅವರ ತಾರ್ಕಿಕ ಆಲೋಚನೆಗಳಿಗೆ ಜನರು ಗೌರವಿಸ ಬೇಕಾದರೆ ಸಂವಿಧಾನವನ್ನು ಹಾಗೂ ಸಂವಿಧಾನದಲ್ಲಿರುವಂತಹ ತತ್ವಗಳು ಪ್ರತಿಯೊಬ್ಬರ ಮನದಲ್ಲಿ ಹಾಗೂ ಆಚರಣೆಯಲ್ಲಿ ಜಾರಿಗೆ ತರಬೇಕೆಂದು ತಿಳಿಸಿದರು

ಈ ಸಂದರ್ಭದಲ್ಲಿ ಮಾತನಾಡಿದ ಬಹುಜನ ಸಂಘಟನೆಯ ಮುಖಂಡ ಸಂಗಸಂದ್ರ ವಿಜಯ್ ಕುಮಾರ್ ಮಾತನಾಡಿ ಮನಸ್ಕೃತಿ ಸುಟ್ಟಾಯಿತು ಅಮಿತ್ ಶಾ ಅಂತಹ ಮನುವಾದಿಗಳ ಮನಸ್ಸುಗಳನ್ನು ಸುಡುವುದ್ಯಾವಾಗ ಎಂದು ಆಕ್ರೋಶ ವ್ಯಕ್ತಪಡಿಸಿದರು

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಗೊಲ್ಲಹಳ್ಳಿ ವೆಂಕಟೇಶ್, ದಸಂಸ ಸಂಯೋಜಕ ಜಿಲ್ಲಾ ಮುಖಂಡರಾದ ಗಣೇಶ ಪಾಳ್ಯ ಕಿಟ್ಟಿ, ದಸಂಸ ಸಂಯೋಜಕ ತಾಲ್ಲೂಕು ಸಂಯೋಜಕರಾದ ಗುಜ್ಜಮಾರಂಡಹಳ್ಳಿ ಜಗದೀಶ್, ರೆಡ್ಡಿಹಳ್ಳಿ ಅಭಿ, ಗೋವಿಂದ್ ರಾಜ್, ಕಪ್ಪಲಮಾಡುಗು ಶಂಕರ್, ಕಲೀಮ್, ಆರ್ ಅಗ್ರಹಾರ ರಾಜಪ್ಪ, ಡಿ ವಿ ವೆಂಕಟರಮಣ, ಮತ್ತಿತರರು ಉಪಸ್ಥಿತರಿದ್ದರು.

## ಸರ್ಕಾರದ ಸೌಲಭ್ಯ ಸದುಪಯೋಗಿಪಡಿಸಿಕೊಳ್ಳಿ




**ಶಿಡ್ಲಘಟ್ಟ:** ಶೈಕ್ಷಣಿಕವಾಗಿ ಹಾಗು ಆರ್ಥಿಕವಾಗಿ ನಮ್ಮ ವಿದಾನಸಭಾಕ್ಷೇತ್ರ ತೀರಾ ಹಿಂದುಳಿದಿದ್ದು ಸರ್ಕಾರಗಳು ನೀಡುವ ಅನುದಾನ ಹಾಗೂ ಸೌಲಭ್ಯಗಳನ್ನು ಪ್ರತಿಯೊಬ್ಬರು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸದೃಡವಾಗಬೇಕು ಎಂದು ಶಾಸಕರಾದ ಬಿ.ಎನ್.ರವಿಕುಮಾರ್ ತಿಳಿಸಿದರು.

ನಗರದ ತಾಲ್ಲೂಕು ಕಛೇರಿಯ ಸಭಾಂಗಣದಲ್ಲಿ ಸರ್ಕಾರದ ವತಿಯಿಂದ ನೊಂದಾಯಿತ ಕಾರ್ಮಿಕರಿಗೆ ಎಲೆಕ್ಟ್ರೀಷಿಯನ್ ಹಾಗು ವೆಲ್ಡಿಂಗ್ ಕಿಟ್ ವಿತರಣೆ ಮಾಡಿ ಅವರು ಮಾತನಾಡಿದರು.

ಕಛೇರಿಗಳಿಗೆ ಕೆಲಸ ನಿಮಿತ್ತ ಬರುವ ನಾಗರಿಕರ ಕೆಲಸಗಳನ್ನು ತ್ವರಿತವಾಗಿ ಮುಗಿಸಿ ಪ್ರತಿಯೊಬ್ಬ ಅಧಿಕಾರಿಗಳು ಸ್ಪಂದಿಸುವಂತೆ ಸೂಚನೆ ನೀಡಿದರು.

ಇದೇ ವೇಳೆ ಎಲೆಕ್ಟ್ರೀಷಿಯನ್ ಕಿಟ್ 120 ಜನರಿಗೆ ಹಾಗು ವೆಲ್ಡರ್ ಕಿಟ್ 25 ಜನರಿಗೆ ವಿತರಿಸಲಾಯಿತು. ಕಾರ್ಮಿಕ ಇಲಾಖೆ ವತಿಯಿಂದ ನೊಂದಾಯಿತ ಕಾರ್ಮಿಕರಿಗೆ ಇನ್ಸೂರೆನ್ಸ್ ಸೌಲಭ್ಯವಿದ್ದು ಎಲ್ಲಾರು ಸದುಪಯೋಗಪಡಿಸಕೊಳ್ಳಬೇಕೆಂದು ಮನವರಿಕೆ ಮಾಡಿದರು.

ಈ ಸಂದರ್ಭದಲ್ಲಿ ತಹಶಿಲ್ದಾರ್ ಬಿ.ಎನ್.ಸ್ವಾಮಿ, ತಾಲ್ಲೂಕು ಪಂಚಾಯತಿ ಇ.ಒ.ಹೇಮಾವತಿ, ಕಾರ್ಮಿಕ ಇಲಾಖೆ ವೃತ್ತ ನೀರಿಕ್ಷಕಿ ವಿಜಯಲಕ್ಷ್ಮಿ, ನಗರಸಭೆ ಅಧ್ಯಕ್ಷರಾದ ಎಂ.ವಿ.ವೆಂಕಟಸ್ವಾಮಿ, ಮುಖಂಡರಾದ ಡಿ.ಬಿ.ವೆಂಕಟೇಶ್, ತಾದೂರುರಘು, ಮೇಲೂರು ಮಂಜುನಾಥ್, ನವೀನ್, ಮರಗೆಲಸ ಕಾರ್ಮಿಕ ಸಂಘದ ಅಧ್ಯಕ್ಷ ಪ್ರದೀಪ್, ಎಲೆಕ್ಟ್ರಿಕ್ ಸಂಘದ ಗಂಗಾಧರ್, ವೆಲ್ಡರ್ಸ್ ಸಂಘದ ಮೆಹಬೂಬ್, ಖದೀರ್, ಗಾರೆ ಕೆಲಸ ಸಂಘದ ದ್ಯಾವಪ್ಪ ಮತ್ತಿತರರು ಹಾಜರಿದ್ದರು.

## ಮೊಬೈಲ್ ಎಂಬ ಯಾಂತ್ರಿಕ ವ್ಯಸನ ವಿದ್ಯಾರ್ಥಿಗಳನ್ನು ಕಾಡುತ್ತಿದೆ

**ಶಿಡ್ಲಘಟ್ಟ:** ಯಶಸ್ಸಿನ ಹೆಜ್ಜೆ ಗುರುತು ಮೂಡಿಸಲು ತಪಸ್ಸಿನಂತೆ ಅಭ್ಯಾಸ ಮಾಡಿದಾಗ ಮಾತ್ರ ಸಾಧ್ಯ ಎಂದು ಕವಿ–ಸಾಹಿತಿ ಚಂದ್ರಶೇಖರ್ ಹಡಪದ ವಿದ್ಯಾರ್ಥಿಗಳಿಗೆ ಮನವಿ ಮಾಡಿದರು.

ತಾಲ್ಲೂಕಿನ ಭಕ್ತರಹಳ್ಳಿಯ ಬಿಎಂವಿ ವಿದ್ಯಾಸಂಸ್ಥೆ ಆವರಣದಲ್ಲಿ ಹಮ್ಮಿಕೊಂಡಿದ್ದ ಶಾಲಾ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು. ಪ್ರಸ್ತುತ ಮೊಬೈಲ್ ಎಂಬ ಯಾಂತ್ರಿಕ ವ್ಯಸನ ಹದಿಹರೆಯದ ವಿದ್ಯಾರ್ಥಿಗಳನ್ನು ಕಾಡುತ್ತಿದ್ದು ಬಕಪಕ್ಷಿಯ ಧ್ಯಾನ, ಸಿಂಹದ ಅವಲೋಕನ, ಹದ್ದಿನ ಪ್ರಯತ್ನ ವಿದ್ಯಾರ್ಥಿಗಳಲ್ಲಿ ಬೆಳೆಸಬೇಕಿದೆ ಎಂದು ಹೇಳಿದರು.

ವಿದ್ಯಾರ್ಥಿಗಳ ಕೌಶಲ,ಕ್ರಿಯಾಶೀಲ ವ್ಯಕ್ತಿತ್ವ ಪ್ರದರ್ಶನವಾಗುತ್ತದೆ ಕೇವಲ ಮನರಂಜನೆ ಒದಗಿಸುವ ಕಾರ್ಯದ ಜತೆಗೆ ವಾರ್ಷಿಕ ಪರೀಕ್ಷೆಗೆ ಪ್ರೋತ್ಸಾಹಿಸುವ ಮುನ್ನುಡಿಯಾಗಿದೆ ಎಂದರು.

ಇದೇ ವೇಳೆ ಬಿಎಂವಿ ವಿದ್ಯಾಸಂಸ್ಥೆ ಟ್ರಸ್ಟಿ ಸಂತೆ ನಾರಾಯಣಸ್ವಾಮಿ, ಕಾರ್ಯದರ್ಶಿ ಎಲ್.ಕಾಳಪ್ಪ ಮಾತನಾಡಿದರು. ಈ ಸಂದರ್ಭದಲ್ಲಿ ಅಧ್ಯಕ್ಷ ಬಿ.ವಿ.ಮುನೇಗೌಡ, ರೂಪಕಲಾಕಾಳಪ್ಪ, ರೇಷ್ಮೆ ಬೆಳೆಗಾರರ ರೈತ ಉತ್ಪಾದಕರ ಕಂಪನಿ ಅಧ್ಯಕ್ಷ ಚಿದಾನಂದಮೂರ್ತಿ, ಅಶ್ವತ್ಥಪ್ಪ, ನಂಜುಂಡಾರಾಧ್ಯ, ಹೇಮಂತ್ ಕುಮಾರ್, ಬಿ.ಎನ್.ದೇವರಾಜ್, ಕೋಟೆ ಚನ್ನೇಗೌಡ, ಬಂಡಿ ಬಿ.ಎಸ್.ನಾರಾಯಣಸ್ವಾಮಿ, ಬಿ ವಿ.ಪ್ರಶಾಂತ್ ಕುಮಾರ್, ಮಧು ಗೌಡ, ಈರಪ್ಪ ಹಾಗೂ ಶಾಲೆಯ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು,ವಿದ್ಯಾರ್ಥಿಗಳು ಹಾಜರಿದ್ದರು.



## ನಿತ್ರಾಣಗೊಂಡ ಕುಡಿಯುವ ನೀರಿನ ಘಟಕ!




**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

**ಚಾಮರಾಜನಗರ:** ನಗರದ ಶಸಸ್ತ್ರ ಮೀಸಲು ಪಡೆಯ ಆವರಣದಲ್ಲಿ ಇರುವ ಶುದ್ದ ಕುಡಿಯುವ ನೀರಿನ ಘಟಕ ನಿತ್ರಾಣಗೊಂಡಿದ್ದು ಪೊಲೀಸ್ ಸಿಬ್ಬಂದಿಗಳು ಹಾಗೂ ಸುತ್ತಮುತ್ತಲ ನಿವಾಸಿಗಳು ನೀರಿಗಾಗಿ ಪರಿತಪಿಸುತ್ತಿದ್ದಾರೆ.


ಎಸ್ಪಿ ಆನಂದ್ ಕುಮಾರ್ ಅವರ ಅವದಿಯಲ್ಲಿ ಶಸ್ತ್ರಾಸ್ತ್ರ ಮೀಸಲು ಪಡೆಯ ಆವರಣದಲ್ಲಿ ಬೋರ್ ಕೊರೆಯಿಸಿ ಕರ್ನಾಟಕ ರಾಜ್ಯಪೊಲೀಸ್ ಶುದ್ಧ ಕುಡಿಯುವ ನೀರಿನ ಘಟಕವನ್ನ ಉದ್ಘಾಟನೆ ಮಾಡಿ ಅಲ್ಲಿನ ಸಿಬ್ಬಂದಿಗಳಿಗೆ ಹಾಗೂ ಸುತ್ತ ಮುತ್ತಲಿನ ನಿವಾಸಿಗಳಾದ ಮಹದೇಶ್ವರ ಬಡಾವಣೆಯ ನೂರಾರು ಮನೆಯವರ ಕಾಯಿನ್ ಹಾಕಿ ನೀರು ಪಡೆದುಕೊಂಡು ಹೊಗುತ್ತಿದ್ದರು.

ಕಳೆದ ಏಳೆಂಟು ತಿಂಗಳಿನಿಂದಲೂ ಕೆಟ್ಟು ಹೋಗಿದ್ದರೂ ಶಸಸ್ತ್ರ ಮೀಸಲು ಪಡೆಯ ಹಿರಿಯ ಅದಿಕಾರಿಗಳು ದುರಸ್ತಿ ಪಡಿಸುವ ಗೋಜಲಿಗೆ ಹೋಗೆ ಇಲ್ಲದಿರುವುದು ವಿಪರ್ಯಾಸವಾಗಿದೆ.

ಕರ್ತವ್ಯ ನಿರತ ಸಿವಿಲ್ ಹಾಗೂ ಶಸಸ್ತ್ರ ಮೀಸಲು ಪಡೆಯ ಕುಟುಂಬದವರು ಬಳಸಿಕೊಳ್ಳುತ್ತಿದ್ದರು. ಕರ್ತವ್ಯದ ಮೇಲೆ ಹೊರಗಡೆ ಬಂದೂಬಸ್ತ್ ಗೆ ತೆರಳಿದರೆ ಅವರ ಹೆಂಡತಿಯರು ಹಾಗೂ ಮಕ್ಕಳು ಸದುಪಯೋಗ ಪಡಿಸಿಕೊಳ್ಳುತ್ತಿದ್ದರು.. ಇದೀಗ ಕೆಟ್ಟು ನಿಂತಿದ್ದರಿಂದ ಕರ್ತವ್ಯ ನಿರತ ಸಿಬ್ಬಂದಿಗಳು ಹಾಗೂ ಮಹದೇಶ್ವರ ಬಡಾವಣೆಯ ಕೆಲ ಕುಟುಂಬದವರು ಬೇರೆಡೆ ಆಶ್ರಯಿಸಿ ಕೊಳ್ಳಬೇಕಾಗಿದೆ. ಇದರಿಂದ ಶ್ರಮದ ಹೊರೆ ಹಾಗೂ ಕಾಲವಕಾಶದ ಹೊರೆ ವ್ಯರ್ಥವಾಗಲಿದೆ ಎಂಬುದು ನಿವಾಸಿಗಳ ಅಳಲು.

# ರಕ್ಷಣೆ ನೀಡುವಂತೆ ಮೋದಿಗೆ ಪತ್ರ ಬರೆದ ಸ್ನೇಹಮಯಿ ಕೃಷ್ಣ

**ಮೈಸೂರು:** ತನಗೆ ಮತ್ತು ತನ್ನ ಕುಟುಂಬಕ್ಕೆ ರಕ್ಷಣೆ ನೀಡುವಂತೆ ಮುಡಾ ಹಗರಣದ ದೂರುದಾರ ಸ್ನೇಹಮಯಿ ಕೃಷ್ಣ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದಿದ್ದಾರೆ.



From,
Snehamayi Krishna
Social Activist
# 335, Bandipalya
Ganapathi Aashrama-post
Mysuru – 570025
Karnataka State

Date :-26.12.2024

To,
1) HON'BLE PRIME MINISTER
Govt. Of India
New Delhi

2) HON'BLE HOME MINISTER
Govt. Of India
New Delhi

Subject- Request for Immediate Security Assistance from the Central Government Due to Karnataka State Government's Refusal to Provide Security to Me and My Family.

Respected Sir,

I am writing to you with a grave concern regarding the safety and well-being of myself and my family. Despite repeatedly requesting the Karnataka state government to provide us with necessary security measures, we have been denied any assistance, and our lives are now at significant risk.

I filed a complaint regarding the illegal allotment of 14 sites under the Mysore Urban Development Authority (MUDA) in the name of Parvathi, the wife of the Acting Karnataka Chief Minister, Shri Siddaramaiah, along with other political leaders and influential individuals. Despite my efforts to lodge a complaint with the relevant authorities, they refused to take action. As a result, I approached the Hon'ble Court and filed a private complaint. After reviewing my complaint and the supporting documents, the Court directed an investigation by the Lokayuktha authorities. Following this, an FIR (No. 11/2024) was registered in the case, with Karnataka Chief Minister Shri Siddaramaiah being named as Accused No. 1.

Because of my disclosure of this scam, multiple false FIRs have been registered against me, and there are attempts to have me imprisoned. The first FIR (No. 136/2024) was filed at Nanjanagudu Town Police Station, followed by



ಮುಖ್ಯಮಂತ್ರಿ ಸಿದ್ದರಾಮಯ್ಯ ಭ್ರಷ್ಟಾಚಾರ ಕುರಿತು ಹೋರಾಟ ಮಾಡುತ್ತಿದ್ದೇನೆ. ಹೀಗಾಗಿ, ನನಗೆ ಮತ್ತು ನನ್ನ ಕುಟುಂಬಕ್ಕೆ ಭದ್ರತೆ ನೀಡುವಂತೆ ಮೈಸೂರು ಪೊಲೀಸ್ ಆಯುಕ್ತರಿಗೆ ಮನವಿ ಮಾಡಿದ್ದೆ. ಗನ್ ಮ್ಯಾನ್ ನೀಡುವಂತೆ ಕೇಳಿದ್ದೆ. ಆದರೆ, ಯಾವ ಭದ್ರತೆಯನ್ನು ನೀಡಿಲ್ಲ ಎಂದು ಸ್ನೇಹಮಯಿ ಕೃಷ್ಣ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಈ ಹಿನ್ನೆಲೆಯಲ್ಲಿ ತಮಗೆ ಮತ್ತು ತಮ್ಮ ಕುಟುಂಬಕ್ಕೆ ರಕ್ಷಣೆ ಕೋರಿ ಪತ್ರದ ಮೂಲಕ ಪ್ರಧಾನಿ ಮೋದಿಯವರಿಗೆ ಮನವಿ ಸಲ್ಲಿಸಿದ್ದಾರೆ .

ಏನಿದೆ ಪತ್ರದಲ್ಲಿ?

ನನ್ನ ಮತ್ತು ನನ್ನ ಕುಟುಂಬದ ಸುರಕ್ಷತೆ ಮತ್ತು ಯೋಗಕ್ಷೇಮದ ಬಗ್ಗೆ ಗಂಭೀರ ಕಾಳಜಿಯಿಂದ ನಾನು ನಿಮಗೆ ಪತ್ರ ಬರೆಯುತ್ತಿದ್ದೇನೆ. ನಮಗೆ ಅಗತ್ಯ ಭದ್ರತಾ ಕ್ರಮಗಳನ್ನು ಒದಗಿಸುವಂತೆ ಕರ್ನಾಟಕ ರಾಜ್ಯ ಸರ್ಕಾರಕ್ಕೆ ಪದೇ ಪದೇ ಮನವಿ ಮಾಡಿದರೂ, ನಮಗೆ ಯಾವುದೇ ಸಹಾಯವನ್ನು ನಿರಾಕರಿಸಲಾಗಿದೆ.

ಮತ್ತು ಈಗ ನಮ್ಮ ಜೀವವು ಅಪಾಯದಲ್ಲಿದೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ಅಡಿಯಲ್ಲಿರುವ 14 ನಿವೇಶನಗಳನ್ನು ಕರ್ನಾಟಕದ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರ ಹೆಸರಿನಲ್ಲಿ ಇತರ ರಾಜಕೀಯ ಮುಖಂಡರು ಮತ್ತು ಪ್ರಭಾವಿ ವ್ಯಕ್ತಿಗಳೊಂದಿಗೆ ಅಕ್ರಮವಾಗಿ ಹಂಚಿಕೆ ಮಾಡಿರುವ ಬಗ್ಗೆ ನಾನು ದೂರು ದಾಖಲಿಸಿದ್ದೇನೆ. ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಲು ಪ್ರಯತ್ನಿಸಿದರೂ ಅವರು ಕ್ರಮ ಕೈಗೊಳ್ಳಲು ನಿರಾಕರಿಸಿದರು. ಇದರಿಂದ ನಾನು ನ್ಯಾಯಾಲಯದ ಮೊರೆ ಹೋಗಿ ಖಾಸಗಿ ದೂರು ದಾಖಲಿಸಿದೆ.

ನನ್ನ ದೂರು ಮತ್ತು ಪೂರಕ ದಾಖಲೆಗಳನ್ನು ಪರಿಶೀಲಿಸಿದ ನ್ಯಾಯಾಲಯವು ಲೋಕಾಯುಕ್ತ ಅಧಿಕಾರಿಗಳಿಂದ ತನಿಖೆಗೆ ಸೂಚಿಸಿದೆ. ಇದರ ನಂತರ, ಪ್ರಕರಣದಲ್ಲಿ ಎಫ್ಐಆರ್ (ಸಂ. 11/2024) ದಾಖಲಾಗಿದ್ದು, ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆರೋಪಿ 1 ಎಂದು ಹೆಸರಿಸಲಾಗಿದೆ.

ಈ ಹಗರಣವನ್ನು ನಾನು ಬಹಿರಂಗಪಡಿಸಿದ ಕಾರಣ, ನನ್ನ ವಿರುದ್ಧ ಅನೇಕ ಸುಳ್ಳು ಎಫ್ಐಆರ್‌ಗಳನ್ನು ದಾಖಲಿಸಲಾಗಿದೆ ಮತ್ತು ನನ್ನನ್ನು ಜೈಲಿಗೆ ಹಾಕುವ ಪ್ರಯತ್ನಗಳು ನಡೆಯುತ್ತಿವೆ. ನಂಜನಗೂಡು ಟೌನ್ ಪೊಲೀಸ್ ಠಾಣೆಯಲ್ಲಿ ಮೊದಲ ಎಫ್ಐಆರ್ (ನಂ. 136/2024) ದಾಖಲಾಗಿದೆ.

ದೇವರಾಜ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ನಂ.105/2024, ಕೃಷ್ಣರಾಜ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್.ಸಂ.111/2024. ಅವರು ನನ್ನ ಮೇಲೆ ಒತ್ತಡ ಹೇರಲು ಪ್ರಯತ್ನಿಸುತ್ತಿದ್ದಾರೆ ಮತ್ತು ಪ್ರಕರಣವನ್ನು ಕೈಬಿಡಲು ಬದಲಾಗಿ ಹಣ ನೀಡುತ್ತಿದ್ದಾರೆ. ಇದರ ಹೊರತಾಗಿಯೂ, ನಾನು ಹೋರಾಟವನ್ನು ಮುಂದುವರಿಸಲು ನಿರ್ಧರಿಸಿದೆ. ಈಗ ಅವರು ನನ್ನ ಮತ್ತು ನನ್ನ ಕುಟುಂಬದ ವಿರುದ್ಧ ಬೆದರಿಕೆ ಹಾಕುತ್ತಿದ್ದಾರೆ.

18.08.2024 ರಂದು ನಾನು ಮೈಸೂರಿನ ಪೊಲೀಸ್ ಆಯುಕ್ತರಿಗೆ ಗನ್‌ಮ್ಯಾನ್‌ಗಾಗಿ ಮನವಿ ಪತ್ರವನ್ನು ಸಲ್ಲಿಸಿದೆ, ಆದರೆ ಅದನ್ನು ನಿರಾಕರಿಸಲಾಯಿತು. ಅದೇ ರೀತಿ, ಬಿಜೆಪಿ ರಾಜ್ಯಾಧ್ಯಕ್ಷರು ಹಲವಾರು ಎನ್‌ಜಿಒಗಳು ಮತ್ತು ಸಂಘಟನೆಗಳೊಂದಿಗೆ ನನಗೆ ಭದ್ರತಾ ನೆರವು ಕೋರಿ ಕರ್ನಾಟಕದ ಡಿಜಿಪಿಗೆ ಮನವಿ ಪತ್ರಗಳನ್ನು ಕಳುಹಿಸಿದ್ದಾರೆ, ಆದರೆ ಅದನ್ನು ಸಹ ನಿರಾಕರಿಸಲಾಗಿದೆ. ಹಾಲಿ ಮುಖ್ಯಮಂತ್ರಿ ಹಾಗೂ ಇತರ ಪ್ರಭಾವಿ ವ್ಯಕ್ತಿಗಳ ವಿರುದ್ಧ ನಾನು ಹೋರಾಟ ನಡೆಸುತ್ತಿರುವುದರಿಂದ ರಾಜ್ಯ ಸರ್ಕಾರ ನನಗೆ ಭದ್ರತೆ ನೀಡಲು ನಿರಾಕರಿಸುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರಭಾವದಿಂದ ಸರ್ಕಾರಿ ಅಧಿಕಾರಿಗಳು ನನ್ನ ಪ್ರಯತ್ನಕ್ಕೆ ಅಡ್ಡಿಪಡಿಸಲು ಪ್ರಯತ್ನಿಸುತ್ತಿದ್ದಾರೆ ಎಂಬುದನ್ನು ಇದು ತೋರಿಸುತ್ತದೆ. ರಾಜ್ಯ ಸರ್ಕಾರದ ಭದ್ರತೆಯನ್ನು ಅವಲಂಬಿಸುವುದು ನನಗೆ ಮತ್ತು ನನ್ನ ಕುಟುಂಬಕ್ಕೆ ಹೆಚ್ಚು ಅಪಾಯಕಾರಿ ಎಂದು ತೋರುತ್ತದೆ. ಆದ್ದರಿಂದ, ನನ್ನ ಜೀವವನ್ನು ರಕ್ಷಿಸಲು ಮತ್ತು ಸಮಾಜದೊಳಗೆ ನನ್ನ ಕುಟುಂಬದ ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರವು ದಯೆಯಿಂದ ಭದ್ರತೆಯನ್ನು ಒದಗಿಸಬೇಕೆಂದು ನಾನು ವಿನಂತಿಸುತ್ತೇನೆ." ಎಂದು ಪತ್ರದಲ್ಲಿ ಬರೆದಿದ್ದಾರೆ.

## ಸರ್ಕಾರಿ ರಜೆ, ಕರ್ನಾಟಕದ ಕೆಲ ವಿಶ್ವವಿದ್ಯಾಲಯಗಳ ಪರೀಕ್ಷೆ ಮುಂದೂಡಿಕೆ

**ಬೆಂಗಳೂರು/ಮೈಸೂರು:** ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನ ಹಿನ್ನೆಲೆಯಲ್ಲಿ ಶಾಲಾ–ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಇದರಿಂದ, ಶುಕ್ರವಾರ (ಡಿ.27) ನಡೆಯಬೇಕಿದ್ದ ಹಲವು ಪರೀಕ್ಷೆಗಳನ್ನು ಮುಂದೂಡಲಾಗಿದೆ. ಬೆಂಗಳೂರು ವಿಶ್ವವಿದ್ಯಾಲಯದ ಎಂಬಿಎ ದ್ವಿತೀಯ ಸೆಮಿಸ್ಟರ್ ಪರೀಕ್ಷೆಯನ್ನು ಮುಂದೂಡಿದೆ. ಮುಂದಿನ ಪರೀಕ್ಷಾ ದಿನಾಂಕ ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುತ್ತೆ ಎಂದು ಬೆಂಗಳೂರು ವಿಶ್ವವಿದ್ಯಾಲಯ ಮೌಲ್ಯಮಾಪನ ಕುಲಸಚಿವರು ಮಾಹಿತಿ ನೀಡಿದ್ದಾರೆ.

ಮೈಸೂರು ವಿಶ್ವವಿದ್ಯಾಲಯದ ಪದವಿ, ಸ್ನಾತಕೋತ್ತರ ಎಲ್ಲ ಪರೀಕ್ಷೆಗಳು ಮುಂದೂಡಲಾಗಿದೆ. ಮುಂದಿನ ಪರೀಕ್ಷಾ ದಿನಾಂಕವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಮೈಸೂರು ವಿಶ್ವ ವಿದ್ಯಾಲಯ ಕುಲಸಚಿವ ಎನ್.ನಾಗರಾಜ್ ಮಾಹಿತಿ ನೀಡಿದ್ದಾರೆ.

ಕುವೆಂಪು ವಿಶ್ವವಿದ್ಯಾಲಯದ ಸ್ನಾತಕ **Non – NEP** ಪರೀಕ್ಷೆ ಮುಂದೂಡಲಾಗಿದೆ. ಪರೀಕ್ಷೆ ದಿನಾಂಕ ಮುಂದಿನ ದಿನಗಳಲ್ಲಿ ತಿಳಿಸಲಾಗುತ್ತದೆ ಎಂದು ಕುವೆಂಪು ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವ ಡಾ.ಪಿ.ಧರಣಿಕುಮಾರ್ ತಿಳಿಸಿದ್ದಾರೆ.

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನ ಹಿನ್ನೆಲೆಯಲ್ಲಿ ಶುಕ್ರವಾರ ರಾಜ್ಯದಲ್ಲಿ ಸರ್ಕಾರಿ ರಜೆ ಘೋಷಣೆ ಮಾಡಲಾಗಿದೆ. ಎಲ್ಲ ಸರ್ಕಾರಿ ಕಚೇರಿಗಳು, ಶಾಲಾ, ಕಾಲೇಜುಗಳು ರಜೆ ಇರಲಿದೆ. ರಾಜ್ಯದಲ್ಲಿ 7 ದಿನಗಳ ಕಾಲ ಶೋಕಾಚರಣೆ ಘೋಷಣೆ ಮಾಡಲಾಗಿದೆ.

ಇಂದಿನ (ಡಿ.27) ಕೇಂದ್ರ ಸರ್ಕಾರದ ಎಲ್ಲ ಕಾರ್ಯಕ್ರಮಗಳು ರದ್ದು ಮಾಡಲಾಗಿದೆ. ಬೆಳಗ್ಗೆ 11 ಗಂಟೆಗೆ ಕೇಂದ್ರ ಸಚಿವ ಸಂಪುಟ ಸಭೆ ನಡೆಯಲಿದ್ದು, ಮನಮೋಹನ್ ಸಿಂಗ್‌ರಿಗೆ ಸಂತಾಪ ಸೂಚಿಸಲಾಗುತ್ತದೆ.

# ರಾಜ್ಯಮಟ್ಟದ ನೆಟ್‌ಬಾಲ್ ಪಂದ್ಯಾವಳಿಗೆ ಚಾಲನೆ



ಚಾಮರಾಜನಗರ: ಕ್ರೀಡಾಕೂಟದಲ್ಲಿ ಸೋಲು ಗೆಲುವು ಮುಖ್ಯವಲ್ಲ. ಭಾಗವಹಿಸುವ ಮನೋಭಾವ ಮುಖ್ಯ ಎಂದು ಚಾಮರಾಜನಗರ ನೆಟ್ ಬಾಲ್ ಅಸೋಸಿಯೇಷನ್ ಜಿಲ್ಲಾಗೌರವಾಧ್ಯಕ್ಷೆ ನರ್ಗಿಸ್ ಭಾನು ಅಭಿಪ್ರಾಯಪಟ್ಟರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಮರಾಜನಗರ ಜಿಲ್ಲಾ ನೆಟ್ ಬಾಲ್ ಅಸೋಸಿಯೇಷನ್ ವತಿಯಿಂದ ನಡೆದ' 6ನೇ ರಾಜ್ಯಮಟ್ಟದ 19ವರ್ಷದೊಳಗಿನ ನೆಟ್‌ಬಾಲ್ ಚಾಂಪಿಯನ್ ಶಿಪ್ ಪಂದ್ಯಾವಳಿ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕ್ರೀಡಾಕೂಟಗಳಲ್ಲಿ ಭಾಗವಹಿಸುವುದರಿಂದ ಕ್ರೀಡಾಳುಗಳು ಮಾನಸಿಕ ಹಾಗೂ ದೈಹಿಕವಾಗಿ ಸದೃಡರಾಗುತ್ತಾರೆ. ಇಂದು ಆಟವಾಡಿ ಹೋಗುವುದಲ್ಲ. ಇದನ್ನು ನಿರಂತರವಾಗಿ ಆಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಭಾರತಸೇವಾದಳ ಜಿಲ್ಲಾಧ್ಯಕ್ಷ, ಸಮಾಜಸೇ ವಕ ಬಿ.ಎಸ್. ವೆಂಕಟನಾಗಪ್ಪಶೆಟ್ಟಿ ಬಾಬು ಮಾತನಾಡಿ, ಚಾಮರಾಜನಗರದಲ್ಲಿ ರಾಜ್ಯಮಟ್ಟದ ನೆಟ್‌ಬಾಲ್ ಪಂದ್ಯಾವಳಿ ಆಯೋಜಿಸಿರುವುದು ಪ್ರಶಂಸನೀಯ, ಇದರ ಆಯೋಜನೆಗೆ ಶ್ರಮಿಸಿದ ಪದಾಧಿಕಾರಿಗಳನ್ನು ಅಭಿನಂದಿಸುವುದಾಗಿ ತಿಳಿಸಿದರು.

ಜಿಲ್ಲಾಯುವಜನಸೇವೆ ಮತ್ತು ಕ್ರೀಡಾಇಲಾಖೆ ಸಹಾಯಕ ನಿರ್ದೇಶಕ ಸುರೇಶ್ ಮಾತನಾಡಿ, ಸಾಂಸ್ಕೃತಿಕ ಕಾರ್ಯಕ್ರಮಗಳಂತೆ ಕ್ರೀಡಾಕೂಟಗಳು ಕೂಡಾ,ವಿದ್ಯಾರ್ಥಿಗಳ ಓದಿಗೆ ಸಹಕಾರಿಯಾಗಿವೆ. ಚಾಮರಾಜನಗರ ಜಾನಪದ ಕಲೆಗಳ ತವರೂರು, ಅದರ ಜತೆಗೆ ಕ್ರೀಡೆಗಳಿಗೂ ಪ್ರಸಿದ್ದವಾಗಿದೆ. ಚಾಮರಾಜನಗರ ಜಿಲ್ಲಾಕ್ರೀಡಾಂಗಣದ ಉಳಿದ ಮುಂದುವರೆದ ಕಾಮಗಾರಿಗಳಿಗೆ ಅನುದಾನ ಮಂಜೂರಾತಿಗೆ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಗ್ರೀನ್‌ಅಗ್ರಿಟೆಕ್ ಗ್ರಾಮೀಣಾಭಿವೃದ್ದಿ ಸಂಸ್ಥೆ ನಿರ್ದೇಶಕ ಡಾ.ಕೆ.ಶ್ರೀಕಂಠಸ್ವಾಮಿ ಮಾತನಾಡಿ, ಕ್ರೀಡೆಗಳು ಆರೋಗ್ಯದ ಒಂದು ಭಾಗವಾಗಿದೆ. ಚಾಮರಾಜನಗರ ಕ್ರೀಡಾಪಟುಗಳು ಜಿಲ್ಲಾಮಟ್ಟದಿಂದ ರಾಜ್ಯಮಟ್ಟಕ್ಕೂ ಆಯ್ಕೆಯಾಗಿ ಪ್ರತಿಭೆ ಮರೆದಿದ್ದಾರೆ. ರಾಷ್ಟ್ರಮಟ್ಟಕ್ಕೂ ಆಯ್ಕೆಯಾಗಬೇಕು ಎಂಬುದು ನಮ್ಮ ಆಶಯ ಎಂದರು. ಚಾಮರಾಜನಗರ ಜಿಲ್ಲಾ ನೆಟ್ ಬಾಲ್ ಅಸೋಸಿಯೇಷನ್ ಅಧ್ಯಕ್ಷ ವಿ.ಶ್ರೀನಿವಾಸಪ್ರಸಾದ್ ಮಾತನಾಡಿ, ಚಾಮರಾಜನಗರ ಜಿಲ್ಲೆ ಕ್ರೀಡಾಕೂಟಗಳ ತವರೂರಾಗಿದೆ. ಜಿಲ್ಲೆಯ ಜನತೆ ನೆಟ್ ಬಾಲ್ ಕ್ರೀಡಾಕೂಟಕ್ಕೆ ಪ್ರೋತ್ಸಾಹ ನೀಡಬೇಕು ಎಂದು ಮನವಿ ಮಾಡಿದರು.

ಅಮೆಚೂರ್‌ನೆಟ್ ಬಾಲ್ ಅಸೋಸಿಯೇಷನ್ ರಾಜ್ಯಪ್ರಧಾನ ಕಾರ್ಯದರ್ಶಿ ಸಿ.ಗಿರೀಶ್, ಜಿಲ್ಲಾಪ್ರಧಾನಕಾರ್ಯದರ್ಶಿ ಬಿ.ಮಹದೇವಪ್ರಸಾದ್, ರಾಷ್ಟ್ರೀಯ ಕ್ರೀಡಾಪಟು ಸುರಭಿ, ಸ್ವಾಗತಟ್ರೇಡರ್ ನ ರಮೇಶ್, ಹಿರಿಯ ಕ್ರೀಡಾಪಟುಶ್ರೀನಿವಾಸ್, ರಾಜ್ಯ ಉಪಾಧ್ಯಕ್ಷ ಅನಿಲ್ ಕುಮಾರ್, ಖಜಾಂಚಿ ಮಹದೇವಸ್ವಾಮಿ, ಸಂಘಟನಾಕಾರ್ಯದ ರ್ಶಿಮಧುಕುಮಾರ್, ಸಹಕಾರ್ಯದರ್ಶಿ ಸುರೇಶ್‌ಕುಮಾರ್, ಸರ್ವಸದಸ್ಯರು, ಚಾಮರಾಜನಗರ ಸೇರಿದಂತೆ 12 ಜಿಲ್ಲೆಗಳ ಕ್ರೀಡಾಪಟುಗಳು ಹಾಜರಿದ್ದರು.

# ದಿನದರ್ಶಿಕೆ ಶಿಕ್ಷಕರು ಶಾಲೆಗಳಲ್ಲಿ ಸದ್ಬಳಕೆ ಮಾಡಿಕೊಳ್ಳಿ

**ಮುಳಬಾಗಿಲು:** ಅನುದಾನಿತ ಪ್ರೌಢಶಾಲೆಗಳ ಜಿಲ್ಲಾಧ್ಯಕ್ಷ ಬಿ ಎಡ್ ನಾರಾಯಣಸ್ವಾಮಿ ಮಾತನಾಡಿ ದಿನದರ್ಶಿಕೆ ಶಿಕ್ಷಕರು ವೃತ್ತಿ ಮೇಲೆ ಪರಿಣಾಮ ಬೀರುತ್ತದೆ ಶಿಕ್ಷಕರಾದ ನಾವು ದಿನಗಳನ್ನು ಲೆಕ್ಕ ಹಾಕಿ ಸಂಬಳ ತೆಗೆದುಕೊಳ್ಳಬಾರದು ದಿನದರ್ಶಿಕೆಯನ್ನು ನೋಡಿ ಮಕ್ಕಳಿಗೆ ಸದ್ಬಳಕೆ ಆಗುವಂತೆ ವಾರ್ಷಿಕ ಪಾಠಗಳನ್ನು ಆಯೋಜನೆ ಮಾಡಿಕೊಳ್ಳಬೇಕು ಎಂದು ಕಲ್ಲುಪಲ್ಲಿ ಪ್ರಕಾಶ್ ಹೇಳಿದರು.

ಮುಳಬಾಗಿಲು ನಗರದ ಶ್ರೀಯೋಗಿ ನಾರಾಯಣ ಕಲ್ಯಾಣ ಮಂಟಪದಲ್ಲಿ 2025 ನೇ ವರ್ಷದ ಕೆವಿಜೆ ಸಿಂಡಿಕೇಟ್ ನ ವತಿಯಿಂದ ದಿನದರ್ಶಿಕೆ ಬಿಡುಗಡೆ ಮಾಡಲಾಯಿತು.

ನೂತನ ವರ್ಷಕ್ಕೆ ಎಲ್ಲಾ ಶಿಕ್ಷಕರಿಗೂ ಶುಭಾಶಯಗಳು ಅವರು ಹೇಳಿದರು.

ಸಂಘಟನೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದೆ , ಇತ್ತೀಚಿಗೆ ನಡೆದ ಸರ್ಕಾರಿ ನೌಕರರ ಸಂಘದ ಚುನಾವಣೆಯಲ್ಲಿ ಜಗನ್ನಾಥ್ ಸಿಂಡಿಕೇಟ್ ಗೆ ಶಿಕ್ಷಕರು ಹೆಚ್ಚಿನ ಬೆಂಬಲವನ್ನು ನೀಡಿ ಗೆಲುವು ನೀಡಿರುತ್ತಾರೆ ಶಿಕ್ಷಕರ ಸಮಸ್ಯೆಗಳಿಗೆ ಸಂಘದ ಪದಾಧಿಕಾರಿಗಳ ಶ್ರಮಿಸಬೇಕು ಮುಂದಿನ ದಿನಗಳಲ್ಲಿ ನಿಮ್ಮ ಸಂಘಟನೆಗೆ ನನ್ನ ಬೆಂಬಲ ಇರುತ್ತದೆ ಎಂದು ತಿಳಿಸಿದರು.

ಸರ್ಕಾರಿ ನೌಕರ ಸಂಘದ ನಿರ್ದೇಶಕ ಕೆ.ವಿ ಜಗನ್ನಾಥ್ ಮಾತನಾಡಿ, 12 ವರ್ಷಗಳಿಂದ ಕ್ಯಾಲೆಂಡರ್ ಅನ್ನು ಬಿಡುಗಡೆ ಮಾಡಲಾಗುತ್ತಿದೆ ತಾಲೂಕಿನ ಎಲ್ಲಾ ಶಿಕ್ಷಕರು 600 ಕ್ಕಿಂತ ಹೆಚ್ಚು ಮತಗಳನ್ನು ನೀಡಿ ಗೆಲುವನ್ನು ತಂದುಕೊಟ್ಟಿದ್ದಾರೆ ನಾನು ಎಲ್ಲರಿಗೂ ಚಿರಋಣಿಯಾಗಿರುತ್ತೇನೆ, ಶಿಕ್ಷಕರ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತೇನೆ ಎಂದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಗದೀಶ್ ಮಾತನಾಡಿ ಹಿಂದೆ ನಾನು ಸರ್ಕಾರಿ ನೌಕರ ಸಂಘದ ಅಧ್ಯಕ್ಷನಾಗಬೇಕಾದರೆ ಕಲ್ಲುಪಲ್ಲಿ ಪ್ರಕಾಶ್ ರವರು ಪ್ರಮುಖ ಕಾರಣಕರ್ತರಾಗಿದ್ದಾರೆ, ಸಂಘಟನೆಯ ಪ್ರಮುಖ ಉದ್ದೇಶ ನಿಸ್ವಾರ್ಥ ಸೇವೆ ತಾರತಮ್ಯ ಮಾಡಬಾರದು ಯಾವಾಗಲೂ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಮುಂದಿನ ದಿನಗಳಲ್ಲಿ ಉತ್ತಮ ಸಂಘವನ್ನು ಕಟ್ಟಲು ಬುನಾದಿಯನ್ನು ಹಾಕೋಣ ನಿಮಗೆ ನನ್ನ ಸಂಪೂರ್ಣ ಬೆಂಬಲ ಇರುತ್ತದೆ ಎಂದರು.

ತಾಲೂಕು ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ವಾಲಿಬಾಲ್ ಶಿವಣ್ಣ ಹಾಗೂ ನಿಕಟ ಪೂರ್ವ ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಆವನಿ ಆನಂದ್ ಮಾತನಾಡಿದರು.

ಸರ್ಕಾರಿ ನೌಕರರ ಸಂಘದ ನಿರ್ದೇಶಕಿ ಬಿ. ಚಿತ್ರ, ಎಸ್‌ಸಿ–ಎಸ್‌ಟಿ ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎಂ. ಸಿ ರಘುನಾಥ್, ಎನ್ .ಪಿ .ಎಸ್ ನೌಕರರ ಸಂಘದ ಅಧ್ಯಕ್ಷ ವಿ.ಸುಬ್ರಮಣಿ ರೆಡ್ಡಿ, ತಾಲೂಕು ಭಾರತೀಯ ಸೇವಾದಳದ ಅಧ್ಯಕ್ಷ ಬಿ.ಎಸ್ ವೇಣುಗೋಪಾಲ್, ಇಸಿಓ ಗುರುರಾಜ್, ಉರ್ದು ಶಿಕ್ಷಕರ ಸಂಘದ ಅಧ್ಯಕ್ಷ ಪೈಜುಲ್ಲಾ, ಸಿಆರ್ ಪಿ ಸಂಘದ ಅಧ್ಯಕ್ಷ ಆರ್ .ಕೃಷ್ಣಪ್ಪ, ಪ್ರಧಾನ ಕಾರ್ಯದರ್ಶಿ ಜಿ. ಎನ್.ರಾಜಕುಮಾರ್, ಭಾರತೀಯ ಸೇವಾದಳದ ಉಪಾಧ್ಯಕ್ಷ ಕೆ.ಬಿ ನಾಗರಾಜ್, ಪ್ರಧಾನ ಕಾರ್ಯದರ್ಶಿ ವೆಂಕಟರಾಮಯ್ಯ, ಶಿಕ್ಷಕರ ಸಂಘದ ನಿಕಟ ಪೂರ್ವ ಪ್ರಧಾನ ಕಾರ್ಯದರ್ಶಿಗಳಾದ ಎನ್. ಚಂದ್ರಪ್ಪ, ವಿ ಎಸ್ ಚಿಕ್ಕರೆಡ್ಡೆಪ್ಪ ಎಂ ಸುಬ್ಬರಾಯಪ್ಪ ನಿಕಟ ಪೂರ್ವ ಉಪಾಧ್ಯಕ್ಷ ಎನ್ ಗಂಗಪ್ಪ ಸಿಆರ್ ಪಿ ಬ್ರಹ್ಮಾನಂದ ರೆಡ್ಡಿ ಮತ್ತಿತರ ಶಿಕ್ಷಕರ ಮುಖಂಡರು ಇದ್ದರು.




# ಅನೈತಿಕ ಸಂಬಂಧ ಆರೋಪ: ವ್ಯಕ್ತಿ ಸಾವು

ಹಾವೇರಿ: ಅನೈತಿಕ ಸಂಬಂಧ ಆರೋಪದ ಹಿನ್ನೆಲೆಯಲ್ಲಿ ವ್ಯಕ್ತಿಯೋರ್ವನಿಗೆ ಕೆಲವರು ಲೈಟ್ ಕಂಬಕ್ಕೆ ಕಟ್ಟಿಹಾಕಿ ಮನಬಂದಂತೆ ಥಳಿಸಿದ್ದು, ಚಿಕಿತ್ಸೆಗೆ ಸ್ಪಂದಿಸದೇ ಸಾವನ್ನಪ್ಪಿರುವ ಪ್ರಕರಣ ಜಿಲ್ಲೆಯ ಹಾನಗಲ್ ತಾಲೂಕಿನ ಕೊಪ್ಪರಸಿಕೊಪ್ಪ ಗ್ರಾಮದಲ್ಲಿ ಗುರುವಾರ ನಡೆದಿದೆ. ಮೃತನನ್ನು ಪ್ರಕಾಶ್ ಓಲೇಕಾರ ಎಂದು ಗುರುತಿಸಲಾಗಿದೆ. ಆರೋಪಿಗಳು ಪ್ರಕಾಶನನ್ನು ಲೈಟ್ ಕಂಬಕ್ಕೆ ಕಟ್ಟಿ ಮನ ಬಂದಂತೆ ಥಳಿಸಿದ್ದಾರೆ. ಅಲ್ಲದೇ, ಪ್ರಕಾಶ ಕೊರಳಿಗೆ ಚಪ್ಪಲಿ ಹಾರ ಹಾಕಿ, ಕಾಲಿಗೆ ಬೆಂಕಿ ಹಚ್ಚಿ ವಿಕೃತಿ ಮೆರೆದಿದ್ದಾರೆ ಎಂದು ಆರೋಪಿಸಲಾಗಿದೆ.

ಎಫ್ಐಆರ್ ವಿವರ: "ಗುರುವಾರ ಮಧ್ಯಾಹ್ನ 2 ಗಂಟೆ ಸುಮಾರಿಗೆ ಬಂದ ಆರೋಪಿತರು ತಮ್ಮ ಮನೆಯ ಹೆಣ್ಣು ಮಕ್ಕಳೊಂದಿಗೆ ಅಕ್ರಮ ಸಂಬಂಧ ಹೊಂದಿರುವುದಾಗಿ ಅವಾಚ್ಯವಾಗಿ ಶಬ್ದಗಳಿಂದ ನಿಂದಿಸಿದ್ದಾರೆ. ಆಗ ನನ್ನ ಸಹೋದರ ಪ್ರಕಾಶ್, ಈ ರೀತಿ ಆರೋಪ ಮಾಡುವುದು ಸರಿಯಲ್ಲ, ನನಗೆ ಅವಳೊಂದಿಗೆ ಅನೈತಿಕ ಸಂಬಂಧ ಇಲ್ಲ ಎಂದಿದ್ದಾನೆ. ಆದರೆ ಕೋಪಗೊಂಡ ಆರೋಪಿಗಳು ಆತನ ಮೇಲೆ ಹಲ್ಲೆ ಮಾಡಿ, ವಿದ್ಯುತ್ ಕಂಬಕ್ಕೆ ಕಟ್ಟಿ ಮಾರಣಾಂತಿಕವಾಗಿ ಥಳಿಸಿದ್ದಾರೆ. ಇದರಿಂದ ಗಾಯಗೊಂಡ ಪ್ರಕಾಶನನ್ನು ಹಾನಗಲ್ ಆಸ್ಪತ್ರೆಗೆ ದಾಖಲು ಮಾಡಿದರೂ ಕೂಡ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾರೆ" ಎಂದು ಮೃತನ ಸಹೋದರ ಫಕ್ಕೀರೇಶ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಅಲ್ಲದೆ, ಆರೋಪಿಗಳು ಫಕ್ಕೀರೇಶ ಮತ್ತು ಮಹಿಳೆಗೂ ಕೂಡ ಹಲ್ಲೆ ಮಾಡಿದ್ದಾರೆ ಎಂದು ದೂರಲಾಗಿದೆ. ದೂರಿನ ಅನ್ವಯ ಹಾನಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಲಂ: 103(1),74,189(2), 191(2),191(3), 115(2), 118(1)352, 351(2)(3), 126(2), 133, ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, 07 ಮಂದಿ ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದೆ. ಪ್ರಕರಣದ ತನಿಖೆ ಮುಂದುವರೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ವಿದ್ಯುತ್ ಶಾಕ್ ತಗುಲಿ ಕಾರ್ಮಿಕ ಸಾವು

**ಕಾಸರಗೋಡು:** ಚಪ್ಪರ ತೆಗೆಯುತ್ತಿದ್ದಾಗ ವಿದ್ಯುತ್ ಶಾಕ್ ತಗುಲಿ ಕಾರ್ಮಿಕ ಮೃತಪಟ್ಟ ದಾರುಣ ಘಟನೆ ಕಾಸರಗೋಡು ನಗರದ ತೆರುವತ್ ನಲ್ಲಿ ಗುರುವಾರ ಮುಂಜಾನೆ ನಡೆದಿದೆ.

ಬಾಗಲಕೋಟೆ ಯ ಪ್ರಮೋದ್ (27) ಮೃತ ಪಟ್ಟವರು. ತಳಂಗರೆ ತೆರುವತ್ ನಲ್ಲಿ ವಿವಾಹ ಮನೆಯ ಚಪ್ಪರ ತೆಗೆಯುತ್ತಿದ್ದಾಗ ಚಪ್ಪರದ ಕಂಬ ವಿದ್ಯುತ್ ತಂತಿಗೆ ತಗಲಿ ಈ ಘಟನೆ ನಡೆದಿದೆ. ಸಮೀಪದಲ್ಲೇ ಹಾದು ಹೋಗುತ್ತಿದ್ದ ವಿದ್ಯುತ್ ತಂತಿಗೆ ಸ್ಪರ್ಶಿಸಿ ಈ ಅವಘಡ ನಡೆದಿದೆ.

ಕೂಡಲೇ ಸಮೀಪದ ಆಸ್ಪತ್ರೆಗೆ ತಲಪಿಸಿ ದರೂ ಜೀವ ಉಳಿಸಲಾಗಲಿಲ್ಲ. ಕಾಸರಗೋಡು ನಗರ ಠಾಣಾ ಪೊಲೀಸರು ಪ್ರಕರಣ ದಾಖಲಿಸಿ ಕೊಂಡಿದ್ದಾರೆ. ಮೃತ ದೇಹವನ್ನು ಕಾಸರಗೋಡು ಜನರಲ್ ಆಸ್ಪತ್ರೆಯ ಶವಾಗಾರದಲ್ಲಿರಿಸಲಾಗಿದೆ.

# ಮತ್ತೋರ್ವ ಅಯ್ಯಪ್ಪ ಮಾಲಾಧಾರಿ ಸಾವು

**ಹುಬ್ಬಳ್ಳಿ:** ಇಲ್ಲಿನ ಉಣಕಲ್‌ನ ಅಚ್ಚವ್ವ ಕಾಲೋನಿಯಲ್ಲಿ ಸಂಭವಿಸಿದ್ದ ಗ್ಯಾಸ್ ಸಿಲಿಂಡರ್ ಸ್ಫೋಟ ಪ್ರಕರಣದಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮತ್ತೊಬ್ಬ ಅಯ್ಯಪ್ಪ ಮಾಲಾಧಾರಿ ಸಾವನ್ನಪ್ಪಿದ್ದಾರೆ. ಈ ಮೂಲಕ ಮೃತಪಟ್ಟವರ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ.



ಘಟನೆಯಲ್ಲಿ 9 ಮಂದಿ ಅಯ್ಯಪ್ಪ ಮಾಲಾಧಾರಿಗಳು ಗಾಯಗೊಂಡಿದ್ದರು. ಅವರಲ್ಲಿ ಅಜ್ಜಾಸ್ವಾಮಿ ಉರ್ಫ್ ನಿಂಗಪ್ಪ ಬೇಪಾರಿ(58) ಹಾಗೂ ಸಂಜಯ ಸವದತ್ತಿ (20) ಎಂಬ ಇಬ್ಬರು ಗುರುವಾರ ಬೆಳಗಿನ ಜಾವ ಮೃತಪಟ್ಟಿದ್ದರು. ಬಳಿಕ ಮತ್ತೋರ್ವ ಅಯ್ಯಪ್ಪ ಮಾಲಾಧಾರಿ ರಾಜು ಮೂಗೇರಿ (21) ಕೂಡ ಚಿಕಿತ್ಸೆಗೆ ಸ್ಪಂದಿಸದೇ ಕೊನೆಯುಸಿರೆಳೆದಿದ್ದಾರೆ.


ಇನ್ನುಳಿದ ಗಾಯಾಳುಗಳಾದ ವಿನಾಯಕ ಬಾತಕೇರ (12), ಪ್ರಕಾಶ ಬಾರಕೇರ (42), ಮಂಜು ತೋರದ (22), ಪ್ರವೀಣ ಚಲವಾದಿ (24), ತೇಜಸ್ ರೆಡ್ಡಿ (26) ಮತ್ತು ಶಂಕರ ರಾಯನಗೌಡ್ರ (29) ಇವರುಗಳ ಸ್ಥಿತಿ ಇನ್ನೂ ಗಂಭೀರವಾಗಿದ್ದು, ಕೆಎಂಸಿಆರ್‌ಐ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆದಿದೆ.

ಸಿಲಿಂಡರ್ ಸ್ಫೋಟ: ಡಿಸೆಂಬರ್ 23ರಂದು ಎಂದಿನಂತೆ ಅಯ್ಯಪ್ಪಸ್ವಾಮಿ ಮಾಲಾಧಾರಿಗಳು ತಮ್ಮ ವ್ರತವನ್ನು ಮುಗಿಸಿ, ಅಯ್ಯಪ್ಪನಿಗೆ ಪೂಜೆ ಸಲ್ಲಿಸಿ ನಿದ್ರೆಗೆ ಜಾರಿದ್ದರು. ಈ ಸಂದರ್ಭದಲ್ಲಿ ಓರ್ವ ಅಯ್ಯಪ್ಪ ಮಾಲಾಧಾರಿಯ ಕಾಲು ಗ್ಯಾಸ್ ಸಿಲಿಂಡರ್‌ಗೆ ತಾಗಿದ ಪರಿಣಾಮ ಗ್ಯಾಸ್ ಸೋರಿಕೆಯಾಗಿದೆ. ದೇವರಿಗೆ ಹಚ್ಚಿದ್ದ ದೀಪ ಉರಿಯುತ್ತಿದ್ದರಿಂದ ಏಕಾಏಕಿ ಬೆಂಕಿ ಹೊತ್ತಿಕೊಂಡಿತ್ತು. ಘಟನೆಯಲ್ಲಿ 9 ಜನ ಅಯ್ಯಪ್ಪ ಮಾಲಾಧಾರಿಗಳಿಗೆ ಗಂಭೀರವಾಗಿ ಗಾಯಗಳಾಗಿದ್ದು, ಸ್ಥಳೀಯರು ಕಿಮ್ಸ್ ಆಸ್ಪತ್ರೆಗೆ ರವಾನಿಸಿದ್ದರು. ಈ ಕುರಿತಂತೆ ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬೆಂಗಳೂರು: 5,500 ಪಾನಮತ್ತ ಚಾಲಕರ ವಿರುದ್ಧ ಪ್ರಕರಣ, ಡಿಎಲ್ ರದ್ದತಿಗೆ ಶಿಫಾರಸು

**ಬೆಂಗಳೂರು:** ಪಾನಮತ್ತ ವಾಹನ ಚಾಲನೆ ಹಾಗೂ ವ್ಹೀಲಿಂಗ್ ಮಾಡುವವರ ವಿರುದ್ಧ ನಿರಂತರ ಕಾರ್ಯಾಚರಣೆ ನಡೆಸುತ್ತಿರುವ ನಗರದ ಪೂರ್ವ ವಿಭಾಗದ ಸಂಚಾರ ಪೊಲೀಸರು ನಿಯಮ ಉಲ್ಲಂಘಿಸಿದ ಸವಾರರಿಗೆ ಬಿಸಿ ಮುಟ್ಟಿಸಿದ್ದಾರೆ.

ಪಾನಮತ್ತ ಚಾಲನೆ ಹಾಗೂ ಅಪಾಯಕಾರಿ ವ್ಹೀಲಿಂಗ್ ಮಾಡುವವರ ವಿರುದ್ಧ ಸಮರ ಸಾರಿರುವ ಪೂರ್ವ ವಿಭಾಗದ ಸಂಚಾರ ಪೊಲೀಸರು, ಡಿಸೆಂಬರ್ 1ರಿಂದ 26ರ ವರೆಗೆ ಕಾರ್ಯಾಚರಣೆ ನಡೆಸಿ ವ್ಹೀಲಿಂಗ್ ಮಾಡುತ್ತಿದ್ದ 29 ದ್ವಿಚಕ್ರ ವಾಹನ ಜಪ್ತಿ ಮಾಡಿ ಅವರ ವಿರುದ್ಧ ಎಫ್ಐಆರ್ ದಾಖಲಿಸಿಕೊಂಡಿದ್ದಾರೆ.



ಹಾಗೆಯೇ, ಸುಮಾರು 3,60,214 ವಾಹನಗಳನ್ನು ತಪಾಸಣೆ ನಡೆಸಿ 5,500 ಚಾಲಕ/ಸವಾರರ ವಿರುದ್ಧ ಮದ್ಯಪಾನ ಸೇವನೆದಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ನಿಯಮ ಉಲ್ಲಂಘಿಸಿದವರ ವಾಹನ ಪರವಾನಗಿ (ಡಿಎಲ್) ರದ್ದುಗೊಳಿಸುವಂತೆ ಸಂಬಂಧಪಟ್ಟ ಆರ್‌ಟಿಓ ಕಚೇರಿಗಳಿಗೆ ಶಿಫಾರಸು ಮಾಡಲಾಗಿದೆ. ಪೂರ್ವ ವಿಭಾಗದ ಶಿವಾಜಿನಗರ, ಪುಲಕೇಶಿನಗರ, ಬಾಣಸವಾಡಿ, ಹಲಸೂರು, ಜೀವನ್ ಭೀಮಾನಗರ ವ್ಯಾಪ್ತಿಗಳಲ್ಲಿ ಪೊಲೀಸರು ಕಾರ್ಯಾಚರಣೆ ನಡೆಸಿರುವುದಾಗಿ ಸಂಚಾರ ಪೊಲೀಸರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವ ರಣಜಿ ಕ್ರಿಕೆಟರ್ ಹಠಾತ್ ನಿಧನ ಶೋಕ ಸಾಗರದಲ್ಲಿ ಕ್ರೀಡಾಲೋಕ



ಕ್ರಿಕೆಟ್ ಲೋಕದಲ್ಲಿ ಶೋಕ ಆವರಿಸಿದೆ. ರಣಜಿ ಆಟಗಾರ ಹಠಾತ್ ನಿಧನರಾಗಿದ್ದು ಕ್ರೀಡಾಲೋಕಕ್ಕೆ ಆಘಾತವಾಗಿದೆ.

ಹೌದು, ವಿಜಯ್ ಹಜಾರೆ, ರಣಜಿ ಟ್ರೋಫಿಯಂತಹ ಪ್ರತಿಷ್ಠಿತ ಟೂರ್ನಿಗಳಲ್ಲಿ ಭಾಗಿಯಾಗಿ ತಂಡವನ್ನು ಗೆಲ್ಲಿಸಿದ್ದ ಬ್ಯಾಟರ್ ಹಠಾತ್ ನಿಧನ ಹೊಂದಿದ್ದು, ಕ್ರಿಕೆಟ್ ಲೋಕಕ್ಕೆ ಆಘಾತ ತಂದಿದೆ. ಬಂಗಾಳದ ರಣಜಿ ಟ್ರೋಫಿಯ ಮಾಜಿ ಆಟಗಾರನಾಗಿದ್ದ ಶುಭೋಜಿತ್ ಬ್ಯಾನರ್ಜಿ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ.

2014ರ ವಿಜಯ್ ಹಜಾರೆ ಟ್ರೋಫಿಯಲ್ಲಿ ಒಡಿಶಾ ವಿರುದ್ಧ ಬಂಗಾಳಕ್ಕೆ ಪಾದಾರ್ಪಣೆ ಮಾಡಿದ್ದ ಶುಭೋಜಿತ್, ಮೂರು ರಣಜಿ ಟ್ರೋಫಿ ಪಂದ್ಯಗಳನ್ನು ಆಡಿದ್ದರು. ಸದ್ಯ ಅವರು ಸ್ಥಳೀಯ ಕ್ರಿಕೆಟ್‌ಗಳನ್ನು ಆಡುತ್ತ ಖ್ಯಾತಿ ಪಡೆದಿದ್ದರು. ಕುಟುಂಬ ಸದಸ್ಯರ ಪ್ರಕಾರ, ಶುಭೋಜಿತ್ ಬ್ಯಾನರ್ಜಿ ಅವರು ಬೆಳಗಿನ ಉಪಾಹಾರ ಸೇವಿಸಿ ವಿಶ್ರಾಂತಿ ಪಡೆಯುತ್ತಿದ್ದರು.

ಬಳಿಕ ಕೆಲ ಗಂಟೆಗಳೂ ಕಳೆದರೂ ತಮ್ಮ ಕೋಣೆಯಿಂದ ಹೊರ ಬರದೆ ಇದ್ದುದಕ್ಕೆ, ಆತಂಕಗೊಂಡ ಪೋಷಕರು ಕೋಣೆ ಪ್ರವೇಶಿಸಿ ನೋಡಿದಾಗ ಶುಭೋಜಿತ್ ಪ್ರಜ್ಞಾಹೀನ ಸ್ಥಿತಿಯಲ್ಲಿ ಕಂಡು ಬಂದಿದ್ದಾರೆ.

ಕೂಡಲೇ ವೈದ್ಯರನ್ನು ಕರೆಯಿಸಲಾಯಿತು. ಆದರೆ ಅಷ್ಟೊತ್ತಿಗಾಗಲೇ 39 ವರ್ಷದ ಶುಭೋಜಿತ್ ಪ್ರಾಣ ಪಕ್ಷಿ ಹಾರಿ ಹೋಗಿತ್ತು. ಈ ಘಟನೆ ಸೋಮವಾರ ನಡೆದಿದ್ದು, ಮಂಗಳವಾರ ಬೆಳಕಿಗೆ ಬಂದಿದೆ. ಘಟನೆಯಿಂದ ಕ್ರೀಡಾಲೋಕ ಆಘಾತಕ್ಕೊಳಗಾಗಿದೆ.

ಜೈಪುರದಲ್ಲಿ ಮಾಜಿ ರಣಜಿ ಪ್ಲೇಯರ್ ನಿಧನ; ಮತ್ತೊಂದೆಡೆ ಜೈಪುರದಲ್ಲೂ ಇಂತಹದ್ದೇ ಘಟನೆ ಸಂಭವಿಸಿದೆ. ವೆಟರನ್ಸ್ ಡಬಲ್ ವಿಕೆಟ್ ಟೂರ್ನಿಯ ವೇಳೆ ರಾಜಸ್ಥಾನದ ಮಾಜಿ ರಣಜಿ ಆಟಗಾರ ಯಶ್ ಗೌರ್ (58 ವರ್ಷ) ಪಂದ್ಯದ ನಡುವೆಯೇ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ. ಫೀಲ್ಡಿಂಗ್ ಮಾಡುತ್ತಿದ್ದ ಅವರು ಹಠಾತ್ ಕುಸಿದು ಬಿದ್ದಿದ್ದರು. ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿತ್ತಾದರೂ ಯಾವುದೇ ಪ್ರಯೋಜನೆ ಆಗಲಿಲ್ಲ. ಅವರು ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದ್ದರು. ಗೌರ್ ಅವರ ಹಠಾತ್ ನಿಧನಕ್ಕೆ ಜೈಪುರ ಮತ್ತು ರಾಜಸ್ಥಾನದ ಕ್ರಿಕೆಟ್ ಅಭಿಮಾನಿಗಳು ಆಘಾತಕ್ಕೊಳಗಾಗಿದ್ದಾರೆ.

ಪಂದ್ಯದ ವೇಳೆ ಮೈದಾನದಲ್ಲಿದ್ದ ಮಾಜಿ ರಣಜಿ ಕ್ರಿಕೆಟಿಗ ನಳಿನ್ ಜೈನ್ ಪ್ರಕಾರ, ಯಶ್ ಗೌರ್ ಸ್ಕ್ವೇರ್ ಲೆಗ್‌ನಲ್ಲಿ ಫೀಲ್ಡಿಂಗ್ ಮಾಡುತ್ತಿದ್ದರು. ಈ ವೇಳೆ ಅವರು ಇದ್ದಕ್ಕಿದ್ದಂತೆ ಕೆಳಗೆ ಬಿದ್ದಿದ್ದಾರೆ. ತಕ್ಷಣವೇ ಅವರಿಗೆ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಅಷ್ಟೊತ್ತಿಗಾಗಲೇ ಅವರು ಉಸಿರು ಚೆಲ್ಲಿದ್ದರು ಎಂದು ಘಟನೆ ಬಗ್ಗೆ ತಿಳಿಸಿದ್ದಾರೆ.

80ರ ದಶಕದಲ್ಲಿ ರಾಜಸ್ಥಾನ ರಣಜಿ ತಂಡಕ್ಕೆ ಆಯ್ಕೆಯಾಗಿದ್ದ ಯಶ್ ಅವರಿಗೆ ಪ್ಲೇಯಿಂಗ್–11ರಲ್ಲಿ ಆಡಲು ಅವಕಾಶ ಸಿಕ್ಕಿರಲಿಲ್ಲ. ಇಷ್ಟೆಲ್ಲಾ ಆದರೂ ಕ್ರಿಕೆಟ್ ಮೇಲಿನ ಅವರ ಉತ್ಸಾಹ ಕಡಿಮೆಯಾಗಿರಲಿಲ್ಲ. ಅವರು ಸ್ಥಳೀಯ ಕ್ರಿಕೆಟ್‌ಗಳಲ್ಲಿ ಭಾಗಿಯಾಗಿ ಖ್ಯಾತಿ ಪಡೆದಿದ್ದರು.

# ಪಯಣ ಮುಗಿಸಿದ ಆರ್ಥಿಕ ತಜ್ಞ

**ನವದೆಹಲಿ:** ದೇಶದ ಮಾಜಿ ಪ್ರಧಾನಮಂತ್ರಿ, ಆರ್ಥಿಕ ತಜ್ಞ ಮನಮೋಹನ್ ಸಿಂಗ್ ಅವರು ವಿಧಿವಶರಾಗಿದ್ದಾರೆ. ಇಂದು ರಾತ್ರಿ ಅವರ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆ ದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ (ಏಮ್ಸ್) ದಾಖಲಿಸಲಾಗಿತ್ತು. 92 ವರ್ಷದ ಮಾಜಿ ಪ್ರಧಾನಿಯನ್ನು ರಾತ್ರಿ 8 ಗಂಟೆ ಸುಮಾರಿಗೆ ಆಸ್ಪತ್ರೆಯ ತುರ್ತು ನಿಗಾ ವಿಭಾಗದಲ್ಲಿ ದಾಖಲಿಸಲಾಗಿತ್ತು.

ಡಾ. ಸಿಂಗ್ ಅವರ ಆರೋಗ್ಯ ಸ್ಥಿತಿ ಗಂಭೀರವಾದ ಹಿನ್ನೆಲೆ ಅವರನ್ನು ಗುರುವಾರ ಸಂಜೆ ಏಮ್ಸ್‌ಗೆ ಕರೆತರಾಗಿತ್ತು. ಬಳಿಕ ಅವರನ್ನು ತುರ್ತು ನಿಗಾ ಘಟಕದಲ್ಲಿ ದಾಖಲಿಸಲಾಗಿತ್ತು. ಅವರು ವಿಧಿವಶರಾಗಿದ್ದಾರೆ ಎಂದು ಏಮ್ಸ್ ವೈದ್ಯರು ತಿಳಿಸಿದ್ದಾರೆ.

ಮನಮೋಹನ್ ಸಿಂಗ್ ಅವರು 1991– 96ರ ಅವಧಿಯಲ್ಲಿ ಮಾಜಿ ಪ್ರಧಾನಿ ಪಿ. ವಿ. ನರಸಿಂಹರಾವ್ ಅವರ ನೇತೃತ್ವದ ಸರ್ಕಾರದಲ್ಲಿ ಹಣಕಾಸು ಸಚಿವರಾಗಿ ಕಾರ್ಯನಿರ್ವಹಿಸಿ ಮೆಚ್ಚುಗೆ ಗಳಿಸಿದ್ದರು. ದೇಶದ ಆರ್ಥಿಕತೆಯಲ್ಲಿ ವ್ಯಾಪಕ ಸುಧಾರಣೆಗಳನ್ನು ತಂದಿದ್ದರು.

ಕಾಂಗ್ರೆಸ್ ನೇತೃತ್ವದಲ್ಲಿ 2004ರಿಂದ 2014ರ ವರೆಗಿನ ಯುಪಿಎ ಸರ್ಕಾರದ ಎರಡು ಅವಧಿಯಲ್ಲಿ ಪ್ರಧಾನಿಯಾಗಿದ್ದರು. ಬಳಿಕ ರಾಜ್ಯಸಭೆಗೆ ಆಯ್ಕೆಯಾಗಿದ್ದ ಅವರು, ಈ ವರ್ಷದ ಏಪ್ರಿಲ್‌ನಲ್ಲಿ ರಾಜಕೀಯದಿಂದ ನಿವೃತ್ತ ಪಡೆದಿದ್ದರು.


**ಪ್ರಧಾನಿ ಮೋದಿ ಕಂಬನಿ:** ಆರ್ಥಿಕ ತಜ್ಞನ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಕಂಬನಿ ಮಿಡಿದಿದ್ದಾರೆ. ಭಾರತ ಅತ್ಯಂತ ಗೌರವಾನ್ವಿತ ನಾಯಕರಲ್ಲಿ ಒಬ್ಬರಾದ ಡಾ. ಮನಮೋಹನ್ ಸಿಂಗ್ ಜಿ ಅವರನ್ನು ಕಳೆದುಕೊಂಡಿದೆ. ವಿನಮ್ರತೆಯ ಹಾದಿಯಿಂದ ಅವರು ಗೌರವಾನ್ವಿತ ಅರ್ಥಶಾಸ್ತ್ರಜ್ಞರಾದರು. ಹಣಕಾಸು ಸಚಿವರಾಗಿ ಅಲ್ಲದೆ ವಿವಿಧ ಸರ್ಕಾರಿ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದರು. ದೇಶದ ಪ್ರಧಾನಿಯಾಗಿ ಅವರು ಜನರ ಜೀವನವನ್ನು ಸುಧಾರಿಸಲು ವ್ಯಾಪಕ ಪ್ರಯತ್ನಗಳನ್ನು ಮಾಡಿದರು ಎಂದು ಹೇಳಿದ್ದಾರೆ. ಸಿಂಗ್ ಜೊತೆಗಿನ ಒಡನಾಟವನ್ನು ಮೆಲುಕು ಹಾಕಿರುವ ಮೋದಿ, ಡಾ. ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಮತ್ತು ನಾನು ಗುಜರಾತ್ ಸಿಎಂ ಆಗಿದ್ದಾಗ ಆಡಳಿತದ ಕುರಿತು ಸಂವಹನ ನಡೆಸುತ್ತಿದ್ದೆವು. ಸರ್ಕಾರದ ವಿವಿಧ ವಿಷಯಗಳ ಕುರಿತು ವ್ಯಾಪಕ ಚರ್ಚೆಗಳನ್ನು ನಡೆಸಿದ್ದೇವೆ. ಅವರ ಬುದ್ಧಿವಂತಿಕೆ ಮತ್ತು ನಮ್ರತೆ ಯಾವಾಗಲೂ ಗೋಚರಿಸುತ್ತದೆ ಎಂದು ಸ್ಮರಿಸಿದ್ದಾರೆ.

ಶುಕ್ರವಾರ ಕಾಂಗ್ರೆಸ್‌ನ ಎಲ್ಲ ಕಾರ್ಯಕ್ರಮ ರದ್ದು: ಕರ್ನಾಟಕದ ಬೆಳಗಾವಿಯಲ್ಲಿ ನಡೆಯಬೇಕಿದ್ದ ರ್‍ಯಾಲಿ ಸೇರಿದಂತೆ ನಾಳೆ ನಡೆಯಬೇಕಿದ್ದ ಕಾಂಗ್ರೆಸ್ ಪಕ್ಷದ ಎಲ್ಲಾ ಚಟುವಟಿಕೆಗಳನ್ನು ರದ್ದುಗೊಳಿಸಲಾಗಿದೆ.

ಮಾತಿಗಿಂತ ಕ್ರಿಯಾಶೀಲ ವ್ಯಕ್ತಿ. ರಾಷ್ಟ್ರ ನಿರ್ಮಾಣಕ್ಕೆ ನೀಡಿದ ಅಪಾರ ಕೊಡುಗೆಯಿಂದಾಗಿ ಮನಮೋಹನ್ ಸಿಂಗ್ ಅವರು ಇತಿಹಾಸದ ಪುಟಗಳಲ್ಲಿ ಶಾಶ್ವತವಾಗಿ ಉಳಿಯುತ್ತಾರೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರು ತಿಳಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕೂಡ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ಶ್ರದ್ಧಾಂಜಲಿ ಅರ್ಪಿಸಿದ್ದಾರೆ. ಭಾರತೀಯ ರಿಸರ್ವ್ ಬ್ಯಾಂಕ್ ಗವರ್ನರ್‌ನಿಂದ ಹಿಡಿದು ದೇಶದ ಹಣಕಾಸು ಸಚಿವರಾಗಿ, ಪ್ರಧಾನಿಯಾಗಿ ಡಾ. ಸಿಂಗ್ ಅವರದ್ದು ದೊಡ್ಡ ಹಾದಿ ಎಂದು ಹೇಳಿದ್ದಾರೆ.



# ದೇಶದ ಆರ್ಥಿಕ ದಿಕ್ಕನ್ನು ಭದ್ರಪಡಿಸಿದ ಸಿಂಗ್



ನವದೆಹಲಿ: ಭಾರತದ ಆರ್ಥಿಕ ಸುಧಾರಣೆಗಳ ಶಿಲ್ಪಿ ಮನಮೋಹನ್ ಸಿಂಗ್ ಅವರು 1991ರ ಕೇಂದ್ರ ಬಜೆಟ್??ಗೆ ಅಂಗೀಕಾರ ಪಡೆಯಲು ಭಾರಿ ಕಸರತ್ತನ್ನೇ ಮಾಡಬೇಕಾಯಿತು. ಅವರು ಅಂದು ತೆಗೆದುಕೊಂಡ ಹಾಗೂ ಎದುರಿಸಿದ ಸವಾಲುಗಳು ನೂರಾರು. ಅಕ್ಷರಶಃ ಪ್ರಯೋಗ ಮಾಡಿ, ಟೀಕೆಗಳ ಸರಮಾಲೆಯನ್ನು ಎದುರಿಸಿ ಗೆದ್ದು ಬೀಗಿದರು. ದೇಶದ ಆರ್ಥಿಕತೆಗೆ ಭದ್ರ ಬುನಾದಿ ಹಾಕಿದರು.

ಪಿ ವಿ ನರಸಿಂಹ ರಾವ್ ನೇತೃತ್ವದ ಸರ್ಕಾರದಲ್ಲಿ ಮನಮೋಹನ್? ಸಿಂಗ್? ಹಣಕಾಸು ಸಚಿವರಾಗಿ ನೇಮಕಗೊಂಡಿದ್ದರು. ಆಗ ಅವರು ತಮ್ಮ ಚೊಚ್ಚಲ ಬಜೆಟ್ ಮಂಡಿಸಿದ್ದರು. ಬಜೆಟ್ ನಂತರದ ಪತ್ರಿಕಾಗೋಷ್ಠಿಯಲ್ಲಿ ಪತ್ರಕರ್ತರನ್ನು ಎದುರಿಸಿ ಅವರು ಕೇಳಿದ ಎಲ್ಲ ಪ್ರಶ್ನೆಗಳಿಗೆ ಸಮಾಧಾನದಿಂದ ಉತ್ತರಿಸಿದ್ದರು. ಸುಧಾರಣೆಯ ಬಗ್ಗೆ ಸಮರ್ಥನೆ ಮಾಡಿಕೊಂಡಿದ್ದರು.

1991 ರಲ್ಲಿ ಸಿಂಗ್ ಅವರ ಐತಿಹಾಸಿಕ ಸುಧಾರಣೆಗಳು ಭಾರತವನ್ನು ದಿವಾಳಿತನದಿಂದ ರಕ್ಷಿಸಿದವು ಮಾತ್ರವಲ್ಲದೇ , ದೇಶದ ಆರ್ಥಿಕ ಅಭಿವೃದ್ಧಿಯ ಪಥವನ್ನು ಏರುತ್ತಿರುವ ಜಾಗತಿಕ ಶಕ್ತಿಯಾಗಿ ಮರು ವ್ಯಾಖ್ಯಾನಿಸುವಂತೆ ಮಾಡಿದವು.

ಜುಲೈ 25, 1991 ರಂದು ಕೇಂದ್ರ ಬಜೆಟ್ ಮಂಡನೆಯಾದ ಒಂದು ದಿನದ ನಂತರ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ಅನಿರೀಕ್ಷಿತವಾಗಿ ಕಾಣಿಸಿಕೊಂಡಿದ್ದರು. ತಮ್ಮ ಬಜೆಟ್‌ನ ಸಂದೇಶವನ್ನು ಸಮರ್ಥವಾಗಿ ಪತ್ರಕರ್ತರೆದರು ಮಂಡಿಸಿ ಎಲ್ಲ ಪ್ರಶ್ನೆಗಳಿಗೂ ಉತ್ತರಿಸಿದರು. ಈ ಬಗ್ಗೆ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ 'ಟು ದಿ ಬ್ರಿಂಕ್ ಅಂಡ್ ಬ್ಯಾಕ್: ಇಂಡಿಯಾಸ್ 1991 ಸ್ಟೋರಿ' ಎಂಬ ಪುಸ್ತಕದಲ್ಲಿ ವಿವರವಾಗಿ ಬರೆದಿದ್ದಾರೆ. ನರಸಿಂಹ ರಾವ್ ಅವರು ಪ್ರಧಾನಿಯಾದ ನಂತರ ನಡೆದ ವೇಗದ ಬದಲಾವಣೆಗಳನ್ನು ತಮ್ಮ ಪುಸ್ತಕದಲ್ಲಿ ವಿವರವಾಗಿ ಬರೆದಿದ್ದಾರೆ.

ಪತ್ರಕರ್ತರ ಬೆಂಕಿ ಉಂಡೆಯಂತಹ ಪ್ರಶ್ನೆಗಳಿಗೆ ಸಿಂಗ್ ಉತ್ತರ: ಬಜೆಟ್ ಮಂಡನೆಯ ಒಂದು ದಿನದ ನಂತರ ಪತ್ರಕರ್ತರನ್ನು ಎದುರಿಸಿದ ಮನಮೋಹನ್ ಸಿಂಗ್, ತಮ್ಮ ಬಜೆಟ್ ಬಗ್ಗೆ ಎಳೆ ಎಳೆಯಾಗಿ ದೇಶದ ಮುಂದಿಟ್ಟರು, ತಮ್ಮ ನೀತಿ – ನಿರ್ಧಾರಗಳನ್ನು ಸಮರ್ಥಿಸಿಕೊಂಡರು. ಇದೊಂದು 'ಮಾನವೀಯ ಮುಖವುಳ್ಳ ಬಜೆಟ್' ಎಂದು ಬಣ್ಣಿಸಿದರು. ಅವರು ರಸಗೊಬ್ಬರ, ಪೆಟ್ರೋಲ್ ಮತ್ತು ಎಲ್‌ಪಿಜಿ ಬೆಲೆಗಳನ್ನು ಹೆಚ್ಚಿಸುವ ಪ್ರಸ್ತಾವನೆಗಳನ್ನು ಜೋಪಾನವಾಗಿ ಸಮರ್ಥಿಸಿಕೊಂಡರು ಎಂದು ಜೈರಾಂ ರಮೇಶ್ 2015 ರಲ್ಲಿ ಪ್ರಕಟವಾದ ತಮ್ಮ ಪುಸ್ತಕದಲ್ಲಿ ಕಣ್ಣಿಗೆ ಕಟ್ಟುವಂತೆ ವಿವರಿಸಿದ್ದಾರೆ.

ಅಂದಿನ ಕಾಂಗ್ರೆಸ್ ಸಂಸದೀಯ ಪಕ್ಷದ ಸಭೆಯಲ್ಲಿ ನಡೆದಿದ್ದೇನು?: ಕಾಂಗ್ರೆಸ್ ಶ್ರೇಯಾಂಕಗಳಲ್ಲಿನ ಅಸಮಾಧಾನ ಗ್ರಹಿಸಿದ ಅಂದಿನ ಪ್ರಧಾನಿ ನರಸಿಂಹ ರಾವ್ ಅವರು ಆಗಸ್ಟ್ 1, 1991 ರಂದು ಕಾಂಗ್ರೆಸ್ ಸಂಸದೀಯ ಪಕ್ಷದ (ಅಕಕ) ಸಭೆ ಕರೆದಿದ್ದರು. ಪಕ್ಷದ ಸಂಸದರು "ತಮ್ಮ ಮನದಾಳ, ಅಸಮಾಧಾನಗಳನ್ನು ಹೊರ ಹಾಕಲು ಮುಕ್ತ ಅವಕಾಶ ನೀಡಲು ನಿರ್ಧರಿಸಿದರು.

ಪ್ರಧಾನಿ ನರಸಿಂಹ ರಾವ್, ಮನಮೋಹನ್ ಸಿಂಗ್ ಅವರಿಗೆ ಉತ್ತರ ನೀಡಲು, ವಿರೋಧವನ್ನು ಎದುರಿಸಲು ಅವಕಾಶ ಮಾಡಿಕೊಟ್ಟರು ಅಂತಾರೆ ತಮ್ಮ ಪುಸ್ತಕದಲ್ಲಿ ಜೈರಾಂ ರಮೇಶ್. ಆಗಸ್ಟ್ 2 ಮತ್ತು 3 ರಂದು ಮತ್ತೆ ಎರಡು ಸಭೆಗಳು ನಡೆದವು. ಆಗಲೂ ಎಲ್ಲರ ಪ್ರಶ್ನೆಗಳಿಗೆ ಉತ್ತರಿಸಿದ್ದ ಮನಮೋಹನ್ ಸಿಂಗ್ ಅವರೇ, ರಾವ್ ಎಲ್ಲವನ್ನು ಮೌನದಿಂದಲೇ ನೋಡುತ್ತಿದ್ದರು.

ಸಿಂಗ್ ಬೆಂಬಲಕ್ಕೆ ನಿಂತಿದ್ದ ಅಯ್ಯರ್: ಸಿಪಿಪಿ ಸಭೆಗಳಲ್ಲಿ ಹಣಕಾಸು ಸಚಿವರು ಒಬ್ಬಂಟಿಯಾಗಿದ್ದರು ಮತ್ತು ಅವರ ಸಂಕಷ್ಟವನ್ನು ನಿವಾರಿಸಲು ಪ್ರಧಾನಿ ಏನನ್ನೂ ಮಾಡಲಿಲ್ಲ ಎಂದು ನೆನಪಿಸಿಕೊಳ್ಳುತ್ತಾರೆ ಜೈರಾಂ ರಮೇಶ್. ಅಂದು ಸಭೆಯಲ್ಲಿ ಮನಮೋಹನ್ ಸಿಂಗ್? ಅವರ ನೆರವಿಗೆ ಬಂದಿದ್ದು, ಕೇವಲ ಇಬ್ಬರು ಸಂಸದರು ಒಬ್ಬರು ಮಣಿಶಂಕರ್ ಅಯ್ಯರ್ ಮತ್ತೊಬ್ಬರು ನಾಥುರಾಮ್ ಮಿರ್ಧಾ. ಈ ಇಬ್ಬರು ಸಂಸದರು ಮನಮೋಹನ್ ಸಿಂಗ್ ಅವರ ಬಜೆಟ್ ಅನ್ನು ಪೂರ್ಣ ಹೃದಯದಿಂದ ಬೆಂಬಲಿಸಿದ್ದರು.

ಅಯ್ಯರ್ ಮನಮೋಹನ್ ಸಿಂಗ್ ಅವರ ಬಜೆಟ್ ಅನ್ನು ಬೆಂಬಲಿಸಿದರು, ಇದು ಹಣಕಾಸಿನ ಬಿಕ್ಕಟ್ಟನ್ನು ತಡೆಯಲು ಏನು ಮಾಡಬೇಕೆಂಬುದರ ಬಗ್ಗೆ ರಾಜೀವ್ ಗಾಂಧಿಯವರ ನಂಬಿಕೆಗಳಿಗೆ ಅನುಗುಣವಾಗಿದೆ ಎಂದು ಬಲವಾಗಿ ಪ್ರತಿಪಾದಿಸಿದರು. ಪಕ್ಷದ ಒತ್ತಡಕ್ಕೆ ಮಣಿದ ಸಿಂಗ್, ರಸಗೊಬ್ಬರ ಬೆಲೆಯಲ್ಲಿನ ಶೇಕಡಾ 40 ರಷ್ಟು ಹೆಚ್ಚಳವನ್ನು ಶೇಕಡಾ 30 ಕ್ಕೆ ಇಳಿಸಲು ಒಪ್ಪಿಕೊಂಡರು, ಆದರೆ ಎಲ್ಪಿಜಿ ಮತ್ತು ಪೆಟ್ರೋಲ್ ಬೆಲೆಗಳ ಏರಿಕೆಯನ್ನು ಅವರು ಕಡಿಮೆ ಮಾಡುವ ಗೋಜಿಗೆ ಹೋಗಲೇ ಇಲ್ಲ.

ಆಗಸ್ಟ್ 6 ರಂದು ಲೋಕಸಭೆಯಲ್ಲಿ ಸಿಂಗ್ ನೀಡಲಿರುವ ಹೇಳಿಕೆಯನ್ನು ನಿರ್ಧರಿಸಲು ರಾಜಕೀಯ ವ್ಯವಹಾರಗಳ ಕ್ಯಾಬಿನೆಟ್ ಸಮಿತಿಯು ಆಗಸ್ಟ್ 4 ಮತ್ತು 5, 1991 ರಂದು ಎರಡು ಬಾರಿ ಸಭೆ ಸೇರಿ ಚರ್ಚಿಸಿತು. ಕಳೆದ ಕೆಲವು ದಿನಗಳಿಂದ ಇದ್ದ ರೋಲ್–ಬ್ಯಾಕ್ ಕಲ್ಪನೆಯ ಬೇಡಿಕೆಯನ್ನು ಕೈಬಿಟ್ಟಿತು, ಆದರೆ ಈಗ ಸಣ್ಣ ಮತ್ತು ಅತಿ ಸಣ್ಣ ರೈತರ ಹಿತಾಸಕ್ತಿಗಳನ್ನು ರಕ್ಷಿಸುವ ಬಗ್ಗೆ ಹೆಚ್ಚಿನ ಒತ್ತು ನೀಡಿತ್ತು ಎಂದು ಜೈರಾಂ ರಮೇಶ್? ಬರೆದ ತಮ್ಮ ಪುಸ್ತಕ ಹೇಳಿದ್ದಾರೆ.

# ಆಧುನಿಕ ಬೆಂಗಳೂರಿಗೆ ಬುನಾದಿ ಹಾಕಿದ್ದ ಮನಮೋಹನ್ ಸಿಂಗ್

ಬೆಂಗಳೂರು: ಕರ್ನಾಟಕಕ್ಕೆ, ಅದರಲ್ಲಿಯೂ ಬೆಂಗಳೂರಿಗೆ ಹಲವು ಮೂಲಸೌಕರ್ಯ ಯೋಜನೆಗಳನ್ನು ಒದಗಿಸಿಕೊಡುವಲ್ಲಿ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಪ್ರಮುಖ ಪಾತ್ರ ವಹಿಸಿದ್ದಾರೆ. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗಲೇ 2008 ರ ಮೇ 24 ರಂದು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು (ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ) ಲೋಕಾರ್ಪಣೆಗೊಳಿಸಿದ್ದರು. ಅದಾದ ಮೂರು ವರ್ಷಗಳ ನಂತರ, 2011 ರ ನವೆಂಬರ್ 20 ರಂದು, ಬೆಂಗಳೂರಿನಲ್ಲಿ ಮತ್ತೊಂದು ಮಹತ್ವದ ಯೋಜನೆಗೆ ಚಾಲನೆ ನೀಡಿದ್ದರು. ಅದುವೇ, ನಮ್ಮ ಮೆಟ್ರೋ. ಆಗ ಬೈಯಪ್ಪನಹಳ್ಳಿಯಿಂದ ಎಂಜಿ ರಸ್ತೆಯವರೆಗೆ ನಗರದ ಮೊದಲ ಮೆಟ್ರೋ ರೈಲಿಗೆ ಅವರು ಚಾಲನೆ ನೀಡಿದ್ದರು.

ಬೆಂಗಳೂರಿನ ಬಗ್ಗೆ ಮೆಚ್ಚುಗೆ ಮಾತುಗಳನ್ನಾಡಿದ್ದ ಮನಮೋಹನ್ ಸಿಂಗ್

6,300 ಕೋಟಿ ರೂ. ವೆಚ್ಚದ ಬೆಂಗಳೂರು ಮೆಟ್ರೊ ರೈಲು ಯೋಜನೆಗೆ ಶಂಕುಸ್ಥಾಪನೆ ಮಾಡಿದ್ದ ಸಂದರ್ಭದಲ್ಲಿ ಮಾತನಾಡಿದ್ದ ಮನಮೋಹನ್ ಸಿಂಗ್, 'ಭಾರತದ ಪ್ರತಿಯೊಂದು ನಗರವು ಬೆಂಗಳೂರನ್ನು ದೃಷ್ಟಿಯಲ್ಲಿ ಇಟ್ಟುಕೊಂಡೇ ಹೆಜ್ಜೆ ಇಡುತ್ತಿವೆ. ಈ ನಗರದ ಹಿಂದಿನ ಯಶಸ್ಸನ್ನು ಗಮನದಲ್ಲಿಟ್ಟುಕೊಂಡೇ ದೃಢವಾದ, ಸಕಾರಾತ್ಮಕ ಹೆಜ್ಜೆಗಳನ್ನಿಡುತ್ತಿವೆ' ಎಂದು ಹೇಳಿದ್ದರು.

ಬೆಂಗಳೂರಿನ ಡಾ. ಬಿಆರ್ ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯದ ಅಕಾಡೆಮಿಕ್ ಸೆಷನ್‌ಗಳನ್ನು ಡಾ. ಸಿಂಗ್ 2017 ರಂದು ಅಕ್ಟೋಬರ್ 4 ರಂದು ಉದ್ಘಾಟಿಸಿದ್ದರು. ಸಿಂಗ್ ಅವರ ಬೆಂಗಳೂರು ಒಡನಾಟ ತುಂಬಾ ಹಿಂದಿನದ್ದಾಗಿತ್ತು.

1991 ರಲ್ಲೇ (ಅಂದಿನ ಪ್ರಧಾನಿ ಪಿವಿ ನರಸಿಂಹ ರಾವ್ ಅವರ ಆರ್ಥಿಕ ಸಲಹೆಗಾರರಾಗಿದ್ದಾಗ) ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ 16 ನೇ ಘಟಿಕೋತ್ಸವದಲ್ಲಿ ಸಿಂಗ್ ಭಾರತದ ಕುರಿತ ತಮ್ಮ ಆರ್ಥಿಕ ದೃಷ್ಟಿಕೋನವನ್ನು ಹಂಚಿಕೊಂಡಿದ್ದರು.



## ಏಳು ದಿನಗಳ ರಾಷ್ಟ್ರೀಯ ಶೋಕಾಚರಣೆ

ನವದೆಹಲಿ: ಏಳು ದಿನಗಳ ರಾಷ್ಟ್ರೀಯ ಶೋಕಾಚರಣೆ ಘೋಷಣೆ : ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಗೌರವಾರ್ಥ ಕೇಂದ್ರ ಸರ್ಕಾರ ಏಳು ದಿನಗಳ ಶೋಕಾಚರಣೆಯನ್ನು ಘೋಷಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲು ಶುಕ್ರವಾರ ಬೆಳಗ್ಗೆ 11 ಗಂಟೆಗೆ ಸಚಿವ ಸಂಪುಟ ಸಭೆ ಸೇರಲಿದೆ ಎಂದು ಅವರು ತಿಳಿಸಿದ್ದಾರೆ. ಸಿಂಗ್ ಅವರ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಸಲಾಗುವುದು.

ರಾಷ್ಟ್ರೀಯ ಧ್ವಜವನ್ನು ಭಾರತದಾದ್ಯಂತ ಶೋಕಾಚರಣೆಯ ದಿನಗಳಲ್ಲಿ ಅದನ್ನು ನಿಯಮಿತವಾಗಿ ಹಾರಿಸಲಾಗುವ ಎಲ್ಲ ಕಟ್ಟಡಗಳ ಮೇಲೆ ಅರ್ಧ ಮಟ್ಟಕ್ಕೆ ಹಾರಿಸಲಾಗುತ್ತದೆ ಮತ್ತು ರಾಷ್ಟ್ರೀಯ ಶೋಕಾಚರಣೆಯ ಅವಧಿಯಲ್ಲಿ ಯಾವುದೇ ಅಧಿಕೃತ ಮನರಂಜನೆ ಇರುವುದಿಲ್ಲ.

ಮನಮೋಹನ್ ಸಿಂಗ್ ಅವರು, ತಮ್ಮ ಪತ್ನಿ ಗುರುಶರಣ್ ಕೌರ್ ಮತ್ತು ಅವರ ಮೂವರು ಪುತ್ರಿಯರನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯ ವ್ಯವಸ್ಥೆಯನ್ನು ಶೀಘ್ರದಲ್ಲೇ ಘೋಷಿಸುವ ನಿರೀಕ್ಷೆಯಿದೆ, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ರಾಷ್ಟ್ರದ ನಾಯಕರು ಅವರ ಸ್ಮರಣೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಸಿಂಗ್‌ಅವರಿಗೆ ನಮನ ಸಲ್ಲಿಸಿದ ರಾಹುಲ್ ಗಾಂಧಿ, ಮಲ್ಲಿಕಾರ್ಜುನ್ ಖರ್ಗೆ: ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಲೋಕಸಭೆಯ ಪ್ರತಿ ಪಕ್ಷದ ನಾಯಕ ರಾಹುಲ್ ಗಾಂಧಿ ಗುರುವಾರ ರಾತ್ರಿ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿವಾಸಕ್ಕೆ ಭೇಟಿ ನೀಡಿ ನಮನ ಸಲ್ಲಿಸಿದರು.

2004 ರಿಂದ 2014 ರವರೆಗೆ ಎರಡು ಬಾರಿ ಮಾಜಿ ಪ್ರಧಾನಿಯಾಗಿದ್ದ ಸಿಂಗ್ ಅವರು ದೆಹಲಿಯ ಏಮ್ಸ್‌ನಲ್ಲಿ ನಿಧನರಾದರು. ಖರ್ಗೆ ಮತ್ತು ರಾಹುಲ್ ಗಾಂಧಿ ಇಬ್ಬರೂ ಸಿಡಬ್ಲ್ಯೂಸಿ ಸಭೆಯಲ್ಲಿ ಭಾಗವಹಿಸಲು ಬೆಳಗಾವಿಯಲ್ಲಿದ್ದರು. ವಿಷಯ ತಿಳಿಯುತ್ತಿದ್ದಂತೆ ನವದೆಹಲಿಗೆ ಧಾವಿಸಿ ಬಂದು ಅಗಲಿದ ಚೇತನಕ್ಕೆ ನಮನ ಸಲ್ಲಿಕೆ ಮಾಡಿ ಸಂತಾಪ ಸೂಚಿಸಿದರು. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಪಾರ್ಥಿವ ಶರೀರವನ್ನು ಅವರ ಮನೆಗೆ ತರಲಾಗಿದ್ದು, ಸಾರ್ವಜನಿಕರ ದರ್ಶನಕ್ಕೆ ಇಡಲಾಗಿದೆ.

ಮನಮೋಹನ್ ಸಿಂಗ್ ಅವರು 1991–96ರ ಅವಧಿಯಲ್ಲಿ ಮಾಜಿ ಪ್ರಧಾನಿ ಪಿ.ವಿ.ನರಸಿಂಹರಾವ್ ಅವರ ನೇತೃತ್ವದ ಸರ್ಕಾರದಲ್ಲಿ ಹಣಕಾಸು ಸಚಿವರಾಗಿ ಕಾರ್ಯನಿರ್ವಹಿಸಿ ಮೆಚ್ಚುಗೆ ಗಳಿಸಿದ್ದರು. ದೇಶದ ಆರ್ಥಿಕತೆಯಲ್ಲಿ ವ್ಯಾಪಕ ಸುಧಾರಣೆಗಳನ್ನು ತಂದಿದ್ದರು. ಕಾಂಗ್ರೆಸ್ ನೇತೃತ್ವದಲ್ಲಿ 2004ರಿಂದ 2014ರ ವರೆಗಿನ ಯುಪಿಎ ಸರ್ಕಾರದ ಎರಡು ಅವಧಿಯಲ್ಲಿ ಪ್ರಧಾನ ಮಂತ್ರಿಯಾಗಿದ್ದರು. ಬಳಿಕ ರಾಜ್ಯಸಭೆಗೆ ಆಯ್ಕೆಯಾಗಿದ್ದ ಅವರು, ಈ ವರ್ಷದ ಏಪ್ರಿಲ್‌ನಲ್ಲಿ ರಾಜಕೀಯದಿಂದ ನಿವೃತ್ತಿ ಹೊಂದಿದ್ದರು.



ಮನಮೋಹನ್ ಸಿಂಗ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅವರು ಭೇಟಿ ಮಾಡಿದ ಕ್ಷಣ.



ಮನಮೋಹನ್ ಸಿಂಗ್ ಜತೆ ಸೋನಿಯಾ ಗಾಂಧಿ



ಮಗಳು ಉಪಿಂದರ್ ಸಿಂಗ್ (ಆರ್) ಮತ್ತು ಅವರ ಪತ್ನಿ ಗುರುಶರಣ್ ಕೌರ್ ಜತೆ ಮನಮೋಹನ್ ಸಿಂಗ್



ಮನಮೋಹನ್ ಸಿಂಗ್ ಅವರ ಮೊದಲ ಐದು ವರ್ಷಗಳ ಅವಧಿಯಲ್ಲಿ ಅಮೆರಿಕದೊಂದಿಗೆ ಹೆಗ್ಗುರುತು ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ಭಾರತವನ್ನು ಪರಮಾಣು ಪ್ರತ್ಯೇಕತೆಯಿಂದ ಹೊರತರುವುದು ಅತಿದೊಡ್ಡ ವಿಜಯವಾಗಿದೆ.



ರಾಹುಲ್ ಗಾಂಧಿ, ಕಾಂಗ್ರೆಸ್ ಪಕ್ಷದ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನವದೆಹಲಿಯಲ್ಲಿ ದಸರಾ ಹಬ್ಬದ ಆಚರಣೆಯಲ್ಲಿದ ಕ್ಷಣ



ಮನಮೋಹನ್ ಸಿಂಗ್ ವಾಷಿಂಗ್ಟನ್, ಶ್ವೇತಭವನದ ಓವಲ್ ಕಚೇರಿಯಲ್ಲಿ ಬರಾಕ್ ಒಬಾಮಾ ಅವರೊಂದಿಗೆ ಮಾತನಾಡುತ್ತಿರುವ ದೃಶ್ಯ.

# ಶೋಕ ಸಾಗರದಲ್ಲಿ ಮಿಂದೆದ್ದ ಸ್ಯಾಂಡಲ್‌ವುಡ್


**ಸ್ಯಾಂಡಲ್‌ವುಡ್ 2024ರಲ್ಲಿ ಹಲವು ಏಳು-ಬೀಳುಗಳನ್ನು ಕಂಡಿದೆ. ಈ 12 ತಿಂಗಳ ಪಯಣದಲ್ಲಿ ದಿಗ್ಗಜ ನಿರ್ದೇಶಕ, ಕಲಾವಿದರನ್ನು ಕಳೆದುಕೊಂಡಿದೆ. ಹೆಸರಾಂತ ನಟ-ನಟಿಯರು ಒಂದಿಲ್ಲೊಂದು ಗಾಸಿಪ್, ಸೋಲು-ಗೆಲುವು, ಕಷ್ಟ-ಕಾರ್ಪಣ್ಯಗಳನ್ನು ಎದುರಿಸಿರುವ ವರ್ಷ ಇದಾಗಿದೆ.**

ಸ್ಯಾಂಡಲ್‌ವುಡ್‌ನ 2024 ವರ್ಷವನ್ನು ಶಿವರಾಮ್ ಎಂಬ ನಟನ ಸಾವಿನದಿಂದ ಆರಂಭವಾಗಿದೆ. ಕಿಚ್ಚ ಸುದೀಪ್ ನಟನೆಯ 'ಮ್ಯಾಕ್ಸ್' ಚಿತ್ರ ಹಾಗೂ ರಿಯಲ್ ಸ್ಟಾರ್ ಉಪ್ಪೇಂದ್ರ ಅಭಿನಯದ ಯುಐ ತೆರೆಕೊಂಡು ಅಭಿಮಾನಿಗಳಿಂದ ಮೆಚ್ಚಿಗೆ ಗಳಿಸಿದೆ.

**ನಿರ್ದೇಶಕ-ನಟ ದ್ವಾರಕೀಶ್:** ನಟ-ನಿರ್ದೇಶಕ, ನಿರ್ಮಾಪಕ ದ್ವಾರಕೀಶ್ ಏಪ್ರಿಲ್ 16ರಂದು ನಿಧನರಾದರು. ಅವರನ್ನು ಇಡೀ ಕುರುನಾಡು ಪ್ರಚಂಡ ಕುಳ್ಳ ಎಂದು ಕರೆಯುತ್ತಿತ್ತು. ಇವರು ಚಂದನವನಕ್ಕೆ ಕೊಟ್ಟ ಕೊಡುಗೆ ಅಪಾರ. 1964ರಲ್ಲಿ 'ವೀರ ಸಂಕಲ್ಪ ಚಿತ್ರದ ಮೂಲಕ ಬಣ್ಣದ ಲೋಕ ಪಯಣ ಆರಂಭಿಸಿದ್ದರು. ದ್ವಾರಕೀಶ್ ಹಾಸ್ಯ ಪಾತ್ರಗಳಿಗೆ ಹೆಸರಾ ಗಿದ್ದರು. ಅವರ ಗರಡಿ ಯಲ್ಲಿ 'ಮೇಯರ್ ಮುತ್ತಣ್ಣ', 'ಕುಳ್ಳ ಏಜೆಂಟ್ 000' ಸೇರಿದಂತೆ ಹಲವು ಚಲನಚಿತ್ರಗಳಲ್ಲಿ ತೆರೆ ಕಂಡಿತ್ತು. ನಿರ್ದೇಶಕರಾಗಿ ಅವರು ನೀ ಬರೆದು ಕಾಣದ ಕಡಲಿಗೆ ಮತ್ತು ಡ್ಯಾನ್ಸ್ ರಾಜ ಡ್ಯಾನ್ಸ್‌ನಂತಹ ಚಿತ್ರಗಳನ್ನು ನಿರ್ದೇಶಿಸಿದರು.



**ನಟ ಕೆ.ಶಿವರಾಂ:** ನಟ ಕೆ. ಶಿವರಾಂ ಫೆಬ್ರವರಿ 29ರಂದು ಹೃದಯಾಘಾತದಿಂದ ನಿಧನರಾದರು. 1953ರಲ್ಲಿ ರಾಮನಗರ ಜಿಲ್ಲೆಯ ಬಿಡದಿ ಸಮೀಪದ ಹಳ್ಳಿಯಲ್ಲಿ ಜನಿಸಿದ ಅವರು 1985ರಲ್ಲಿ ಕೆಎಎಸ್ ಅಧಿಕಾರಿಯಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು, ನಂತರ ಐಎಎಸ್ ಪರೀಕ್ಷೆಯನ್ನು ಕನ್ನಡದಲ್ಲಿ ಮೊಟ್ಟ ಮೊದಲ ಬಾರಿಗೆ ಬರೆದು ಅಧಿಕಾರಿಯಾಗಿದ್ದರು. ಶಿವರಾಮ 1993ರಲ್ಲಿ ನಾಗತಿಹಳ್ಳಿ ಚಂದ್ರಶೇಖರ್ ನಿರ್ದೇಶನದ ಬಾ ನಲ್ಲೆ ಮಧುಚಂದ್ರಕೆ ಚಿತ್ರದ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು.



ಬಳಿಕ ವಸಂತ ಕಾವ್ಯ, ಖಳನಾಯಕ, ಸಾಂಗ್ಲಿಯನ್-3, ಮತ್ತು ಪ್ರೀತಿಗಾಗಿ ಆಟ ಮುಂತಾದ ಚಿತ್ರಗಳಲ್ಲಿ ನಟಿಸಿದರು.

**ನಿರ್ದೇಶಕ ದೀಪಕ್ ಅರಸ್:**

ನಟಿ ಅಮೂಲ್ಯ ಅವರ ಸಹೋದರ, ನಿರ್ದೇಶಕ ದೀಪಕ್ ಅರಸ್ ಅವರು ಮೂತ್ರಪಿಂಡ ವೈಫಲ್ಯದಿಂದ ಅಕ್ಟೋಬರ್ 17 ರಂದು ನಿಧನರಾದರು.

ಮಾನಸಾಲಜಿ (2011) ಮತ್ತು ಸಕ್ಕರೆ ಕಾರ್ಖಾನೆ (2023) ಚಿತ್ರಗಳನ್ನು ನಿರ್ದೇಶಿಸಿದ್ದರು.

**ನಿರ್ದೇಶಕ ಗುರುಪ್ರಸಾದ್:**



ವಿಮರ್ಶಾತ್ಮಕವಾಗಿ ಮೆಚ್ಚುಗೆ ಗಳಿಸಿದ 'ಮಠ' ಮತ್ತು 'ಎದ್ದೇಳು ಮಂಜುನಾಥ' ಚಿತ್ರಗಳಿಗೆ ಹೆಸರು ವಾಸಿಯಾದ ನಿರ್ದೇಶಕ ಗುರು ಪ್ರಸಾದ್ ಆರ್ಥಿಕ ಸಂಕಷ್ಟದಿಂದಾಗಿ ನವೆಂಬರ್ 3ರಂದು ತಮ್ಮ ಜೀವನವನ್ನು ಕೊನೆಗೊಳಿಸಿದರು.

**ನಟಿ ಶೋಬಿತಾ ಶಿವಣ್ಣ:**

ಕಿರುತೆರೆ ನಟಿ ಶೋಬಿತಾ ಶಿವಣ್ಣ, ಬ್ರಹ್ಮಗಂಟು ಚಿತ್ರದಲ್ಲಿನ ಪಾತ್ರಕ್ಕಾಗಿ ಗುರುತಿಸಿಕೊಂಡರು, ನವೆಂಬರ್ 30ರಂದು ಆತ್ಮಹತ್ಯೆ ಮಾಡಿಕೊಂಡರು. ಅವರ ದುರಂತ ನಿರ್ಧಾರದ ಹಿಂದಿನ ಕಾರಣಗಳು ಇನ್ನೂ ಸ್ಪಷ್ಟವಾಗಿಲ್ಲ.

**ನಟಿ ಪವಿತ್ರಾ ಜಯರಾಮ್**



ಮಂಡ್ಯ ಜಿಲ್ಲೆಯವರಾದ ಜನಪ್ರಿಯ ಕಿರುತೆರೆ ನಟಿ ಪವಿತ್ರಾ ಜಯರಾಮ್ ಮೇ 11ರಂದು ಆಂಧ್ರಪ್ರದೇಶದ ಕರ್ನೂಲ್ ಬಳಿ ನಡೆದ ರಸ್ತೆ ಅಪಘಾತದಲ್ಲಿ ದುರಂತವಾಗಿ ಸಾವನ್ನಪ್ಪಿದರು. ತೆಲುಗು ಧಾರಾವಾಹಿ ತ್ರಿನಯನಿ ಮತ್ತು ಕನ್ನಡ ಶೋಗಳಾದ ರೋಬೋ ಫ್ಯಾಮಿಲಿ ಮತ್ತು ರಾಧಾ ರಮಣದಲ್ಲಿ ಅವರ ಪಾತ್ರವನ್ನು ಜನ ಮೆಚ್ಚಿಕೊಂಡಿದ್ದರು. ಅವರ ಅಕಾಲಿಕ ನಿಧನವು ಅಭಿಮಾನಿಗಳಿಗೆ ಆಘಾತ ವನ್ನುಂಟು ಮಾಡಿದೆ.

**ನಟ ಟಿ.ತಿಮ್ಮಯ್ಯ**

ಚಲಿಸುವ ಮೋಡಗಳು, ಬಂಧನ ಮತ್ತು ಕುರುಕ್ಷೇತ್ರದಂತಹ ಚಲನಚಿತ್ರಗಳಲ್ಲಿನ ಪಾತ್ರಗಳಿಗೆ ಹೆಸರಾದ ಹಿರಿಯ ನಟ ಟಿ.ತಿಮ್ಮಯ್ಯ ಅವರು ವಯೋಸಹಜ ಕಾಯಿಲೆಗಳಿಂದ ನವೆಂಬರ್ 16 ರಂದು ನಿಧನರಾದರು. ಡಾ.ರಾಜ್‌ಕುಮಾರ್ ಮತ್ತು ವಿಷ್ಣುವರ್ಧನ್ ಅವರಂತಹ ದಂತಕಥೆಗಳೊಂದಿಗೆ ತೆರೆ ಹಂಚಿಕೊಂಡರು.

**ನಿರ್ದೇಶಕ ಚಿ. ದತ್ತರಾಜ್:**

ನಿರ್ದೇಶಕ ಚಿ.ಕೇರಳದ ಸಿಂಹ ಮತ್ತು ಶ್ರುತಿ ಸೇರಿದಾಗ ಚಿತ್ರಗಳಿಗೆ ಹೆಸರಾದ ದತ್ತರಾಜ್ ಅವರು ಅಕ್ಟೋಬರ್ 14 ರಂದು ನಿಧನರಾದರು. ಕನ್ನಡ ಚಿತ್ರರಂಗಕ್ಕೆ ವಿಶೇಷವಾಗಿ ಡಾ. ರಾಜ್‌ಕುಮಾರ್ ಮತ್ತು ಶಿವರಾಜ್‌ಕುಮಾರ್ ಅವರ ಕೊಡುಗೆಗಳು ಶಾಶ್ವತವಾಗಿ ಉಳಿದಿವೆ.

**ನಟಿ ಅಪರ್ಣಾ**



ಶ್ವಾಸಕೋಶದ ಕ್ಯಾನ್ಸರ್‌ನಿಂದಾಗಿ ಜುಲೈ 11ರಂದು ಅಪರ್ಣಾ ಹಠಾತ್ ನಿಧನವು ಉದ್ಯಮವನ್ನು ದುಃಖಕ್ಕೆ ತಳ್ಳಿತು. ಕನ್ನಡ ದೂರದರ್ಶನದಲ್ಲಿ ಹಾಗೂ ಸರ್ಕಾರಿ ಕಾರ್ಯಕ್ರಮದಲ್ಲಿ ಅವರ ನಿರೂಪಣೆ ಯನ್ನು ಜನ ಮೆಚ್ಚಿಕೊಂಡಿದ್ದರು.

ಇನ್ನು ನಮ್ಮ ಮೆಟ್ರೋದಲ್ಲೂ ಅವರ ಧ್ವನಿ (ಮುಂದಿನ ನಿಲ್ದಾಣ) ಇಂದಿಗೂ ಕೇಳಿಬರುತ್ತಿದೆ. 1990ರ ದಶಕದಲ್ಲಿ ನಿರೂಪಕಿ ಮತ್ತು ಆರ್‌ಜೆ ಆಗಿ ತಮ್ಮ ವೃತ್ತಿ ಜೀವನವನ್ನು ಪ್ರಾರಂಭಿಸಿದರು,

'ಮಸಣದ ಹೂವು' ಚಿತ್ರದಲ್ಲಿ ಅಭಿನಯಿಸಿದ್ದರು. ಖಾಸಗಿ ವಾಹಿನಿಯಲ್ಲಿ ಬರುತ್ತಿದ್ದ ಹಾಸ್ಯ ಕಾರ್ಯಕ್ರಮ ಮಜಾ ಟಾಕೀಸ್ (ಒನ್ ಅಂಡ್ ಒನ್ಲಿ ವರಲಕ್ಷ್ಮಿ) ಹೆಚ್ಚು ಜನಪ್ರಿಯಗಳಿಸಿತ್ತು.

**ದಾಸನ ಪಾಲಿನ ಕರಾಳ ವರ್ಷ**



ಚಾಲೆಂಜಿಂಗ್ ಸ್ಟಾರ್ ದರ್ಶನ್ ಪಾಲಿಗೆ 2024 ಕರಾಳ ವರ್ಷವಾಗಿದೆ. 2023ರ ಕೊನೆಗೆ ದರ್ಶನ್ ನಟಿಸಿದ 'ಕಾಟೇರ' ಸಿನಿಮಾ ಬಿಡುಗಡೆ ಆಗಿತ್ತು. ಸಿನಿಮಾ ಬ್ಲಾಕ್‌ಬಸ್ಟರ್ ಹಿಟ್ ಆಗಿತ್ತು. ಡಿಸೆಂಬರ್ 29ಕ್ಕೆ ತೆರೆಗಪ್ಪಳಿಸಿದ ಸಿನಿಮಾ ಈ ವರ್ಷ ಜನವರಿಯಲ್ಲಿ ಭರ್ಜರಿ ಸದ್ದು ಮಾಡಿತ್ತು. ಸಿನಿಮಾ ಭರ್ಜರಿ ಕಲೆಕ್ಷನ್ ಮಾಡಿ ಹುಬ್ಬೇರಿಸಿತ್ತು. ಅಲ್ಲಿಂದ ಮುಂದೆ ದರ್ಶನ್‌ಗೆ ಎದುರಾದ ಸಂಕಷ್ಟಗಳು ಒಂದೆರಡಲ್ಲ. ಕೇಸ್‌ಗಳ ಮೇಲೆ ಕೇಸ್‌ಗಳು ಬಿದ್ದವು. ಹಳೇ ಪ್ರಕರಣಗಳಿಗೆ ಜೀವ ಬಂತು. ಬರೀ ಆರೋಪಗಳಲ್ಲೇ 2024 ವರ್ಷವನ್ನು ದರ್ಶನ್ ಉಸಿರಾಡಿಬಿಟ್ಟರು. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ವಾಸ ಅನುಭವಿ ಸುವಂತಾಯಿತು. ಇನ್ನು ಪ್ರಕರಣದಿಂದ ಕಂಪ್ಲೀಟ್ ರಿಲೀಫ್ ಸಿಕ್ಕಿಲ್ಲ. ಒಂದೇ ವೇಳೆ ಪೊಲೀಸರು ಸುಪ್ರೀಂಕೋರ್ಟ್‌ಗೆ ಅರ್ಜಿ ಹಾಕಿದರೆ ಮತ್ತೆ ದರ್ಶನ್‌ಗೆ ಎದುರಾಗಬಹುದು ಎಂಬ ಮಾತುಗಳು ಕೇಳಿಬಂದಿದೆ.


**ಹೇಮಾ ಸಮಿತಿ ವರದಿಯ ಪ್ರತಿಧ್ವನಿ**

ಕೇರಳದ ಹೇಮಾ ಕಮಿಟಿ ರಿಪೋರ್ಟ್ ದೇಶಾದ್ಯಂತ ಚಲನಚಿತ್ರ ಲೋಕದಲ್ಲಿ ದೊಡ್ಡ ಮಟ್ಟದಲ್ಲಿಯೇ ಸುದ್ದಿಯಾಗಿತ್ತು. ಟಾಲಿವುಡ್, ತಮಿಳು, ಸ್ಯಾಂಡಲ್‌ವುಡ್‌ನಲ್ಲಿಯೂ ಈ ಹೇಮಾ ಕಮಿಟಿ ವರದಿಯ ಪ್ರತಿಧ್ವನಿ ಕೇಳಿ ಬರುತ್ತಲೇ ಇತ್ತು. ಕೇರಳ ಹೇಮಾ ಕಮಿಟಿ ಮಾದರಿ ಕನ್ನಡ ಚಿತ್ರರಂಗದಲ್ಲಿ ಕಮಿಟಿಗೆ ಮನವಿ ಮಾಡಲಾಗಿತ್ತು. ಚಿತ್ರರಂಗದಲ್ಲಿ ಲೈಂಗಿಕ ಶೋಷಣೆ ಆಗುತ್ತಿರುವ ಕಾರಣ ಸ್ಯಾಂಡಲ್‌ವುಡ್ ಫಿಲ್ಮ್ ಚೇಂಬರ್‌ನಲ್ಲಿ ಮಹತ್ವ ಸಭೆ ನಡೆದಿತ್ತು.

ಮಹಿಳಾ ಆಯೋಗದ ಪತ್ರದ ಬೆನ್ನಲ್ಲೇ ಚೇಂಬರ್ ಸಭೆಗೆ ಮುಂದಾಗಿತ್ತು. ಆದರೆ ಸಭೆಯ ದಿನದಂದು ನಿರ್ಮಾಪಕರು ಹಾಗೂ ಮಹಿಳಾ ಆಯೋಗದ ನಡುವೆ ಮಾತಿನ ಚಕಮಕಿ ನಡೆದಿತ್ತು. ಇದಿಗ ಮತ್ತೆ ಹೇಮಾ ಮಾದರಿ ಕಮಿಟಿ ರಚನೆಗೆ ಒತ್ತಡ ಹೆಚ್ಚಾಗಿದೆ.


**ಶಿವರಾಜ್‌ಕುಮಾರ್‌ಗೆ ಯಶಸ್ವಿ ಶಸ್ತ್ರಚಿಕಿತ್ಸೆ**

ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅವರಿಗೆ ಅಮೆರಿಕದಲ್ಲಿ ಡಾ.ಮುರುಗೇಶ್ ಮನೋಹರನ್ ಮಾರ್ಗದರ್ಶನಲ್ಲಿ ಯಶಸ್ವಿ ಶಸ್ತ್ರ ಚಿಕಿತ್ಸೆ ಮಾಡಲಾಗಿದೆ. ಶಿವರಾಜ ಕುಮಾರ್ ಕಳೆದ ಬುಧವಾರ ಅಮೆರಿಕಕ್ಕೆ ಪ್ರಯಾಣ ಬೆಳೆಸಿದ್ದರು.



ಫ್ಲೋರಿಡಾದ ಮಿಯಾಮಿಯಲ್ಲಿ ಮಂಗಳವಾರ ರಾತ್ರಿ ಶಸ್ತ್ರಚಿಕಿತ್ಸೆ ನಡೆದಿದೆ. ಕೆಲ ದಿನಗಳ ಕಾಲ ವಿಶ್ರಾಂತಿ ಪಡೆದು ಜನವರಿ ಅಂತ್ಯದ ವೇಳೆಗೆ ಸ್ವದೇಶಕ್ಕೆ ವಾಪಸಾಗಲಿದ್ದಾರೆ. ಶಿವರಾಜ್ಕುಮಾರ್ ಯುಎಸ್ ಪ್ರಯಾಣದ ಹಿನ್ನೆಲೆಯಲ್ಲಿ ಅವರ ನಿವಾಸಕ್ಕೆ ಚಿತ್ರರಂಗ ಸೇರಿದಂತೆ ಸಿನಿಮಾ, ರಾಜ ಕೀಯ ಸೇರಿ ವಿವಿಧ ಕ್ಷೇತ್ರಗಳ ಗಣ್ಯರು ಭೇಟಿ ಕೊಟ್ಟು ಗುಣಮಟ್ಟದ ಸಮಯ ಕಳೆದಿದ್ದರು. ಅಲ್ಲದೆ, ಶಿವಣ್ಣ ನಿಗೆ ಶಸ್ತ್ರಚಿಕಿತ್ಸೆ ಯಶಸ್ವಿ ಯಾಗಲೆಂದು ಪ್ರಾರ್ಥಿಸಿ ಅಭಿಮಾನಿ ಗಳು ರಾಜ್ಯದ ಹಲವೆಡೆ ದೇವಸ್ಥಾನ ಚಗಳಲ್ಲಿ ಉರುಳು ಸೇವೆ, ಕೇಶ ಮುಂಡನೆ ಹಾಗೂ ಮಹಾ ಮೃತ್ಯುಂಜಯ ಹೋಮ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನೆರವೇರಿಸಿದ್ದರು.

# ಕೂಡಿ ಬಂದ ಕಂಕಣ



## ತರುಣ್ ಸುಧೀರ್-ಸೋನಲ್ ಮೊಂಥೆರೋ

ಚಂದನವನದಲ್ಲಿ ನಟನಾಗಿ, ನಿರ್ದೇಶಕನಾಗಿ ಕನ್ನಡಿಗರ ಮನಗೆದ್ದಿರುವ ತರುಣ್ ಸುಧೀರ್ ಹಾಗೂ ನಟಿ ಸೋನಲ್ ಮೊಂಥೆರೋ ಆಗಸ್ಟ್ 11ರಂದು ಪ್ರೀತಿಸಿ ಮದುವೆಯಾಗಿದ್ದರು. ಇವರಿಬ್ಬರಿಗೂ ದರ್ಶನ್ ನಟನೆಯ ರಾಬರ್ಟ್ ಸಿನಿಮಾ ಚಿತ್ರೀಕರಣದ ಸಂದರ್ಭ ಪ್ರೀತಿಯಾಗಿತ್ತಂತೆ. ರಾಬರ್ಟ್ ಸಿನಿಮಾವನ್ನು ತರುಣ್ ನಿರ್ದೇಶನ ಮಾಡಿದ್ದರು.

ಈ ವರ್ಷ ಸ್ಯಾಂಡಲ್‌ವುಡ್‌ನಲ್ಲಿ ಗಟ್ಟಿಮೇಳ ಜೋರಾಗಿ ಕೇಳಿಬಂದಿದೆ. ನಟ-ನಟಿಯರು ತಮ್ಮ ನೆಚ್ಚಿನ ಹುಡುಗ/ಹುಡುಗಿಯೊಂದಿಗೆ ಸಪ್ತಪದಿ ತುಳಿದು ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ.

**ಸಿರಿ-ಪ್ರಭಾಕರ್**

ಖ್ಯಾತ ಕಿರುತೆರೆ ನಟಿ ಹಾಗೂ ಬಿಗ್‌ಬಾಸ್ ಸೀಸನ್ 10 ಖ್ಯಾತಿಯ ಸಿರಿ ಅವರು ಜೂನ್ 13ರಂದು ಚಿಕ್ಕಬಳ್ಳಾಪುರದ ನಂದಿ ಗ್ರಾಮದಲ್ಲಿ ಉದ್ಯಮಿ ಪ್ರಭಾಕರ್ ಎಂಬುವವರೊಂದಿಗೆ ಸರಳವಾಗಿ ಮದುವೆಯಾಗಿದ್ದರು. ಆನಂತರ ಬೆಂಗಳೂರಿನಲ್ಲಿ ಆತ್ಮೀಯರಿಗೆ ಪಾರ್ಟಿ ನೀಡಿದ್ದರು. ಕಳೆದ 20 ವರ್ಷಗಳಿಂದ ಚಿತ್ರರಂಗದಲ್ಲಿರುವ ಸಿರಿ ಸಾಕಷ್ಟು ಸೂಪರ್ ಹಿಟ್ ಸೀರಿಯಲ್‌ಗಳಲ್ಲಿ ನಟಿಸಿದ್ದಾರೆ.

**ಕೌಸ್ತುಭ ಮಣಿ-ಸಿದ್ಧಾಂತ್ ಸತೀಶ್**

ನನ್ನರಸಿ ಸೀರಿಯಲ್ ಖ್ಯಾತಿ ಕೌಸ್ತುಭ ಮಣಿ ಅವರು ಏಪ್ರಿಲ್ 26ರಂದು ಸಿದ್ಧಾಂತ್ ಸತೀಶ್ ಎಂಬುವವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು. ಕೌಸ್ತುಭ ಸದ್ಯ ಸ್ಯಾಂಡಲ್‌ವುಡ್‌ಗೂ ಕಾಲಿಟ್ಟಿದ್ದು, ಅರ್ಜುನ್ ಜನ್ಯ ನಿರ್ದೇಶನದ '45' ಸಿನಿಮಾದಲ್ಲಿ ರಾಜ್ ಬಿ ಶೆಟ್ಟಿಗೆ ನಾಯಕಿಯಾಗಿ ನಟಿಸುತ್ತಿದ್ದಾರೆ.

ಮಾನ್ವಿತಾ ಕಾಮತ್-ಅರುಣ್

ನಟಿ ಮಾನ್ವಿತಾ ಕಾಮತ್ ಮೇ 1ರಂದು ಚಿಕ್ಕಮಗಳೂರಿನ ಕಳಸದಲ್ಲಿರುವ 500 ವರ್ಷ ಹಳೆಯದಾದ ವೆಂಕಟರಮಣ ದೇವಸ್ಥಾನದಲ್ಲಿ ಮೈಸೂರು ಮೂಲದ ಮ್ಯೂಸಿಕ್ ಪ್ರೊಡ್ಯೂಸರ್ ಅರುಣ್ ಎಂಬುವವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

**ಮಾನಸ-ಮನೋಹರ್**

ಜೊತೆ ಜೊತೆಯಲಿ ಸೀರಿಯಲ್‌ನ ಮೀರಾ ಪಾತ್ರದ ಮೂಲಕ ಜನಪ್ರಿಯತೆ ಗಳಿಸಿದ ಮಾನಸ ಮನೋಹರ್ ನವೆಂಬರ್ 7ರಂದು ಫುಟ್‌ಬಾಲ್ ಪ್ಲೇಯರ್ ಪ್ರೀತಂಚಂದ್ರ ಅವರನ್ನು ಮದುವೆಯಾದರು.



**ಚಂದನಾ-ರಾಘವೇಂದ್ರ**

ನಟಿ ಚಂದನಾ ರಾಘವೇಂದ್ರ ಅವರು ಆಗಸ್ಟ್‌ನಲ್ಲಿ ಸಂಕೇತ್ ಚಂಪ್ಲಿ ಎಂಬುವವರನ್ನು ಮದುವೆಯಾದರು. ಚಂದನಾ ರಾಜು ಕನ್ನಡ ಮೀಡಿಯಂ, ಮೀರಾಳ ಕೃಷ್ಣ, ರಾಮಾಚಾರಿ 2.0, ಭಗೀರಥ ಮುಂತಾದ ಸಿನಿಮಾಗಳಲ್ಲಿಯೂ ಅಭಿನಯಿಸಿದ್ದಾರೆ.


**ಅಭಿಷೇಕ್ ಶೆಟ್ಟಿ-ಸಾಕ್ಷಾ ಶೆಟ್ಟಿ**

ಸ್ಯಾಂಡಲ್‌ವುಡ್‌ನ ಖ್ಯಾತ ನಿರ್ದೇಶಕ ಮತ್ತು ನಟ ಅಭಿಷೇಕ್ ಶೆಟ್ಟಿ ನವೆಂಬರ್ 28ರಂದು ಕುಂದಾಪುರದಲ್ಲಿ ಸಾಕ್ಷಾ ಶೆಟ್ಟಿ ಎಂಬುವವರನ್ನು ಕೈಹಿಡಿದಿದ್ದಾರೆ. ಅಭಿಷೇಕ್ ಶೆಟ್ಟಿ ನಮ್ ಗಣಿ ಬಿ.ಕಾಮ್ ಪಾಸ್, ಗಜಾನನ ಆಂಡ್ ಗ್ಯಾಂಗ್, ಆರಾಮ್ ಅರವಿಂದ ಸ್ವಾಮಿ ಮುಂತಾದ ಸಿನಿಮಾಗಳನ್ನು ನಿರ್ದೇಶನ ಮಾಡಿದ್ದಾರೆ.

**ನಾನೊಂದು ತೀರ ನೀನೊಂದು ತೀರ**

ಈ ವರ್ಷ ಸ್ಯಾಂಡಲ್‌ವುಡ್‌ನಲ್ಲಿ ಮದುವೆ ಸಂಭ್ರಮದ ನಡುವೆಯೇ ಕೆಲ ಜೋಡಿಗಳು ಪರಸ್ಪರ ಮುಸಿಕೊಂಡು ನಾನೊಂದು ತೀರ ನೀನೊಂದು ತೀರ ಎಂದು ಒಂದೊಂದು ದಿಕ್ಕಿನಲ್ಲಿ ಮುಖಮಾಡಿದ್ದಾರೆ. ಸ್ಯಾಂಡಲ್‌ವುಡ್ ಕ್ಯೂಟ್ ಕಪಲ್ ಎಂದು ಕರೆಸಿಕೊಂಡಿದ್ದ ಚಂದನ್ ಶೆಟ್ಟಿ ನಿವೇದಿತಾ ಗೌಡ ದಂಪತಿ ಕ್ಷುಲ್ಲಕ ಕಾರಣಕ್ಕೆ ವಿಚ್ಛೇದನ ಪಡೆದುಕೊಂಡಿದ್ದಾರೆ. ಸ್ಯಾಂಡಲ್‌ವುಡ್‌ನ ದೊಡ್ಮನೆಯ ಯುವರಾಜ್‌ಕುಮಾರ್ ಹಾಗೂ ಶ್ರೀದೇವಿ ವಿಚ್ಛೇದನ ಪ್ರಕರಣ ಕೋರ್ಟ್‌ನಲ್ಲಿ ನಡೆಯುತ್ತಿದೆ.

## ಚಂದನಾ ಅನಂತಕೃಷ್ಣ-ಪ್ರತ್ಯಕ್ಷ್



ಜೀ ಕನ್ನಡ ವಾಹಿನಿಯಲ್ಲಿ ಪ್ರಸಾರವಾಗುತ್ತಿರುವ 'ಲಕ್ಷ್ಮಿ ನಿವಾಸ' ಸೀರಿಯಲ್‌ನಲ್ಲಿ ಜಾಹ್ನವಿ ಪಾತ್ರದ ಮೂಲಕ ಹೆಚ್ಚು ಜನಪ್ರಿಯತೆ ಗಳಿಸಿರುವ ನಟಿ ಚಂದನಾ ಅನಂತಕೃಷ್ಣ ನವೆಂಬರ್ 28ರಂದು ಪ್ರತ್ಯಕ್ಷ್ ಎಂಬುವವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಪ್ರತ್ಯಕ್ಷ್ ಕನ್ನಡ ಚಿತ್ರರಂಗದ ದಿವಂಗತ ನಟ ಉದಯ್ ಹುತ್ತಿನಗದ್ದೆ ಹಾಗೂ ಹಿರಿಯ ನಟಿ ಲಲಿತಾಂಜಲಿ ಅವರ ಪುತ್ರ. ಹೂಮಳೆ, ರಾಜಾರಾಣಿ ಧಾರಾವಾಹಿಗಳಲ್ಲಿ ನಟಿಸಿದ್ದ ಚಂದನಾ, ಬಗ್‌ಬಾಸ್ ಸೀಸನ್ 7ರಲ್ಲೂ ಭಾಗವಹಿಸಿದ್ದರು.



## ದೀಪಿಕಾ ದಾಸ್-ದೀಪಕ್

ನಾಗಿಣಿ ಧಾರಾವಾಹಿ ಖ್ಯಾತಿಯ ನಟಿ ದೀಪಿಕಾ ದಾಸ್ ಮಾರ್ಚ್ 1ರಂದು ದುಬೈನಲ್ಲಿ ನೆಲೆಸಿರುವ ಕರ್ನಾಟಕ ಮೂಲದ ಉದ್ಯಮಿ ದೀಪಕ್ ಎಂಬುವವರನ್ನು ಗೋವಾದ ಬೀಚ್ ಪಕ್ಕದಲ್ಲಿ ಡೆಸ್ಟಿನೇಷನ್ ವೆಡ್ಡಿಂಗ್ ಮಾಡಿಕೊಂಡಿದ್ದರು. ಆನಂತರ ಬೆಂಗಳೂರಿನಲ್ಲಿ ಅದ್ದೂರಿಯಾಗಿ ರಿಸೆಪ್ಷನ್ ಮಾಡಿಕೊಂಡಿದ್ದರು.



## ಮಂಜು ಪಾವಗಡ-ನಂದಿನಿ

ಬಿಗ್‌ಬಾಸ್ ಕನ್ನಡ ಸೀಸನ್ 8ರ ವಿನ್ನರ್, ಹಾಸ್ಯನಟ ಮಂಜು ಪಾವಗಡ ನವೆಂಬರ್ 13ರಂದು ನಂದಿನಿ ಎಂಬುವವರನ್ನು ಹುಟ್ಟೂರಾದ ಪಾವಗಡದಲ್ಲೇ ಮದುವೆಯಾದರು. ಮಜಾ ಭಾರತ, ಗಿಚ್ಚಿ ಗಿಲಿಗಿಲಿ ಕಾಮಿಡಿ ಶೋ ಮೂಲಕ ಜನಪ್ರಿಯರಾದ ಮಂಜು ಪಾವಗಡ, ಸದ್ಯ ಸಿನಿಮಾ & ಸೀರಿಯಲ್‌ಗಳಲ್ಲೂ ನಟಿಸುತ್ತಿದ್ದಾರೆ.

## ನಯನಾ-ಶಿವಣ್ಣ

ಗಿಣಿರಾಮ ಸೀರಿಯಲ್ ಖ್ಯಾತಿಯ ನಟಿ ನಯನಾ ನಾಗರಾಜ್ ಅವರು ಜೂನ್ 17ರಂದು ತಮ್ಮ ಬಹುಕಾಲದ ಗೆಳೆಯ ಸುಹಾಸ್ ಶಿವಣ್ಣ ಎಂಬುವವರ ಜೊತೆಗೆ ಮದುವೆಯಾಗಿದ್ದರು. ಈ ಜೋಡಿ ಹತ್ತು ವವರ್ಷಗಳಿಂದ ಪ್ರೀತಿ ಮಾಡುತ್ತಿತ್ತು. ನಯನಾ ನಟನೆ ಮಾತ್ರವಲ್ಲದೇ ಹಾಡು, ನೃತ್ಯ, ನಿರೂಪಣೆ ಎಲ್ಲರಲ್ಲೂ ಗುರುತಿಸಿಕೊಂಡಿದ್ದರು.



ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-35 Email-mussanje2010@gmail.com, Phone: 9448074878